ಸಂಪುಟ : 13 Volume | ಸಂಚಿಕೆ : 195 Issue | ಪುಟಗಳು : 08 Pages | ಮಂಗಳವಾರ 16 ಸೆಪ್ಟೆಂಬರ್ 2025 | ₹2 | RNINO:KARKAN/2011/48371 | BDR/054/2026-20274 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**
" ನಕಾರಾತ್ಮಕ ಆಲೋಚನೆಗಳು ಮನುಷ್ಯನನ್ನು ಬಲಹೀನಗೊಳಿಸುತ್ತದೆ "
ಸ್ವಾಮಿ ವಿವೇಕಾನಂದ .

ಗುಂಡಾ ವರ್ತನೆ:ಕ್ರಮಕ್ಕೆ ಆಗ್ರಹ 2 | ಶಿಕ್ಷಕರು ಚಾರಿತ್ರ್ಯವಂತರಾಗಿರಬೇಕು 4 | ಹಾರ್ಟ್ ಲೈನ್ ಯೋಜನೆಗೆ ಚಾಲನೆ: 8

# ಸಂವಿಧಾನದ ರಕ್ಷಣೆ
## ಎಲ್ಲ ನಾಗರಿಕರ ಜವಾಬ್ದಾರಿ: ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಸೆ.15:ಸಂವಿಧಾನದರಕ್ಷಣೆ ಎಲ್ಲನಾಗರಿಕರಜವಾಬ್ದಾರಿಯಾಗಿದ್ದು, ಈ ಕರ್ತವ್ಯವನ್ನು ಎಲ್ಲರೂ ತಪ್ಪದೇ ನಿರ್ವಹಿಸಲೇಬೇಕು.ಪ್ರಜಾಪ್ರಭುತ್ವದ ರಕ್ಷಣೆಯಿಂದ ದೇಶದ ಜನರ ರಕ್ಷಣೆ ಸಾಧ್ಯ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.ವಿಧಾನಸೌಧದಲ್ಲಿ ನಡೆದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ದೇಶದಲ್ಲಿ ವಿವಿಧ ಜಾತಿಧರ್ಮಗಳ ವ್ಯವಸ್ಥೆಯಿದೆ.ಬಹುಸಂಸ್ಕೃತಿಯುಳ್ಳದೇಶದಲ್ಲಿ ವಿವಿಧತೆಯಲ್ಲಿಏಕತೆಯನ್ನುಕಾಪಾಡಲು ಪ್ರಜಾಪ್ರಭುತ್ವದವ್ಯವಸ್ಥೆಯನ್ನುತರಲಾಗಿದೆ. ಜಾತಿವ್ಯವಸ್ಥೆಯಿಂದಾಗಿ ಅಸಮಾನತೆ ಉಂಟಾಗಿದೆ. ಆದ್ದರಿಂದ ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನ ಜಾರಿಗೊಂಡ ಸಂದರ್ಭದಲ್ಲಿ ವೈರುಧ್ಯತೆಯಿರುವ ಸಮಾಜಕ್ಕೆ ನಾವು ಕಾಲಿಡುತ್ತಿದ್ದು, ಸಾಮಾಜಿಕ, ರಾಜಕೀಯ, ಆರ್ಥಿಕ, ಶೈಕ್ಷಣಿಕ ಅಸಮಾನತೆಗಳಿವೆ. ದೇಶದಲ್ಲಿಜನರಿಗೆಸಾಮಾಜಿಕ, ಶೈಕ್ಷಣಿಕ, ಆರ್ಥಿಕಸ್ವಾತಂತ್ರ್ಯ ಸಿಕ್ಕಾಗಮಾತ್ರ ಸ್ವಾತಂತ್ರ್ಯ ಯಶಸ್ವಿಯಾಗುತ್ತದೆ ಎಂದಿದ್ದರು.12ನೇ ಶತಮಾನದಲ್ಲಿ ಅನುಭವ ಮಂಟಪ ಸ್ಥಾಪಿಸಿ ಬಸವಣ್ಣನವರು ಪ್ರಜಾಪ್ರಭುತ್ವದಪರಿಕಲ್ಪನೆಗೆಜೀವತುಂಬಿದ್ದರು. ಅತ್ಯಂತತಳಸಮುದಾಯದವರಾದ ಅಲ್ಲಮಪ್ರಭು ಅವರನ್ನು ಅನುಭವ ಮಂಟಪದ ಅಧ್ಯಕ್ಷರಾಗಿಸಿದ್ದರು. ಇದರಲ್ಲಿ ಮಹಿಳೆಯರೂ ಸೇರಿದಂತೆ ಸಮಾಜದ ಎಲ್ಲ ವರ್ಗದವರೂ ಪ್ರಾತಿನಿಧ್ಯವನ್ನು ಹೊಂದಿದ್ದರು. ಯಾವ ಜಾಗದಲ್ಲಿ ಎಲ್ಲ ವರ್ಗದವರ ಅಭಿಪ್ರಾಯಕ್ಕೆ ಬೆಲೆ ದೊರಕುವುದೇ, ಅಲ್ಲಿ ಪ್ರಜಾಪ್ರಭುತ್ವವ್ಯವಸ್ಥೆ ಸ್ಥಾಪಿತವಾಗಿದೆ ಎಂದು ಹೇಳಬಹುದು ಎಂದರು. ಇಂದಿನ ಪ್ರಜಾಪ್ರಭುತ್ವ ದಿನಾಚರಣೆಯ ಘೋಷವಾಕ್ಯ ನನ್ನ ಮತ ನನ್ನ ಹಕ್ಕು' ಈ ಶಕ್ತಿಯನ್ನು ದುರ್ಬಲಗೊಳಿಸುವ ಹುನ್ನಾರ ಪಟ್ಟಭದ್ರ ಹಿತಾಸಕ್ತಿಗಳಿಂದ ನಡೆದಿದೆ. ಶ್ರೀಮಂತರಿಗೆ ಅಧಿಕಾರ ದೊರೆಯುವ ಕಾಲವೊಂದಿತ್ತು. ಆದರೆ ಈಗ ಶ್ರೀಮಂತ, ಬಡವ, ಬಲ್ಲಿದ ಎಂಬ ಬೇಧವಿಲ್ಲದೇ, ಎಲ್ಲರಿಗೂ ಒಂದೇ ಮತದ ಅಧಿಕಾರ ನೀಡಲಾಗಿದೆ. ಡಾ.ಬಿ.ಆರ್.ಅಂಬೇಡ್ಕರ್ ಅವರು ಒಬ್ಬ ವ್ಯಕ್ತಿ, ಒಂದು ಮತ, ಒಂದು ಮೌಲ್ಯ ಎಂದರು. ಆದರೆ ಇದರ ದುರುಪಯೋಗಪಡಿಸಿಕೊಂಡು, ಸಂವಿಧಾನವನ್ನು ದುರ್ಬಲಗೊಳಿಸುವ ಕುತಂತ್ರ ನಡೆಯುತ್ತಿದ್ದು, ಇದನ್ನು ನಡೆಯದಂತೆ ನೋಡಿಕೊಳ್ಳಬೇಕಿದೆ. ಸಂವಿಧಾನದ ರಕ್ಷಣೆ ಎಲ್ಲನಾಗರಿಕರಜವಾಬ್ದಾರಿಯಾಗಿದ್ದು, ಈ ಕರ್ತವ್ಯವನ್ನು ಎಲ್ಲರೂ ತಪ್ಪದೇ ನಿರ್ವಹಿಸಲೇಬೇಕು. ಪ್ರಜಾಪ್ರಭುತ್ವದ ರಕ್ಷಣೆಯಿಂದ ದೇಶದ ಜನರ ರಕ್ಷಣೆ ಸಾಧ್ಯವಾಗುತ್ತದೆಎಂದುಹೇಳಿದರು.ನಮ್ಮ ಜಾತಿ ವ್ಯವಸ್ಥೆಗೆ ಚಲನೆಯಿಲ್ಲದೇ, ಸಮಾಜದಲ್ಲಿ ಆಳವಾಗಿ ಬೇರೂರಿದೆ. ಆರ್ಥಿಕ, ಸಾಮಾಜಿಕಸಮಾನತೆತರದೇ ಜಾತಿ ವ್ಯವಸ್ಥೆ ನಿರ್ಮೂಲಗೊಳಿಸಲು ಸಾಧ್ಯವಿಲ್ಲ. ಎಲ್ಲರಿಗೂ ಸಮಾನ ಅವಕಾಶಗಳು ದೊರೆತಾಗ ಮಾತ್ರ ಬದಲಾವಣೆಸಾಧ್ಯ. ಹಿಂದಿನಿಂದಿಲೂ ಮಹಿಳೆಯರುಹಾಗೂಶೂದ್ರರುಅಕ್ಷರ ಸಂಸ್ಕೃತಿ ಹಾಗೂ ಅವಕಾಶಗಳಿಂದ ವಂಚಿಕತರಾಗಿದ್ದಕಾರಣ ಅಸಮಾನತೆ ತಲೆದೋರಿದೆ. ಸಹಿಷ್ಣುತೆ ಹಾಗೂ ಸಹಬಾಳ್ವೆಯನ್ನು ಅಂಬೇಡ್ಕರ್ ಅವರು ಬೋಧಿಸಿದರು.ಸಮಾಜದಲ್ಲಿಬಹುಸಂಖ್ಯಾತರು ಎಚ್ಚರದಿಂದಿರಬೇಕು ಎಂದರು. ಅಧಿಕಾರವನ್ನು ಉಳಿಸಿಕೊಳ್ಳಲು ಮತಗಳ್ಳತನದ ಹಾದಿಯನ್ನು ಹಿಡಿದಿದ್ದಾರೆ. ಆದ್ದರಿಂದ ನನ್ನ ಮತ ನನ್ನ ಹಕ್ಕು' ಎಂಬುದು ಇಂತಹ ಸನ್ನಿವೇಶದಲ್ಲಿ ಪ್ರಮುಖವಾಗಿದ್ದು, ಮತಗಳ ದುರುಪಯೋಗವಾಗಬಾರದು. ಮತಗಳ್ಳತನಕ್ಕೆ ಅವಕಾಶ ನೀಡಬೇಡಿ. ಪ್ರಜಾಪ್ರಭುತ್ವ ಉಳಿಸಿ, ಹಕ್ಕುಗಳನ್ನು ರಕ್ಷಿಸುವ ಪ್ರಮಾಣವನ್ನು ಸ್ವೀಕರಿಸಲಾಗಿದೆ. ಸಂವಿಧಾನ ನೀಡುವ ಹಕ್ಕು ಹಾಗೂ ಕರ್ತವ್ಯಗಳ ಪಾಲನೆಯಾಗಬೇಕು. ಪ್ರಜಾಪ್ರಭುತ್ವದಲ್ಲಿ ಎಲ್ಲಾ ಜಾತಿ, ಧರ್ಮವೂ ಸಮಾನವಾಗಿದೆ. ಇಂತಹ ಸಂವಿಧಾನಕ್ಕೆ ಧಕ್ಕೆ ತರುವ ಕೆಲಸವನ್ನು ಮನುವಾದಿಗಳು ಪ್ರಯತ್ನಿಸುತ್ತಿದ್ದಾರೆ. ಸ್ವಾತಂತ್ರ್ಯ ಬಂದಾಗಿನಿಂದಲೂ ಸಂವಿಧಾನ ವಿರೋಧಿಗಳು ಇದ್ದಾರೆ. ಅಸಮಾನತೆ ನಿವಾರಣೆಯಾದರೆ ಶೋಷಣೆ ಸಾಧ್ಯವಿಲ್ಲ ಎಂದು ತಿಳಿಸಿದರು.ಸಾಹಿತಿ ಬಾನು ಮುಷ್ತಾಕ್ ಅವರು ಅನ್ಯಧರ್ಮದವರೆಂದು ದಸರಾ ಉದ್ಘಾಟಿಸಬಾರದೆಂದು ವಿರೋಧವ್ಯಕ್ತಪಡಿಸಲಾಗುತ್ತಿದೆ. ಸಹಿಷ್ಣುತೆ ಹಾಗೂ ಸಹಬಾಳ್ವೆಯನ್ನು ಎಲ್ಲರೂ ರೂಢಿಸಿಕೊಳ್ಳಬೇಕು. ಜಾತಿಧರ್ಮ, ವರ್ಗವ್ಯವಸ್ಥೆಯನ್ನು ಮೀರಿ, ಸಮಾನತೆ ನೆಲೆಸಬೇಕೆಂದು ಸಂವಿಧಾನ ಸ್ಪಷ್ಟವಾಗಿ ಹೇಳಿದೆ. ಪಟ್ಟಭದ್ರ ಹಿತಾಸಕ್ತಿಗಳು, ಮತಾಂಧತೆಯ ವರ್ತನೆಯನ್ನು ಎಲ್ಲರೂ ಒಗ್ಗಟ್ಟಾಗಿ ಖಂಡಿಸಬೇಕು. ಚರ್ಚೆಯೇ ಪ್ರಜಾಪ್ರಭುತ್ವದ ಜೀವಾಳ. ಜನರನ್ನು ತಪ್ಪುದಾರಿಗೆಳೆಯುವ ಪ್ರಯತ್ನಗಳು ಖಂಡನೀಯ. ಆರ್ಥಿಕ ಅಸಮಾನತೆ ನಿವಾರಣೆಗಾಗಿ ಗ್ಯಾರಂಟಿ ಯೋಜನೆಗಳ ಮೂಲಕ 98,950 ಕೋಟಿ ರೂ.ಗಳನ್ನು ಒದಗಿಸಲಾಗಿದೆ ಎಂದರು. ಸಂವಿಧಾನದ ಆಶಯಗಳ ಅರಿವು ಎಲ್ಲರೂ ಹೊಂದಬೇಕೆಂಬ ದೃಷ್ಟಿಯಿಂದ ಸರ್ಕಾರ, ಎಲ್ಲಾ ಶಾಲೆಗಳಲ್ಲಿ ಸಂವಿಧಾನ ಪೀಠಿಕೆಯನ್ನು ಓದಲು ಕ್ರಮ ಕೈಗೊಳ್ಳಲಾಗಿದೆ. ಸಂವಿಧಾನವನ್ನು ಪ್ರತಿಯೊಬ್ಬರು ಅರ್ಥೈಸಿಕೊಳ್ಳಬೇಕು ಎಂದು ವಿವರಿಸಿದರು.

## ರಾಜ್ಯದ ಮುಖ್ಯಮಂತ್ರಿಗಳ ಪರಿಷ್ಕೃತ ಪ್ರವಾಸ

ಮಲ್ಲಮ್ಮನುಡಿವಾರ್ತೆ ಕಲಬುರಗಿ,ಸೆ.15-ರಾಜ್ಯದಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ವಿಶೇಷ ವಿಮಾನದ ಮೂಲಕ ಸೆಪ್ಟೆಂಬರ್ 16 ರಂದುಮಂಗಳವಾರರಾತ್ರಿ 8.10 ಗಂಟೆಗೆಕಲಬುರಗಿಗೆಆಗಮಿಸಿವಾಸ್ತವ್ಯ ಮಾಡುವರು. ಸೆಪ್ಟೆಂಬರ್17ರಂದುಬುಧವಾರಬೆಳಿಗ್ಗೆ8.25ಗಂಟೆಗೆ ಕಲ್ಯಾಣಕರ್ನಾಟಕಉತ್ಸವ ಅಂಗವಾಗಿ ಕಲಬುರಗಿ ನಗರದಎಸ್.ವಿ.ಪಿ.ವೃತ್ತದಲ್ಲಿ ಸರ್ದಾರವಲ್ಲಭಭಾಯಿ ಪಟೇಲ್‌ರವರ ಪುತ್ಥಳಿಗೆ ಮಾಲಾರ್ಪಣೆಮಾಡುವರು. ಬೆಳಿಗ್ಗೆ9 ಗಂಟೆಗೆಕಲಬುರಗಿ ನಗರದಪೊಲೀಸ್‌ಪರೇಡ್ ಮೈದಾನದಲ್ಲಿಕಲ್ಯಾಣಕರ್ನಾಟಕ ಉತ್ಸವ ದಿನಾಚರಣೆ ಅಂಗವಾಗಿಧ್ವಜಾರೋಹಣ ಮತ್ತು ವಿವಿಧಅಭಿವೃದ್ಧಿ ಕಾಮಗಾರಿಗಳಿಗೆಶಿಲಾನ್ಯಾಸ, ಉದ್ಘಾಟನೆಹಾಗೂವಿವಿಧ ಇಲಾಖೆಗಳ ಫಲಾನುಭವಿಗಳಿಗೆ ಸವಲತ್ತುಗಳ ವಿತರಣೆ ಮಾಡುವರು. ಮಧ್ಯಾಹ್ನ 12 ಗಂಟೆಗೆ ಕಲಬುರಗಿಯಲ್ಲಿ ರಾಜ್ಯಾದ್ಯಂತ 500 ಕೆ.ಎಂ.ಎಫ್. ನಂದಿನಿ ಮಾರಾಟ ಮಳಿಗೆಗಳನ್ನು ಉದ್ಘಾಟಿಸುವರು.



ಅಂದು ಮಧ್ಯಾಹ್ನ 12.30 ಗಂಟೆಗೆಕಲಬುರಗಿಯ ಶ್ರೀಶರಣಬಸವೇಶ್ವರ ಜಾತ್ರಾ ಮೈದಾನದಲ್ಲಿಕರ್ನಾಟಕಪ್ರದೇಶಕುರುಬಗೊಂಡಸಂಘದಜಿಲ್ಲಾ ಶಾಖೆಕಲಬುರಗಿಹಾಗೂಕ್ರಾಂತಿವೀರಸಂಗೊಳ್ಳಿರಾಯಣ್ಣಯುವಸಂಘದ ಸಂಯುಕ್ತಾಶ್ರಯದಲ್ಲಿಆಯೋಜಿಸಿರುವಬೃಹತ್‌ಅಭಿನಂದನಾಸಮಾರಂಭದಲ್ಲಿ ಭಾಗವಹಿಸುವರು. ನಂತರ ಮಧ್ಯಾಹ್ನ 3.25 ಗಂಟೆಗೆ ಕಲಬುರಗಿಯಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

## ಅತಿವೃಷ್ಟಿಯಿಂದ ಬೆಳೆ ಹಾನಿ, ರೈತರ ಸಾಲ ಮನ್ನಾಗೆ ನಿಖಿಲ್ ಕುಮಾರಸ್ವಾಮಿ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ :ಸೆ.15: ರಾಜ್ಯಾದ್ಯಂತ ಭಾರೀ ಮಳೆ ಮತ್ತು ಪ್ರವಾಹದಿಂದ ವ್ಯಾಪಕ ಬೆಳೆ ಹಾನಿ ಸಂಭವಿಸಿದೆ ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈ ಕೂಡಲೇರೈತರಸಾಲಮನ್ನಾ ಮಾಡಬೇಕೆಂದು ನಿಖಿಲ್ ಕುಮಾರಸ್ವಾಮಿ ಅವರು ಒತ್ತಾಯಿಸಿದ್ದಾರೆ.ಕಲಬುರಗಿಯ ಎಪಿಎಂಸಿ ಮಾರುಕಟ್ಟೆಯ ಬಳಿ ಮಾಧ್ಯಮಗಳ ಜತೆ ಮಾತನಾಡಿದ ಅವರು ರಾಜ್ಯಕಾಂಗ್ರೆಸ್‌ಸರ್ಕಾರದ ವಿರುದ್ಧವಾಗ್ದಾಳಿನಡೆಸಿದರು. ರಾಜ್ಯದಲ್ಲಿ ಈ ಬಾರಿ ಅತಿವೃಷ್ಟಿಯಿಂದರಾಜ್ಯದಲ್ಲಿ ಭಾರಿ ಪ್ರಮಾಣದ ಹಾನಿ ಸಂಭವಿಸಿದೆ.ಇಷ್ಟದರೂಸಿಎಂ ಸಿದ್ದರಾಮಯ್ಯ ಅವರು ಕೃಷ್ಣ ಕಚೇರಿಯಲ್ಲಿ ವಿಡಿಯೋ ಕಾನ್ಫರೆನ್ಸ್ ಮಾಡುವುದು ಬಿಟ್ಟರೆ ಬೇರೆ ಏನು ಮಾಡಿಲ್ಲ. ರಾಜ್ಯದಿಂದ ಕೃಷಿ ಸಚಿವರು ಬೆಳೆ ಹಾನಿ ಪ್ರದೇಶಕ್ಕೆ ಭೇಟಿ ನೀಡಿಲ್ಲ. ಕೃಷಿ ಸಚಿವರು ರೈತರ ಸಂಕಷ್ಟವನ್ನು ಆಲಿಸಲಿಲ್ಲ ಎಂದು ವಾಗ್ದಾಳಿ ನಡೆಸಿದರು.ಅತಿವೃಷ್ಟಿಯಿಂದಹಾನಿಗೊಳಗಾದಒಂದೇಒಂದುಪ್ರದೇಶಕ್ಕೂ ಸಿಎಂ ಇದುವರೆಗೂ ಭೇಟಿ ನೀಡಿಲ್ಲ.ರಾಜ್ಯದ ಕೃಷಿ ಸಚಿವರಂತೂ ಅವರ ಮತಕ್ಷೇತ್ರ ಬಿಟ್ಟು ಹೊರಗೆ ಬಂದೇ ಇಲ್ಲ. ಕಲಬುರಗಿ ಜಿಲ್ಲೆಗಳನ್ನ ಕೃಷಿ ಸಚಿವರುಮರತೇಬಿಟ್ಟಿದ್ದಾರೆ.ಈಭಾಗದಲ್ಲಿಸಾಕಷ್ಟುಹಾನಿಸಂಭವಿಸಿದ್ದರೂ ಸಹ ಕೃಷಿ ಸಚಿವರು ಭೇಟಿ ನೀಡಿಲ್ಲ ಎಂದು ರಾಜ್ಯ ಕೃಷಿ ಸಚಿವರ ವಿರುದ್ಧ ವಾಗ್ದಾಳಿ ನಡೆಸಿದರು.ಕಲಬುರಗಿಯಲ್ಲಿ ಒಂದು ಲಕ್ಷದ ಐದು ಸಾವಿರ ಹೆಕ್ಟರ್ ಪ್ರದೇಶ ಹನಿಗೋಳಗಾಗಿದೆ. ಅದರಲ್ಲಿ 58 ಸಾವಿರ ಹೆಕ್ಟರ್ ತೊಗರಿ ಪ್ರದೇಶ ಹಾನಿಯಾಗಿದೆ.



## ಎಥೆನಾಲ್ ಪೆಟ್ರೋಲ್‌ನಿಂದ ಮೈಲೇಜ್ ಕುಸಿತವಾಗಲ್ಲ, ವಿಮೆ ರದ್ದಾಗಲ್ಲ: ಕೇಂದ್ರ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಸೆ.15:ಎಥೆನಾಲ್ ಮಿಶ್ರಣದ ಪೆಟ್ರೋಲ್‌ನಿಂದ ವಾಹನಗಳ ಮೈಲೇಜ್ ಕುಸಿತವಾಗುವುದಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟನೆ ನೀಡಿದೆ.ಸಾಮಾಜಿಕ ಜಾಲತಾಣದಲ್ಲಿ ನೆಟ್ಟಿಗರು ಎಥೆನಾಲ್ ಮಿಶ್ರಿತ ಪೆಟ್ರೋಲ್‌ನಿಂದ ಮೈಲೇಜ್ ಕುಸಿತವಾಗಿದೆ ಎಂಬ ಆರೋಪಿಸಿದ ಬೆನ್ನಲ್ಲೇ ಕೇಂದ್ರ ಪೆಟ್ರೋಲಿಯಂ ಸಚಿವಾಲಯ ದೀರ್ಘವಾದ ಪೋಸ್ಟ್ ಪ್ರಕಟಿಸಿ ಗೊಂದಲಗಳಿಗೆ ಸ್ಪಷ್ಟನೆ ನೀಡಿದೆ. ಅಷ್ಟೇ ಅಲ್ಲದೇ ವಾಹನದ ವಿಮೆಗಳು ರದ್ದಾಗುವುದಿಲ್ಲ ಎಂದು ಹೇಳಿದೆ.2003ಕ್ಕೆ ಮೊದಲು ಭಾರತದಲ್ಲಿ ಕಚ್ಚಾತೈಲದಿಂದ ಸಂಸ್ಕರಣೆಗೊಂಡ ಪೆಟ್ರೋಲ್ ಬಂಕ್‌ಗಳಿಗೆ ಬರುತ್ತಿದ್ದವು. ಆದರೆ ಈಗ ಪೆಟ್ರೋಲ್ ಜೊತೆ ಎಥೆನಾಲ್ ಮಿಶ್ರಣವಾಗಿರುವ ಇಂಧನ ಬರುತ್ತಿದೆ. ಶೇ.20 ಎಥೆನಾಲ್ ಮತ್ತು ಶೇ.80 ಬಾಕಿ ಪೆಟ್ರೋಲ್ ಮಿಶ್ರಿತ ತೈಲವನ್ನು ಇ20 ತೈಲ ಎನ್ನುತ್ತಾರೆ. ಕಬ್ಬು, ಜೋಳ ಅಥವಾ ಹೆಚ್ಚುವರಿ ಧಾನ್ಯದಿಂದ ತಯಾರಿಸಲಾದ ಜೈವಿಕ ಇಂಧನವನ್ನು ಎಥೆನಾಲ್ ಎಂದು ಕರೆಯಲಾಗುತ್ತದೆ. 2003ರಲ್ಲಿ ಭಾರತದಲ್ಲಿ ಇ5 ಇಂಧನ ಸಿಗತೊಡಗಿತು. 2022ರ ವೇಳೆಗೆ ದೇಶದಲ್ಲಿ ಇ10 ಇಂಧನ ಮಾರಾಟವಾಗುತ್ತಿತ್ತು. 2023ರಲ್ಲಿ ಕೆಲ ನಗರಗಳಲ್ಲಿ ಪ್ರಾಯೋಗಿಕವಾಗಿ ಇ20 ಇಂಧನ ಮಾರಾಟ ಮಾಡಲಾಗುತ್ತಿತ್ತು. 2025 ರಿಂದ ದೇಶಾದ್ಯಂತ ಇ20 ಇಂಧನ ಮಾರಾಟ ಮಾಡಲಾಗುತ್ತಿದೆ.

## ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್‌ಗೆ ಹೈಕೋರ್ಟ್ ಗ್ರೀನ್ ಸಿಗ್ನಲ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಸೆ.15: ಮೈಸೂರು ದಸರಾ ಉದ್ಘಾಟನೆಗೆ ಬುಕರ್ ಪ್ರಶಸ್ತಿ ಪುರಸ್ಕೃತ ಲೇಖಕಿ ಬಾನು ಮುಷ್ತಾಕ್ ಆಯ್ಕೆ ಪ್ರಶ್ನಿಸಿ ಮಾಜಿ ಸಂಸದ ಪ್ರತಾಪ್ ಸಿಂಹ ಮತ್ತಿತರರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ರಾಜ್ಯ ಹೈಕೋರ್ಟ್ ವಜಾಗೊಳಿಸಿದೆ.

ಪ್ರತಾಪ್ ಸಿಂಹ ಸೇರಿದಂತೆ ಮೂವರು ಸಲ್ಲಿಸಿದ್ದ ಅರ್ಜಿಗಳನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ಮತ್ತು ನ್ಯಾಯಮೂರ್ತಿ ಸಿ.ಎಂ ಜೋಶಿ ನೇತೃತ್ವದ ನೇತೃತ್ವದ ವಿಭಾಗೀಯ ಪೀಠ ವಿಚಾರಣೆ ನಡೆಸಿತು.ರಾಜ್ಯ ಸರ್ಕಾರ ಆಯೋಜಿಸುವ ಕಾರ್ಯಕ್ರಮದಲ್ಲಿ ಭಿನ್ನ ಧರ್ಮದ ವ್ಯಕ್ತಿ ಭಾಗಿಯಾಗುವುದು, ಅರ್ಜಿದಾರರ ಯಾವುದೇ ಕಾನೂನು ಅಥವಾ ಸಾಂವಿಧಾನಿಕ ಹಕ್ಕನ್ನು ಹೇಗೆ ಉಲ್ಲಂಘಿಸುತ್ತದೆ? ಭಾರತದ ಸಂವಿಧಾನದಲ್ಲಿ ಪ್ರತಿಪಾದಿಸಲಾದ ಮೌಲ್ಯಗಳಿಗೆ ವಿರುದ್ಧ ಹೇಗೆ ಎಂಬುದನ್ನು ಸಾಬೀತುಪಡಿಸುವಲ್ಲಿ ಅರ್ಜಿದಾರರು ವಿಫಲವಾಗಿದ್ದಾರೆ ಎಂದು ಅಭಿಪ್ರಾಯಪಟ್ಟು ಅರ್ಜಿಗಳನ್ನು ವಜಾಗೊಳಿಸಿತು.ಪ್ರತಾಪ್ ಸಿಂಹ ಪರ ವಕೀಲ ಎಸ್ ಸುದರ್ಶನ್ ವಾದ ಮಂಡಿಸಿದರೆ ಸರ್ಕಾರದ ಪರ ಎಜಿ ಶಶಿಕಿರಣ್ ಶೆಟ್ಟಿ ವಾದಿಸಿದರು.

## ಬಿಹಾರದಲ್ಲಿ 36,000 ಕೋ ಮೊತ್ತದ ಯೋಜನೆಗಳಿಗೆ ಪ್ರಧಾನಿ ಚಾಲನೆ

ಮಲ್ಲಮ್ಮನುಡಿವಾರ್ತೆ ಪಾಟ್ನಾ:ಸೆ.15: ಅಕ್ಟೋಬರ್-ನವೆಂಬರ್‌ನಲ್ಲಿ ವಿಧಾನಸಭೆಚುನಾವಣೆಎದುರಿಸಲಿರುವಬಿಹಾರಕ್ಕೆಪ್ರಧಾನಿನರೇಂದ್ರ ಮೋದಿ ಅವರು ಬಂಪರ್ ಗಿಫ್ಟ್ ನೀಡುತ್ತಿದ್ದು, ಸೋಮವಾರ 36,000 ಕೋಟಿ ರೂ. ಮೊತ್ತದ ಹಲವು ಯೋಜನೆಗಳಿಗೆ ಚಾಲನೆ ನೀಡಿದರು.ಇಂದು ಬಿಹಾರದ ಪೂರ್ಣಿಯಾಜಿಲ್ಲೆಯಲ್ಲಿ ಪ್ರಧಾನಿಮೋದಿಅವರು ಗಂಗಾನದಿಗೆಅಡ್ಡಲಾಗಿ ನೇರರೈಲುಸಂಪರ್ಕವನ್ನು ಒದಗಿಸುವ2,170ಕೋಟಿರೂ.ಗೂ ಹೆಚ್ಚು ಮೌಲ್ಯದ ಬಿಕ್ರಮಶಿಲಾ-ಕಟಾರಿಯಾ ನಡುವಿನ ರೈಲು ಮಾರ್ಗಕ್ಕೆಶಂಕುಸ್ಥಾಪನೆ ನೆರವೇರಿಸಿದರು.ಪ್ರಧಾನಿ ಮೋದಿಅವರು, ವಿದ್ಯುತ್, ರೈಲ್ವೆ, ವಿಮಾನನಿಲ್ದಾಣ, ವಸತಿ, ನೀರು, ಗ್ರಾಮೀಣಾಭಿವೃದ್ಧಿ, ಕೃಷಿ, ಪಶುಸಂಗೋಪನೆ ಮತ್ತು ಹೊಸ ಮಖಾನಾ ಮಂಡಳಿ ಹಾಗೂ 2,680 ಕೋಟಿಗೂ ಹೆಚ್ಚು ಮೌಲ್ಯದಕೋಸಿ-ಮೆಚಿಇಂಟ್ರಾ-ಸ್ಟೇಟ್‌ನದಿಸಂಪರ್ಕ ಯೋಜನೆಯಹಂತ 1 ಸೇರಿದಂತೆ ಒಟ್ಟು 36,000 ಕೋಟಿ ರೂ. ಮೊತ್ತದ ವಿವಿಧ ಯೋಜನೆಗಳ ಉದ್ಘಾಟನೆಮತ್ತುಶಂಕುಸ್ಥಾಪನೆನೆರವೇರಿಸಿದರು.4,410ಕೋಟಿರೂ.ಗೂ ಹೆಚ್ಚುಮೌಲ್ಯದಅರಾರಿಯಾ-ಗಲ್ಗಾಲಿಯಾ(ಠಾಕೂರ್ಗಂಜ್) ನಡುವಿನ ಹೊಸ ರೈಲು ಮಾರ್ಗವನ್ನು ಸಹ ಮೋದಿ ಉದ್ಘಾಟಿಸಿದರು.ಇದೇ ವೇಳೆ ಪಿಎಂಎವೈ (ಆರ್) ಅಡಿಯಲ್ಲಿ 35,000 ಗ್ರಾಮೀಣ ಫಲಾನುಭವಿಗಳು ಮತ್ತು ಪಿಎಂಎವೈ (ಯು) ಅಡಿಯಲ್ಲಿ 5,920 ನಗರ ಫಲಾನುಭವಿಗಳಿಗೆ ಮನೆಗಳನ್ನು ಹಸ್ತಾಂತರಿಸಿದರು.



## ವಾರದಲ್ಲಿ ರೈತರ ಖಾತೆಗಳಿಗೆ ಬೆಳೆ ಪರಿಹಾರ: ಸಚಿವ ಪ್ರಿಯಾಂಕ್

ಮಲ್ಲಮ್ಮನುಡಿವಾರ್ತೆ ಕಲಬುರಗಿ:ಸೆ.15: ಮಳೆಯಿಂದಾಗಿ ಕಲಬುರಗಿ ಜಿಲ್ಲೆಯಲ್ಲಿ ವ್ಯಾಪಕ ಬೆಳೆ ಹಾನಿ ಆಗಿರುವ ಕುರಿತು ಮುಖ್ಯಮಂತ್ರಿಗಳು ಈಗಾಗಲೇಸಂಬಂಧಪಟ್ಟಇಲಾಖೆಗಳೊಂದಿಗೆಚರ್ಚಿಸಿಮಾಹಿತಿಪಡೆದಿದ್ದು, ಜಿಲ್ಲೆಯಲ್ಲಿಬೆಳೆವಿಮೆಪರಿಹಾರದಬಗ್ಗೆಯೂಅವರಿಗೆಮಾಹಿತಿನೀಡಲಾಗಿದೆ. ಹಾಗಾಗಿ, ಮುಂದಿನ ಒಂದು ವಾರದೊಳಗೆ ರೈತರ ಖಾತೆಗಳಿಗೆ ಪರಿಹಾರ ಜಮಾ ಆಗಲಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ನಗರದಲ್ಲಿಸುದ್ದಿಗಾರರೊಂದಿಗೆಮಾತನಾಡಿದಅವರು, ಮಳೆಇನ್ನೂನಿಲ್ಲದ ಕಾರಣಕ್ಕಾಗಿ ಸರ್ವೆ ಮಾಡುವುದು ಕಷ್ಟವಾಗುತ್ತಿದೆ. ಮೊದಲ ಹಂತದಲ್ಲೇ 1.05 ಲಕ್ಷ ಹೆಕ್ಟೇರ್ ಹಾನಿಯಾಗಿದೆ. ಮಳೆ ನಿಂತ ಬಳಿಕ ಎರಡನೆಯ ಸುತ್ತಿನ ಸರ್ವೆ ಮಾಡಲಾಗುವುದು. ಈ ಬಗ್ಗೆ ನಾಳೆ ಸಚಿವ ಸಂಪುಟ ಸಭೆಯ ಬಳಿಕ ನಂತರ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದರು.

ಮಳೆ ಹಾನಿ ವಿಚಾರಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳುಹಾನಿಗೊಳಗಾದಪ್ರದೇಶಗಳಿಗೆ ಭೇಟಿಯ ಕುರಿತು ನಾಳೆ ಸಂಜೆ ಖುದ್ದು ಅವರೊಂದಿಗೆಚರ್ಚಿಸಿನಿರ್ಧರಿಸಲಾಗುವುದು. ಇನ್ನು, ಸಾಲಮನ್ನಾ ವಿಚಾರ, ಜಂಟಿ ಸರ್ವೆ ನಂತರ ಬೆಳೆಹಾನಿ ಗೊತ್ತಾದಾಗ ಮುಂದಿನ ಕ್ರಮ ಕೈಗೊಳ್ಳಲಾಗುವುದು.



## ಇ-ಖಾತಾ ವಿತರಣೆಯಲ್ಲಿ ಭ್ರಷ್ಟಾಚಾರ ಲೋಕಾಯುಕ್ತ ಅಧಿಕಾರಿಗಳ ದಾಳಿ

ಮಲ್ಲಮ್ಮನುಡಿವಾರ್ತೆ ಕಲಬುರಗಿ: ಮಹಾನಗರಪಾಲಿಕೆಯಲ್ಲಿ ವ್ಯಾಪಕ ಭ್ರಷ್ಟಾಚಾರದ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ನಗರದ ಏಳು ಕಡೆ ಸೋಮವಾರ ದಿಢೀರ್ ದಾಳಿ ನಡೆಸಿದ ಲೋಕಾಯುಕ್ತ ಅಧಿಕಾರಿಗಳು ಹಲವು ದಾಖಲೆ ಪತ್ರಗಳನ್ನು ಶೋಧ ನಡೆಸಿದರು.ದಾಳಿಯಲ್ಲಿ ಮೂರು ಖಾಸಗಿಕಚೇರಿಗಳಲ್ಲಿಪಾಲಿಕೆಯಸರ್ಕಾರಿಕಡತಗಳು, ಪಾಲಿಕೆಯರೆಜಿಸ್ಟರ್ ಹಾಗೂ 8.36 ಲಕ್ಷ ನಗದು ಪತ್ತೆಯಾಗಿದೆ ಎಂದು ಮೂಲಗಳು ಹೇಳಿವೆ. ಸೋಮವಾರಮಧ್ಯಾಹ್ನ 12 ಗಂಟೆಹೊತ್ತಿಗೆಕಲಬುರಗಿ, ಬೀದರ್ ಹಾಗೂ ಯಾದಗಿರಿ ಜಿಲ್ಲೆಗಳ ಲೋಕಾಯುಕ್ತ ಅಧಿಕಾರಿಗಳು ಏಳು ತಂಡಗಳಾಗಿ ಏಳು ಕಡೆಗೆ ಏಕಕಾಲಕ್ಕೆ ದಾಳಿ ನಡೆಸಿದ್ದಾರೆ. ಪ್ರತಿ ತಂಡದಲ್ಲಿ 5-6 ಮಂದಿ ಇದ್ದಾರೆ.ಪಾಲಿಕೆಯ ವಲಯ ಕಚೇರಿ-1, ವಲಯ ಕಚೇರಿ-2, ವಲಯ ಕಚೇರಿ-3 ಹಾಗೂ ನಗರದ ಸ್ನೇಹಾ ಬಿಲ್ಡರ್ಸ್ ರಿಯಲ್ ಸ್ಟೇಟ್ ಸೆಂಟರ್, ಇನಾಟೆಕ್ನಿಕಲ್ ಕನ್ಸಲ್‌ಟೆನ್ಸಿ, ಪಾಲಿಕೆಕಚೇರಿಆವರಣದಜೆರಾಕ್ಸ್ ಮತ್ತು ಡಿಟಿಪಿಸೆಂಟರ್ ಹಾಗೂ ಎಸ್.ಬಿ. ಬಿಲ್ಡರ್ಸ್ ಅಂಡ್ ಪ್ಲಾನರ್ಸ್ ಕಚೇರಿಗಳ ಮೇಲೆ ದಾಳಿ ಮಾಡಿ ದಾಖಲೆಗಳ ಪರಿಶೀಲನೆ ನಡೆಸಿದರು.ಪಾಲಿಕೆಯಲ್ಲಿ ನಿಯಮದಂತೆ7 ದಿನಗಳಲ್ಲಿಇ-ಖಾತಾವಿತರಿಸದೇವಲಯಕಚೇರಿಗಳಲ್ಲಿ ತಮ್ಮದೇಏಜೆಂಟರಮೂಲಕಅರ್ಜಿದಾರರಿಂದದುಡ್ಡುಪಡೆದು, ಇ-ಖಾತಾ ವಿತರಿಸುವಬಗೆಗೆದೂರುಗಳುಬಂದಿದ್ದವು. ದುಡ್ಡುಕೊಡದವರಿಗೆಖಾತಾ ವಿತರಣೆಯಲ್ಲಿವಿಳಂಬಮಾಡಲಾಗುತ್ತಿತ್ತು.ಈಕುರಿತುಉಪಲೋಕಾಯುಕ್ತರು ಸರ್ಚ್ ವಾರಂಟ್ ಜಾರಿಗೊಳಿಸಿದ್ದರು. ಅದರಂತೆ ದಾಳಿ ನಡೆಸಲಾಗಿದ್ದು, ಈಗಲೂ ಶೋಧಕಾರ್ಯ ನಡೆಯುತ್ತಿದೆ.

## ಪ್ರಜಾಪ್ರಭುತ್ವ ಆಶಯಗಳನ್ನು ಗಟ್ಟಿಗೊಳಿಸುವುದು ನಮ್ಮೆಲ್ಲರ ಕರ್ತವ್ಯ: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ,ಸೆ.15: ಪ್ರಜಾಪ್ರಭುತ್ವ ಆಶಯಗಳನ್ನುಗಟ್ಟಿಗೊಳಿಸುವುದು ನಮ್ಮೆಲ್ಲರಕರ್ತವ್ಯವಾಗಿದೆಎಂದು ಜಿಲ್ಲಾಧಿಕಾರಿಶಿಲ್ಪಾಶರ್ಮಾ ಅವರು ತಿಳಿಸಿದರು.ಅವರು ನಗರದ ಸರಕಾರಿನೌಕರರಸಮುದಾಯ ಭವನದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿಮಾತನಾಡಿದರು.ಪ್ರಜಾಪ್ರಭುತ್ವಜಗತ್ತಿನಲ್ಲಿಯೇಉತ್ತಮವಾದಮತ್ತುಸುವ್ಯವಸ್ಥಿತವ್ಯವಸ್ಥೆಯಾಗಿದೆ. ಪ್ರಜಾಪ್ರಭುತ್ವವ್ಯವಸ್ಥೆಯನ್ನುಕಾಪಾಡುವುದುಮತ್ತುಅದರಆಶಯಗಳನ್ನುಪಾಲನೆಮಾಡಬೇಕು.ಪ್ರಜಾಪ್ರಭುತ್ವ ಯಶಸ್ವಿಯಾಗಬೇಕಾದರೆ ನಾಗರಿಕರ ಪಾಲ್ಗೊಳ್ಳುವಿಕೆ ಅತ್ಯವಶ್ಯಕವಾಗಿದೆ. ಜನರಿಂದ, ಜನರಿಗಾಗಿ, ಜನರಿಗೋಸ್ಕರ ಇರುವ ವ್ಯವಸ್ಥೆಯಾಗಿದೆ ಎಂದರು. ನಮ್ಮ ಸಂವಿಧಾನ ನಮಗೆ ಎಲ್ಲಾ ರೀತಿಯ ಹಕ್ಕುಗಳು, ಸ್ವಾತಂತ್ರ್ಯಗಳು ನೀಡಿದೆ. ಸಂವಿಧಾನದ ಆಶಯದಂತೆ ನಾವೆಲ್ಲರೂ ಉತ್ತಮ ನಾಗರಿಕರಾಗಿ, ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಗೊಳಿಸಬೇಕು ಎಂದರು.ಬೀದರ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ವಿಠಲದಾಸ ಪ್ಯಾಗೆ ಅವರ ತಮ್ಮ ಅತಿಥಿ ಉಪನ್ಯಾಸ ಕುರಿತು ಮಾತನಾಡಿ, ಪ್ರಜಾಪ್ರಭುತ್ವದ ಮಹತ್ವ ಮತ್ತು ಸಂದೇಶಗಳನ್ನು ಸಾರುವ ನಿಟ್ಟಿನಲ್ಲಿ ಪ್ರತಿ ವರ್ಷ ಸೆಪ್ಟೆಂಬರ್ 15 ರಂದು ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಆಚರಣೆ ಮಾಡಲಾಗುತ್ತದೆ.

## ವಕ್ಫ್ ತಿದ್ದುಪಡಿ ಕಾಯ್ದೆಯ ಕೆಲ ಅಂಶಗಳಿಗೆ ಸುಪ್ರೀಂ ತಡೆ

ಮಲ್ಲಮ್ಮನುಡಿವಾರ್ತೆ ನವದೆಹಲಿ:ಸೆ.15: ವಕ್ಫ್ (ತಿದ್ದುಪಡಿ) ಕಾಯ್ದೆಯಕೆಲವೊಂದುನಿಬಂಧನೆಗಳಿಗೆಸುಪ್ರೀಂ ಕೋರ್ಟ್ ಇಂದುತಡೆನೀಡಿದೆ. ಕೆಲಅಂಶಗಳಬದಲಾವಣೆಗೆಸೂಚಿಸಿರುವಕೋರ್ಟ್, ಸಂಪೂರ್ಣವಾಗಿಕಾಯ್ದೆಗೆ ತಡೆ ನೀಡಲು ಸಾರಾಸಗಟಾಗಿ ನಿರಾಕರಿಸಿದೆ.ವಕ್ಫ್ ಕಾಯ್ದೆಯ ವಿರುದ್ಧ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿಗಳನ್ನು ಸಲ್ಲಿಸಲಾಗಿತ್ತು. ಆ ಅರ್ಜಿಗಳಲ್ಲಿ, ವಕ್ಫ್ ತಿದ್ದುಪಡಿಕಾಯ್ದೆಯನ್ನು ಕೇಂದ್ರ ಸರ್ಕಾರ ತೀವ್ರ ವಿರೋಧದ ನಡುವೆಯೂ ಜಾರಿಗೊಳಿಸಿದೆ. ಹಾಗಾಗಿ, ತಿದ್ದುಪಡಿ ಕಾಯ್ದೆಗೆ ತಡೆಯಾಜ್ಞೆ ನೀಡಬೇಕೆಂದು ಮನವಿ ಸಲ್ಲಿಸಲಾಗಿತ್ತು. ಆ ಎಲ್ಲಾ ಅರ್ಜಿಗಳ ವಿಚಾರಣೆಯನ್ನು ನಡೆಸಿದ ಸುಪ್ರೀಂಕೋರ್ಟ್, ಸಂಪೂರ್ಣ ಕಾಯ್ದೆಗೆ ತಡೆ ನೀಡಲು ನಿರಾಕರಿಸಿದೆ. ಆದರೆ, ಕಾನೂನಿನ ಕೆಲವು ನಿಬಂಧನೆಗಳಿಗೆ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಮತ್ತು ನ್ಯಾಯಮೂರ್ತಿ ಎ.ಜಿ ಮಸಿಹ್ ಇದ್ದ ಪೀಠವು ಮಧ್ಯಂತರ ಆದೇಶ ಹೊರಡಿಸಿದೆ.ವಕ್ಫ್ ಕಾಯ್ದೆ ತಿದ್ದುಪಡಿ ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿಗೆ ಸಂಬಂಧಿಸಿದಂತೆ ಸರ್ಕಾರದ ಪರವಾಗಿ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ವಾದ ಮಂಡಿಸಿದ್ರೆ, ಮೂರು ವಿಚಾರಗಳಿಗೆ ಅರ್ಜಿದಾರರು ತಡೆಕೋರಿ ಸಲ್ಲಿಸಿದ್ದ ಅರ್ಜಿದಾರರ ಪರ ಹಿರಿಯ ವಕೀಲ ಕಪಿಲ್ ಸಿಬಲ್ ವಾದ ಮಂಡಿಸಿದ್ದರು. ಯಾವುದೇಒಬ್ಬವ್ಯಕ್ತಿ ವಕ್ಫ್ ಮಂಡಳಿಯ ಸದಸ್ಯರಾಗಲು ಅಥವಾವಕ್ಫ್ ಮಂಡಳಿಗಳಿಗೆಭೂಮಿ ದಾನಕೊಡಲುಕನಿಷ್ಠ5 ವರ್ಷ ಇಸ್ಲಾಂ ಧರ್ಮ ಅನುಸರಿಸಬೇಕೆಂಬಷರತ್ತು ವಿಧಿಸಲಾಗಿತ್ತು. ಇದಕ್ಕೆ ಸುಪ್ರೀಂ ಕೋರ್ಟ್ ತಡೆನೀಡಿದೆ.ಈಅಂಶದ ಬಗ್ಗೆ ರಾಜ್ಯ ಸರ್ಕಾರಗಳು ಹೊಸ ನಿಯಮಗಳನ್ನುರೂಪಿಸುವವರೆಗೂ ತಡೆನೀಡಬೇಕುಎಂದುನ್ಯಾಯಪೀಠ ಸ್ಪಷ್ಟಪಡಿಸಿದೆ.




**ಏಷ್ಯಾಕಪ್ :ಪಂದ್ಯಾವಳಿಯಲ್ಲಿ ಪಾಕಿಸ್ತಾನ ಕ್ರಿಕೆಟ್ ತಂಡದ ವಿರುದ್ಧ ನಡೆದ ಮೊದಲ ಸುತ್ತಿನ ಪಂದ್ಯದಲ್ಲಿ ಭಾರತ ತಂಡವು 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.**

# ಕುರಿಗಾರರ ಭವಿಷ್ಯಕ್ಕಾಗಿ ಬಲವಾದ ಹೆಜ್ಜೆ ಗುರುತಿನ ಚೀಟಿ ವಿತರಣಾ ಕಾರ್ಯಕ್ರಮ

ಮಲ್ಲಮ್ಮನುಡಿ ವಾರ್ತೆ ಸುರಪುರ : ತಾಲೂಕಿನ ಕೆಂಭಾವಿ ಪಟ್ಟಣದಲ್ಲಿ ಶ್ರೀ ರೇವಣಸಿದ್ದೇಶ್ವರ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘ, ಕೆಂಭಾವಿ ವತಿಯಿಂದ ವಲಸೆ ಕುರಿಗಾರರ ಗುರುತಿನ ಚೀಟಿ ವಿತರಣಾ ಕಾರ್ಯಕ್ರಮ ಮತ್ತು ವಾರ್ಷಿಕ ಸಾಮಾನ್ಯ ಸಭೆ ವಿಜೃಂಭಣೆಯಿಂದ ನಡೆಯಿತು

ಸ್ಥಳ: ಕೆಂಭಾವಿ । ದಿನಾಂಕ: 14–09–2025, ಭಾನುವಾರ

ಶ್ರೀ ರೇವಣಸಿದ್ದೇಶ್ವರ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘ (ನಿ), ಕೆಂಭಾವಿ ಅವರ ಆಶ್ರಯದಲ್ಲಿ ವಲಸೆ ಕುರಿಗಾರರಿಗೆ ಗುರುತಿನ ಚೀಟಿಗಳ ವಿತರಣಾ ಕಾರ್ಯಕ್ರಮ ಹಾಗೂ ಸಂಘದ ವಾರ್ಷಿಕ ಸಾಮಾನ್ಯ ಸಭೆ ಅದ್ದೂರಿಯಾಗಿ ಜರುಗಿತು. ಈ ಕಾರ್ಯಕ್ರಮದಲ್ಲಿ ಸಂಘದ




ಅಧ್ಯಕ್ಷ ಶ್ರೀ ಮಾಳಪ್ಪ ಸುಂಕದ ಅವರು ಅಧ್ಯಕ್ಷತೆ ವಹಿಸಿದ್ದರು.

ಅಧ್ಯಕ್ಷರು ಮಾತನಾಡಿ, “ವಲಸೆ ಕುರಿಗಾರರು ರಾಜ್ಯದ ಕುರಿ ಸಾಕಾಣಿಕೆ ಕ್ಷೇತ್ರದಲ್ಲಿ ಅಪಾರವಾದ ಕೊಡುಗೆ ನೀಡುತ್ತಿದ್ದಾರೆ. ಅವರಿಗೆ ಗುರುತಿನ ಚೀಟಿಗಳ ವಿತರಣೆಯಿಂದ ಸರ್ಕಾರಿ ಯೋಜನೆಗಳ ಲಾಭ ತಲುಪಿಸಲು ನೆರವಾಗುತ್ತದೆ. ಸಂಘವು ಇಂತಹ ಸೌಲಭ್ಯಗಳನ್ನು ಪುಟ್ಟಮಟ್ಟದ ಕುರಿಗಾರರಿಗೆ ತಲುಪಿಸಲು ಸದಾ ಬದ್ಧವಾಗಿದೆ” ಎಂದು ಹೇಳಿದರು.

ಸಭೆಯಲ್ಲಿ ಸಂಘದ ಆರ್ಥಿಕ ಲೆಕ್ಕಪತ್ರಗಳ ಅಂಗೀಕಾರ, ಮುಂದಿನ ವರ್ಷದ ಯೋಜನೆಗಳು ಹಾಗೂ ಸದಸ್ಯರ ಸಲಹೆಗಳ ಕುರಿತು ಚರ್ಚೆ ನಡೆಯಿತು. ಸದಸ್ಯರಿಂದ ಉತ್ತಮ ಪ್ರತಿಕ್ರಿಯೆ ಲಭಿಸಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ಸಹಕಾರ ಕುರಿ ಮತ್ತು ಮೇಕೆ ಸಾಕಾಣಿಕೆದಾರರ ಮಹಾಮಂಡಳ, ಹೆಬ್ಬಾಳ–ಬೆಂಗಳೂರು ನಿಗಮದ ನಿರ್ದೇಶಕರು ಶ್ರೀ ಶಾಂತಗೌಡ ನಾಗನಟಗಿ, ಪಶುಪಾಲನಾ ಇಲಾಖೆಯ ಸಹಾಯಕ ನಿರ್ದೇಶಕರು ಡಾ. ಸುರೇಶ್ ಹಚಡ, ಪತ್ರಕರ್ತ ಸಂಜೀವರಾವ ಕುಲಕರ್ಣಿ, ವಿವಿಧ ಗ್ರಾಮಗಳ ಕುರಿಗಾರರು, ಸಂಘದ ನಿರ್ದೇಶಕರು, ಸದಸ್ಯರು ಮತ್ತು ಗ್ರಾಮಸ್ಥರು ಭಾಗವಹಿಸಿದ್ದರು.

ಸಮಾರೋಪದಲ್ಲಿ ಸಂಘದ ಕಾರ್ಯದರ್ಶಿ ಶ್ರೀ ಸಿದ್ದಪ್ಪ ಅವರು ಧನ್ಯವಾದ ಸಲ್ಲಿಸಿದರು.

ಈ ಕಾರ್ಯಕ್ರಮದ ಮೂಲಕ ಒಟ್ಟಾರೆ ವಲಸೆ ಕುರಿಗಾರರಿಗೆ ಸರ್ಕಾರದ ಸೌಲಭ್ಯಗಳು ತಲುಪುವ ದಾರಿ ಸುಗಮವಾಯಿತು ಎಂಬುದು ಸ್ಪಷ್ಟವಾಗಿದೆ.

# ಮಾಶಾಳ ಆಸ್ಪತ್ರೆಯಲ್ಲಿ ಗ್ರೂಪ್ ಡಿ ನೌಕರ ಸುನಿಲ್ ಗುಂಡಾ ವರ್ತನೆ:ಕ್ರಮಕ್ಕೆ ಆಗ್ರಹ

ಮಲ್ಲಮ್ಮನುಡಿ ವಾರ್ತೆ ಅಫಜಲಪೂರ :ಸೆ.15: ವೈದ್ಯಕೀಯ ಇಲಾಖೆಯ ಗ್ರೂಪ್ ಡಿ ನೌಕರ ಆಸ್ಪತ್ರೆಗೆ ಬರುವ ರೋಗಿಗಳ ವಿರುದ್ಧ ಗುಂಡಾ ವರ್ತನೆ ತೋರಿರುವ ಘಟನೆ ತಾಲೂಕಿನ ಮಾಶಾಳ ಗ್ರಾಮದ ಪ್ರಾಥಮಿಕ ಅರೋಗ್ಯ ಕೇಂದ್ರದಲ್ಲಿ ನಡೆದಿದೆ. ಎಂದಿನಂತೆ ಕರ್ತವ್ಯಕ್ಕೆ ಹಾಜರಾಗಬೇಕಾಗಿರುವ ಸಿಬ್ಬಂದಿಗಳು ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸದೆ ಇರುವದನ್ನು ಮನಗಂಡು ಕರುನಾಡ ವಿಜಯ ಸೇನೆ ತಾಲೂಕಾಧ್ಯಕ್ಷ ಸಿದ್ದು ಸುಲ್ತಾನಾಪುರ ಹಾಗೂ ಅವರ ತಂಡ ಆಸ್ಪತ್ರೆಗೆ ಭೇಟಿ ನೀಡಿ ಸಿಬ್ಬಂದಿಗಳ ರೋಸ್ಟರ್ ಮಾಹಿತಿ ಕೇಳಿದರು, ಆಸ್ಪತ್ರೆಯ ಸಿಬ್ಬಂದಿಗಳು ಸರಿಯಾಗಿ ವೈದ್ಯಕೀಯ ಸಮವಸ್ತ್ರ ಧರಿಸುವದಿಲ್ಲ, ಗುರುತಿನ ಚೀಟಿಯಂತೂ ಮೊದಲೇ ಹಾಕುವದಿಲ್ಲ, ಆಸ್ಪತ್ರೆಯಲ್ಲಿ ಯಾವಾಗಲು ಮೊಬೈಲ್ ಬಳಸುತ್ತಾ ಕಾಲಹರಣ ಮಾಡುತ್ತಿರುವದು ಗಮನಕ್ಕೆ ಬಂದಿದೆ, ನಂತರ ಕರ್ತವ್ಯಕ್ಕೆ ಬರದೇ ಆಸ್ಪತ್ರೆಗೆ ಚಕ್ಕರ ಹಾಕುತ್ತಿರುವ ಗ್ರೂಪ್ ಡಿ ನೌಕರರಾದ ಸುನಿಲ ಮುಲವಾಡ, ಕಿಶೋರಕುಮಾರ್ ಹಾಗೂ ಜಗದೇವಿ ಎಂಬುವವರನ್ನು ವಿಚಾರಿಸಿದಾಗ ಅವರಲ್ಲಿ ಗ್ರೂಪ್ ಡಿ ನೌಕರ ಸುನಿಲ್ ಎಂಬಾತ್ ವೈದ್ಯಕೀಯ ನಿಯಮ ಉಲ್ಲಂಘನೆ ಮಾಡಿ ಆಸ್ಪತ್ರೆಗೆ ಬರುವದನ್ನ ಕೇಳಲು ನೀನ್ಯಾರು, ಅದೇನ್ ಮಾಡ್ತಿ ಮಾಡು ನಾನು ನೋಡ್ತೀನಿ, ಎಂದು ದರ್ಪ ತೋರಿ ಗುಂಡಾ ವರ್ತನೆ ತೋರಿದ್ದಾನೆ, ಈ ಘಟನೆ ಕುರಿತು ಸಿದ್ದು ಸುಲ್ತಾನಪುರ ಆಕ್ರೋಶ ವ್ಯಕ್ತ ಪಡಿಸಿದ್ದು ಆಸ್ಪತ್ರೆಗೆ ರೋಗಿಗಳು, ಸಾರ್ವಜನಿಕರು, ವಾರದಿಗಾರರು ಬಂದು ವಿಚಾರಿಸುವವರಿಗೆ ಈ ರೀತಿಯ ಗುಂಡಾ ವರ್ತನೆ ತೋರಿ ದರ್ಪ ಮೆರೆಯುವ ಗ್ರೂಪ್ ಡಿ ನೌಕರ ಸುನಿಲ್ ಕರ್ತವ್ಯ ನಿರ್ವಹಿಸಲು ಯೋಗ್ಯನಿಲ್ಲ, ಅವನಿಗೆ ನಾಗರೀಕ ಸೇವಾ ನಿಯಮಗಳೇ ಗೊತ್ತಿಲ್ಲ, ಆಸ್ಪತ್ರೆಯಲ್ಲಿ ಸರಿಯಾಗಿ ಕರ್ತವ್ಯ ನಿರ್ವಹಿಸುವದಿಲ್ಲ ಎಂಬ ಆರೋಪ ಈತನ ಮೇಲೆ ಇದೆ. ಇನ್ನು ವೈದ್ಯಕೀಯ ನಿಯಮಗಳನ್ನು ಗಾಳಿಗೆ ತೂರಿ ಆಸ್ಪತ್ರೆಗೆ ಬಾರದೆ ಕರ್ತವ್ಯಕ್ಕೆ ಚಕ್ಕರ ಹಾಕುತ್ತಿರುವ ಹಾಗೂ ಅಹಂಕಾರ ಮತ್ತು ಗುಂಡಾ ವರ್ತನೆ ತೋರಿದ ನೌಕರ ಸುನಿಲ್ ಕುಮಾರನನ್ನು ಮತ್ತು ಜಗದೇವಿ ಹಾಗೂ ಕಿಶೋರ ಎಂಬ ಈ ಮೂವರು ಆಸ್ಪತ್ರೆಗೆ ಬರದೇ ಚಕ್ಕರ್ ಹಾಕುತ್ತಾರೆ ಕೊಡಲೇ ಮೇಲಧಿಕಾರಿಗಳು ಕಾನೂನು ಕ್ರಮ ಜರುಗಿಸಿ ಅಮಾನತ್ತು ಮಾಡಬೇಕು, ಇಲ್ಲವಾದರೆ ಮುಂದಿನ ದಿನಗಳಲ್ಲಿ ಆಸ್ಪತ್ರೆ ಮುಂಭಾಗ ಪ್ರತಿಭಟನೆಯ ಬಿಸಿ ಎದುರಿಸಬೇಕಾಗುತ್ತೆ ಎಂದು ಎಚ್ಚರಿಕೆ ನೀಡಿ ತಾಲೂಕಾ ಅರೋಗ್ಯಧಿಕಾರಿ ಡಾ ಚೇತನ್ ಅವರಿಗೆ ಮನವಿ ಪತ್ರ ನೀಡಿದರು. ಈ ಸಂದರ್ಭದಲ್ಲಿ ಅನಿಲ ಲುಪ್ಪತಿ ಜಗದೀಶ್ ಮಾಶಾಳ್ ಮಲ್ಲು ನಿಂಬಾಳ ಉಮೇಶ ಹದರಿ ಇನ್ನಿತರು ಇದ್ದರು



ಆಸ್ಪತ್ರೆಗೆ ಯಾರೇ ಬಂದು ವಿಚಾರಿಸಿದರು ಅವರಿಗೆ ಸೌಜನ್ಯದಿಂದ ಗೌರವಯುತವಾಗಿ ವರ್ತನೆ ಮಾಡಬೇಕು, ವೈದ್ಯಕೀಯ ನಿಯಮ ಉಲ್ಲಂಘನೆ ಯಾರೇ ಮಾಡಿದರು ಶಿಸ್ತು ಕ್ರಮ ಜರುಗಿಸುತ್ತೇನೆ, ಗ್ರೂಪ್ ಡಿ ನೌಕರ ಸುನಿಲ್ ಗುಂಡಾ ವರ್ತನೆ ತೋರಿ ದರ್ಪ ಮೆರೆದಿರುವದು ಸಾಬಿತಾಗಿದೆ. ಹಾಗಾಗಿ ಮುಂದಿನ ಕ್ರಮಕ್ಕೆ ಮೇಲಧಿಕಾರಿಗಳಿಗೆ ಶಿಫಾರಸ್ಸು ಮಾಡುವೆ.
ಡಾ. ಚೇತನ ಧೂಮಾಳೆ
ತಾಲೂಕು ಅರೋಗ್ಯಧಿಕಾರಿಗಳು ಅಫಜಲಪೂರ.

# ಸರ್ಕಾರದ ನಡೆ ಹಳ್ಳಿ ಕಡೆ: ಸಚಿವ ದರ್ಶನಾಪುರ ಅವರ ಗ್ರಾಮಯಾತ್ರೆ

ಕೆಂಭಾವಿ, ಸೆಪ್ಟೆಂಬರ್ 15 "ಸರ್ಕಾರದ ನಡೆ ಹಳ್ಳಿ ಕಡೆ" ಯೋಜನೆಯಡಿ ಇಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪಗೌಡ ದರ್ಶನಾಪುರ ಅವರು ಕೆಂಭಾವಿ ವಲಯದ ಹೂವಿನಹಳ್ಳಿ, ತಳ್ಳಳ್ಳಿ (ಬಿ), ಅಲ್ಹಾಳ, ಐನಾಪೂರ ಸೇರಿದಂತೆ ಹಲವು ಗ್ರಾಮಗಳಿಗೆ ಭೇಟಿ ನೀಡಿ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು.

ಆಲ್ಹಾಳ ಗ್ರಾಮದಲ್ಲಿ ಜಿಪಂ ವತಿಯಿಂದ ನಿರ್ಮಿಸಲಾದ ಕೊಳವೆ ಬಾವಿಯನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ಮತಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಕುಡಿಯುವ ನೀರು, ರಸ್ತೆ ನಿರ್ಮಾಣ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಾಕಷ್ಟು ಅನುದಾನವನ್ನು ಸರ್ಕಾರ ಒದಗಿಸಿದೆ ಎಂದು ಹೇಳಿದರು. ಯಾಳಗಿ–ಚಿಂಚೋಳಿ ಹಾಗೂ ಆಲ್ಹಾಳ–ಯಕ್ತಾಪುರ ನಡುವಿನ ಸಿಸಿ



ರಸ್ತೆ ನಿರ್ಮಾಣಕ್ಕೂ ಅನುದಾನ ಮಂಜೂರಾಗಿದೆ ಎಂದು ಮಾಹಿತಿ ನೀಡಿದರು

“ಇನ್ನು ಮುಂದೆ ಮತ್ತಷ್ಟು ಅನುದಾನ ತರಲಿದ್ದು, ಹಗಲು–ರಾತ್ರಿ ಎನ್ನದೆ ಕ್ಷೇತ್ರದ ಅಭಿವೃದ್ಧಿಗೆ ಮುಂದಾಗುತ್ತೇವೆ” ಎಂದು ಸಚಿವರು ಭರವಸೆ ನೀಡಿದರು.

ಅತಿಯಾದ ಮಳೆಯಿಂದಾಗಿ ಆಲ್ಹಾಳ ಗ್ರಾಮದ ಬೆಳೆಗಳು ಸಂಪೂರ್ಣ ಹಾನಿಯಾಗಿದೆ. ಈ ಹಿನ್ನೆಲೆಯಲ್ಲಿ ಬೆಳೆಹಾನಿ ಸಮೀಕ್ಷೆಗಾಗಿ ಅಧಿಕಾರಿಗಳ ತಂಡ ರಚಿಸಲಾಗಿದ್ದು, ಸರ್ಕಾರಕ್ಕೆ ವರದಿ ಸಲ್ಲಿಸಲು ಸೂಚಿಸಲಾಗಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಪಂ ಮಾಜಿ ಅಧ್ಯಕ್ಷ ಸಿದ್ದನಗೌಡ ಪೊಲೀಸ್ ಪಾಟೀಲ, ಕೆಂಭಾವಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಸನಗೌಡ ಪಾಟೀಲ ಹೂಸಮನಿ (ಯಾಳಗಿ), ಮಾಜಿ ಅಧ್ಯಕ್ಷ ಬಸವರಾಜ ಪಾಟೀಲ (ಚಿಂಚೋಳಿ), ಡಿಸಿಸಿ ಬ್ಯಾಂಕ್ ನಿರ್ದೇಶಕ ಬಾಪುಗೌಡ ಪಾಟೀಲ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಮಹಿಪಾಲರೆಡ್ಡಿ ಡಿಗ್ಗಾವಿ, ಪುರಸಭೆ ಅಧ್ಯಕ್ಷ ರಹೀಮಾನ ಪಟೇಲ್ (ಯಲಗೋಡ), ವಿವಿಧ ಇಲಾಖೆ ಅಧಿಕಾರಿಗಳು, ಪಕ್ಷದ ನಾಯಕರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# "ಪ್ರವೇಶಕ್ಕೊಂದು ಸಸಿ" ಕಾರ್ಯಕ್ರಮ

ಸುರಪುರ :

ಶ್ರೀಜನನಿ ಮಹಿಳಾ ಮಹಾವಿದ್ಯಾಲಯದಲ್ಲಿ "ಪ್ರವೇಶಕ್ಕೊಂದು ಸಸಿ" ಎಂಬ ವಿಶಿಷ್ಟವಾದ ಕಾರ್ಯಕ್ರಮವನ್ನು ಸ್ವಾಗತ ಸಮಾರಂಭದ ಅಂಗವಾಗಿ ಹಮ್ಮಿಕೊಳ್ಳಲಾಯಿತು. ಪಿಯುಸಿ ಹಾಗೂ ಬಿಎ, ಬಿಕಾಂ ಪ್ರಥಮ ವರ್ಷದ ವಿದ್ಯಾರ್ಥಿನಿಯರಿಗೆ ಸ್ವಾಗತ ನೀಡುವ ಈ ಸಂಭ್ರಮದ ವೇಳೆ ಪರಿಸರ ಸಂರಕ್ಷಣೆ ಮತ್ತು ಶಿಕ್ಷಣದ ಮಹತ್ವವನ್ನು ಒತ್ತಿಹೇಳಲಾಯಿತು.

ಕಾರ್ಯಕ್ರಮವನ್ನು ಪದವಿಪೂರ್ವ ಕಾಲೇಜಿನ ಉಪನ್ಯಾಸಕರಾದ ಶ್ರೀ ರಾಮಣ್ಣ ಪಾಟೀಲ್ ಉದ್ಘಾಟಿಸಿದರು. ಅವರು ಮಾತನಾಡುತ್ತಾ, “ಶಿಕ್ಷಣವೆಂಬುದು ಮಾನವನಿಗೆ ಆಮ್ಲಜನಕವಿದ್ದಂತೆ. ಪದವಿ ಶಿಕ್ಷಣ ಮಹತ್ವಪೂರ್ಣ ಘಟ್ಟವಾಗಿದ್ದು, ವಿದ್ಯಾರ್ಥಿನಿಯರು ವೈಜ್ಞಾನಿಕ ಮನೋಭಾವನೆ ಬೆಳೆಸಿ ಸಮಾಜದ ಬದಲಾವಣೆಗೆ ಕಾರಣರಾಗಬೇಕು" ಎಂದು ಹೇಳಿದರು.

ಮುಖ್ಯಅತಿಥಿಗಳಾಗಿ ಭಾಗವಹಿಸಿದ್ದ



ಶ್ರೀ ರಾಜಪ್ಪ ಜಂಗಮರಹಟ್ಟಿರ ಅವರು, “ಯಶಸ್ಸು ಎಂದರೆ ಅಧಿಕಾರವಲ್ಲ, ಶ್ರದ್ಧೆಯ ಜೀವನ ಮತ್ತು ಉತ್ತಮ ವ್ಯಕ್ತಿತ್ವ. ಮಹಿಳೆಯರು ದುರ್ಬಲ ಎಂಬ ಋಣಾತ್ಮಕ ಮನೋಭಾವನೆಗೆ ಮಾರಿ, ಸಾಧನೆಯ ಮಾರ್ಗದಲ್ಲಿ ಧೈರ್ಯದಿಂದ ಸಾಗಬೇಕು” ಎಂದು ಉಪದೇಶಿಸಿದರು.

ಇನ್ನೊಬ್ಬ ಪ್ರಮುಖ ಅತಿಥಿ–ಯಾದ ಶ್ರೀ ಸಿದ್ದಯ್ಯ ತಾವರ್ ಮಠ ಅವರು, “ಪಿಯುಸಿ ಮತ್ತು ಪದವಿ ವಿದ್ಯಾಭ್ಯಾಸದ ಬಹುಮುಖ್ಯ ಹಂತ. ಈ ಸಮಯದಲ್ಲಿ ಗಮನವನ್ನು ಶಿಕ್ಷಣದ ಕಡೆ ಕೇಂದ್ರೀಕರಿಸಬೇಕು" ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ಶ್ರೀ ತಿರುಪತಿ ಕೆಂಭಾವಿ ವಹಿಸಿದ್ದರು. ಉಪನ್ಯಾಸಕರಾದ ಶ್ರೀ ಮಹೇಶ್ ಗಂಜಿ ಪ್ರಾಸ್ತಾವಿಕ ಭಾಷಣ ನೀಡಿ, ವಿದ್ಯಾರ್ಥಿನಿಯರಲ್ಲಿ ಆತ್ಮವಿಶ್ವಾಸ ಹೆಚ್ಚಿಸುವ ಪ್ರೇರಣೆಯ ಮಾತುಗಳನ್ನು ಹೇಳಿದರು.

ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಸ್ಪರ್ಧೆಗಳು:

ಸ್ವಾಗತ ಸಮಾರಂಭದ ಅಂಗವಾಗಿ ವಿದ್ಯಾರ್ಥಿನಿಯರಿಗೆ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳು ಜರಗಿದವು. ವಿಜೇತರಿಗೆ ಬಹುಮಾನಗಳನ್ನು ನೀಡಿ ಗೌರವಿಸಲಾಯಿತು. ವಿದ್ಯಾರ್ಥಿನಿಯರು ನೃತ್ಯ, ನಾಟಕ ಮತ್ತು ಗೀತಗಾಯನದ ಮೂಲಕ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು.

ಪಾಲ್ಗೊಂಡ ಗಣ್ಯರು:

ಡಾ. ಆದಿಶೇಷ ನೀಲಗಾರ್ (ಕಾರ್ಯದರ್ಶಿ),

ಉಪನ್ಯಾಸಕರು: ಅಂಬ್ರೇಶ್ ಚೀಲ್ಲಾಳ್, ನಬೀಸಾಬ್ ನಾಯ್ಕೋಡಿ, ಬೀರಲಿಂಗ ದೇವತ್ಕಲ್, ಚಂದ್ರಶೇಖರ್ ನಾಯ್ಕೋಡಿ, ಮತ್ತು ಅನೇಕ

ಕಾಲೇಜಿನ ಸಿಬ್ಬಂದಿ, ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಕಾರ್ಯಕ್ರಮ ನಿರೂಪಣೆ: ಕು. ಮಲ್ಲಮ್ಮ ಮತ್ತು ಕು. ಸಂಗೀತಾ

ಸ್ವಾಗತ: ಕು. ರತ್ನ

ವಂದನೆ: ಕು. ಭಾಗ್ಯಶ್ರೀ

ಈ ಕಾರ್ಯಕ್ರಮವು ಶಿಕ್ಷಣ, ಪರಿಸರ ಸಂರಕ್ಷಣೆ ಮತ್ತು ಮಹಿಳಾ ಶಕ್ತೀಕರಣವನ್ನು ಒಟ್ಟುಗೂಡಿಸಿದ ಅಪೂರ್ವ ಉದಾಹರಣೆಯಾಯಿತು.

# ನೂತನ ಬಸ್ ಸೇವೆಗೆ ಶಾಸಕ ಪ್ರಭು ಚವ್ಹಾಣ ಚಾಲನೆ



ಔರಾಧ:ಸೆ.15:ಔರಾದ(ಬಿ) ನಿಂದ ಎಕಂಬಾ, ಚಿಮ್ಮೇಗಾಂವ, ಹಂದಿಕೇರಾ, ಡೋಣಗಾಂವ(ಎಂ) ವಾಡಿ, ಡೋಣಗಾಂವ(ಎಂ), ಕಮಲನಗರ ಮಾರ್ಗವಾಗಿ ಭಾಲ್ಕಿಗೆ ಸಂಚರಿಸುವ ನೂತನ ಬಸ್ ಸೇವೆಗೆ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಸೋಮವಾರ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಗ್ರಾಮ ಸಂಚಾರದ ಸಂದರ್ಭದಲ್ಲಿ ಈ ಮಾರ್ಗದಲ್ಲಿ ಹೊಸ ಬಸ್ ಸಂಚಾರ ಆರಂಭಿಸಬೇಕೆಂದು ಜನತೆ ಮನವಿ ಮಾಡಿದ್ದರು. ಕೂಡಲೇ ವ್ಯವಸ್ಥಾಪಕರು, ವಿಭಾಗೀಯ ನಿಯಂತ್ರಣಾಧಿಕಾರಿಗಳು ಸೇರಿದಂತೆ ಸಂಬಂಧಪಟ್ಟವರನ್ನು ಮಾತನಾಡಿ ಹೊಸ ಬಸ್ ಸೇವೆ ಒದಗಿಸುವಂತೆ ತಿಳಿಸಿದ್ದೆ. ನಂತರವೂ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಹೊಸ ಬಸ್ ಸಂಚಾರ ಆರಂಭಿಸಿದ್ದೇನೆ. ಇದರಿಂದಾಗಿ ಜನರ ಬಹಳಷ್ಟು ದಿನಗಳ ಬೇಡಿಕೆ ಈಡೇರಿದೆ ಎಂದರು.

ಈ ಭಾಗದ ಅಭಿವೃದ್ಧಿಗಾಗಿ ನಿರಂತರ ಶ್ರಮಿಸುತ್ತಿದ್ದು, ಉತ್ತಮ ರಸ್ತೆ ಹಾಗೂ ಮತ್ತಿತರೆ ಎಲ್ಲ ಮೂಲಭೂತ ಸೌಕರ್ಯಗಳನ್ನು ಒದಗಿಸುತ್ತಿದ್ದೇನೆ. ಹೊಸ ಬಸ್ ಸೇವೆಯಿಂದ ಜನತೆ ಔರಾದ(ಬಿ), ಕಮಲನಗರ, ಭಾಲ್ಕಿ ಹಾಗೂ ಮತ್ತಿತರೆ ಭಾಗಗಳಲ್ಲಿ ಸಂಚರಿಸಲು ಕ್ಷೇತ್ರದ ವಿದ್ಯಾರ್ಥಿಗಳು ಹಾಗೂ ಜನತೆಗೆ ಅನುಕೂಲವಾಗಲಿದೆ. ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ಸಿಗಲಿದೆ ಎಂದು ಹೇಳಿದರು.

ಪ್ರತಿದಿನ ಸಮಯಕ್ಕೆ ಬಸ್ ಸಂಚರಿಸಬೇಕು. ಉತ್ತಮ ಚಾಲಕ ಮತ್ತು ನಿರ್ವಾಹಕರನ್ನು ನಿಯೋಜಿಸಬೇಕು. ಬಸ್ ಸೇವೆಯಲ್ಲಿ ಜನತೆಗೆ ಯಾವುದೇ ರೀತಿಯ ಅನಾನುಕೂಲ ಆಗದಂತೆ ನೋಡಿಕೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು. ಇದೇ ವೇಳೆ ಬಸ್ ನಲ್ಲಿ ಸಂಚರಿಸಿ ವ್ಯವಸ್ಥೆಯನ್ನು ಪರಿಶೀಲಿಸಿದರು.

ಕೆಎ???ರ್ಟಿಸಿ ಬೀದರ ವಿಭಾಗೀಯ ನಿಯಂತ್ರಣಾಧಿಕಾರಿ ರಾಜೇಂದ್ರ ಜಾಧವ, ವಿಭಾಗೀಯ ಸಂಚಾರಿ ವ್ಯವಸ್ಥಾಪಕ ರಾಜಶೇಖರ ತಳಘಾಟಕರ, ನಿಲ್ದಾಣ ಅಧಿಕಾರಿ ಅಣ್ಣಾರಾವ ಧೂಳಗುಂಡೆ, ಸಂಚಾರಿ ನಿಯಂತ್ರಕರಾದ ಅನುಪಮಾ, ಬಾಬುರಾವ, ತುಕಾರಾಮ ಮುಖಂಡರಾದ ಧೊಂಡಿಬಾ ನರೋಟೆ, ಶಿವರಾಜ ಅಲ್ಮಾಜೆ, ಪ್ರವೀಣ ಕಾರಬಾರಿ, ಭರತ ಕದಂ, ಸುಜಿತ ರಾಠೋಡ ಸೇರಿದಂತೆ ಇತರರಿದ್ದರು.

*ಅಶುಚಿತ್ವಕ್ಕಾಗಿ ಅಧಿಕಾರಿಗಳ ತರಾಟೆ:* ಶಾಸಕರು ಬಸ್ ನಿಲ್ದಾಣದ ಆವರಣದಲ್ಲಿ ಸಂಚರಿಸಿ ವ್ಯವಸ್ಥೆಯನ್ನು ಪರಿಶೀಲಿಸಿದರು. ಈ ವೇಳೆ ಆವಣದಲ್ಲಿ ಕಸ ಬಿದ್ದಿರುವುದನ್ನು ಕಂಡು, ಜನತೆಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಉತ್ತಮ ಬಸ್ ನಿಲ್ದಾಣವನ್ನು ನಿರ್ಮಿಸಲಾಗಿದೆ. ಇದನ್ನು ಶುದ್ಧವಾಗಿ ಇಟ್ಟುಕೊಳ್ಳಲು ಏನು ಸಮಸ್ಯೆ ಎಂದು ಅಧಿಕಾರಿಗಳಿಗೆ ತೀವ್ರ ತರಾಟೆಗೆ ತೆಗೆದುಕೊಂಡರು.

ಬಸ್ ನಿಲ್ದಾಣದಲ್ಲಿ ಎಲ್ಲಿಯೂ ಕಸ ಕಾಣಬಾರದು. ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯಿರಬೇಕು. ಕೆಟ್ಟಿರುವ ಎಲ್ಲ ನೀರಿನ ನಲ್ಲಿಗಳನ್ನು ಸರಿಪಡಿಸಬೇಕು. ಅನುದಾನ ಬೇಕಿದ್ದಲ್ಲಿ ನನಗೆ ಕೇಳಿ ಒದಗಿಸುತ್ತೇನೆ. ಆದರೆ ಜನತೆಗೆ ಯಾವುದೇ ರೀತಿಯ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕೆಂದು ನಿರ್ದೇಶನ ನೀಡಿದರು.

# ಗೊಂದಲಕ್ಕೆ ಒಳಗಾಗದೇ ಗಣತಿಯಲ್ಲಿ ಲಿಂಗಾಯತ ಬರೆಸಿ: ಬಸವರಾಜ ಬುಳ್ಳಾ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.15: ಲಿಂಗಾಯತರು ಯಾವುದೇ ಗೊಂದಲಕ್ಕೆ ಒಳಗಾಗದೇ ಸದ್ಯದಲ್ಲಿ ಸರ್ಕಾರ ನಡೆಸಲಿರುವ ಗಣತಿ ಕಾರ್ಯಕ್ರಮದಲ್ಲಿ, ಧರ್ಮದ ಕಾಲಂನಲ್ಲಿ ಇತರೆ ಧರ್ಮಯನ್ನುವ ಸ್ಥಳದಲ್ಲಿ ಲಿಂಗಾಯತ ಎಂದು ಬರೆಸಿ ಎಂದು ಜಾಗತಿಕ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಉಪಾಧ್ಯಕ್ಷ ಬಸವರಾಜ ಬುಳ್ಳಾ ಹೇಳಿದರು.

ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿಯ ಕುಂಬಾರ ಗುಂಡಯ್ಯಾ ಕಲ್ಯಾಣ ಮಂಟಪದಲ್ಲಿ ಜಾಗತಿಕ ಲಿಂಗಾಯತ ಮಹಾಸಭಾ ಸೇರಿದಂತೆ ವಿವಿಧ ಬಸವಪರ ಸಂಘಟನೆಗಳು ಭಾನುವಾರ ಕರೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು. ಬೀದರನಿಂದಲೇ ಪ್ರಾರಂಭವಾದ ಲಿಂಗಾಯತ ಧರ್ಮ ಮಾನ್ಯತೆಯ ಹೋರಾಟದ ಫಲವಾಗಿ ಕರ್ನಾಟಕ ಸರ್ಕಾರ ನ್ಯಾಯಮೂರ್ತಿ ನಾಗಮೋಹನದಾಸ್ ಸಮಿತಿಯನ್ನು ನೇಮಿಸಿ, ಸಮಿತಿ ನೀಡಿದ ವರದಿಯ ಪ್ರಕಾರ ಲಿಂಗಾಯತ ಧರ್ಮ ಮಾನ್ಯತೆಗಾಗಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿತ್ತು. ಆದರೆ ಕೇಂದ್ರ ಸರ್ಕಾರ ಸದರಿ ಪ್ರಸ್ತಾವನೆಯನ್ನು ಮಾರ್ಪಾಡುವಾಡುವಂತೆ ಹಿಂದಿರುಗಿ



ಕಳಿಸಿದೆ. ಲಿಂಗಾಯತ ಧರ್ಮ ಮಾನ್ಯತೆಯ 80% ಕಾರ್ಯ ಮುಗಿದಿದೆ. ಇನ್ನು ಕೆಲವೇ ದಿನಗಳಲ್ಲಿ ಲಿಂಗಾಯತ ಧರ್ಮಕ್ಕೆ ಸ್ವತಂತ್ರ ಮಾನ್ಯತೆ ಸಿಗುತ್ತದೆ. ಹೀಗಾಗಿ ಬಸವಣ್ಣನವರನ್ನು ಪೂಜಿಸುವ ಎಲ್ಲರೂ ಲಿಂಗಾಯತರೇ ಆಗಿದ್ದು, ಇದೇ ತಿಂಗಳಿನಲ್ಲಿ ನಡೆಯಲಿರುವ ಗಣತಿ ಕಾರ್ಯದಲ್ಲಿ ಎಲ್ಲರೂ ಧರ್ಮ ಕಾಲಂ ನ ಇತರೆ ಧರ್ಮ ಎನ್ನುವ ಸ್ಥಳದಲ್ಲಿ ಲಿಂಗಾಯತ ಎಂದು ಬರೆಸಿ, ಜಾತಿ, ಉಪಜಾತಿ ಕಾಲಂ ಗಳಲ್ಲಿ ತಮ್ಮ ತಮ್ಮ ಕುಲಕಸುಬಿನ ಜಾತಿಗಳನ್ನು ಬರೆಸಬೇಕು. ದೇಶದ ಪ್ರಥಮ ಜನಗಣತಿ 1871 ರಲ್ಲಿ ನಡೆಯಿತು. ಅಂದು ಬ್ರಿಟಿಷ್ ಸರ್ಕಾರ ಅಧಿಕಾರದಲ್ಲಿತ್ತು, ಆಗಲೂ ಲಿಂಗಾಯತ ಒಂದು ಧರ್ಮ ಎಂದು ಗುರುತಿಸಿದೆ. ಆದರೆ ಮುಂಬರುವ ದಿನದಲ್ಲಿ ಮೈಸೂರ ರಾಜ್ಯದ ದಿವಾನರು ಲಿಂಗಾಯತ ಧರ್ಮವನ್ನು ಮರೆಮಾಚಿದ್ದಾರೆ ಎಂದು ಹೇಳಿದರು.

ಜಾಗತಿಕ ಲಿಂಗಾಯತ ಮಹಾಸಭಾದ ರಾಜ್ಯ ಕಾರ್ಯದರ್ಶಿ ಕಿರಣಕುಮಾರ ಖಂಡ್ರೆ ಮಾತನಾಡಿ, ಇದೇ ಅ.5 ರಂದು ಬೆಂಗಳೂರಿನಲ್ಲಿ ನಡೆಯಲಿರುವ ಬಸವ ಸಂಸ್ಕೃತಿ ಉತ್ಸವ ಕಾರ್ಯಕ್ರಮದಲ್ಲಿ ಲಿಂಗಾಯತ ಮಠಾಧೀಶರು ಸೇರಿದಂತೆ ಸುಮಾರು 1 ಲಕ್ಷ ಜನರು ಸೇರುವ ನಿರೀಕ್ಷೆ ಇದೆ. ಬೀದರ ಜಿಲ್ಲೆ ಹಾಗು ಭಾಲ್ಕಿಯಿಂದಲೂ ಬರುವ ಬಸವ ಅನುಯಾಯಿಗಳಿಗೆ ಸಾರಿಗೆ ವ್ಯವಸ್ಥೆ ಮಾಡಿಕೊಳ್ಳಲಾಗುವುದು. ಕಾರಣ ಹೆಚ್ಚಿನ ಸಂಖೆಯಲ್ಲಿ ಈ ಕಾರ್ಯಕ್ರಮದಲ್ಲಿ ಸೇರಬೇಕು ಎಂದು ಮನವಿ ಮಾಡಿದರು.

ರಾಷ್ಟ್ರೀಯ ಬಸವದಳದ ಮುಖಂಡ ಶ್ರೀಕಾಂತ ಬೋರೋಳೆ ಮಾತನಾಡಿ, ಬಸವಕಲ್ಯಾಣದಲ್ಲಿ ನಡೆಯಲಿರುವ 3 ದಿನಗಳ ಕಲ್ಯಾಣ ಪರ್ವ ಕಾರ್ಯಕ್ರಮದಲ್ಲಿ ಹೆಚ್ಚಿನ ಜನರು ಸೇರಿ ಕಾರ್ಯಕ್ರಮವನ್ನು ಯಶಸ್ವಿ ಗೊಳಿಸಬೇಕು ಎಂದು ಹೇಳಿದರು. ನಂತರ ಕಲ್ಯಾಣ ಪರ್ವ ಕಾರ್ಯಕ್ರಮದ ವಾಲ್ ಪೋಸ್ಟರ್ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಬಸವದಳದ ಮಲ್ಲಿಕಾರ್ಜುನ ಡೊಣಗಾಪೂರ,

ವಚನ ಸಾಹಿತ್ಯ ಪರಿಷತ್‌ನ ಗುಂಡಪ್ಪ ಸಂಗಮಕರ, ಸತೀಷ ಅಪ್ಪೂರಿ, ಬಸವರಾಜ ಮುರೆ, ಸಂಜೀವಕುಮಾರ ಪಾಟೀಲ, ಗುಂಡಪ್ಪಾ ಗಂಧಗೆ, ತಾನಾಜಿ ಕಮಠಾಣೆ, ಸಂಗಮೇಶ ಗಾಮಾ, ನಾಗಶೆಟ್ಟಿ ಚೋಳಾ, ಕಂಟೆಪ್ಪಾ ಕಾಶೆಪ್ಪ ಗಂಧಿಗುಡೆ, ಮಹಾದೇವ ಭಾತಂಬ್ರಾ, ಕಿಶನರಾವ ಪಾಟೀಲ ಇಂಚೂರಕರ ಉಪಸ್ಥಿತರಿದ್ದರು.

ಇದೇ ಸೆ.19 ರಂದು ಕೆಲವು ಮಠಾಧೀಶರು ಮತ್ತು ವೀರಶೈವ ಲಿಂಗಾಯತ ಮುಖಂಡರು ಹುಬ್ಬಳ್ಳಿಯಲ್ಲಿ ಏಕತಾ ಸಮಾವೇಶ ಹಮ್ಮಿಕೊಂಡಿದ್ದಾರೆ, ಅವರೆಲ್ಲರೂ ಬಸವಣ್ಣನೇ ಧರ್ಮಗುರು, ವಚನ ಸಾಹಿತ್ಯವೇ ಧರ್ಮಗ್ರಂಥ ಎಂದು ಒಪ್ಪಿಕೊಂಡು ಲಿಂಗಾಯತ ಧರ್ಮ ಮಾನ್ಯತೆಗೆ ಸಹಕರಿಸಿದರೆ, ಅವರ ಏಕತಾ ಸಮಾವೇಶದಲ್ಲಿ ಐಕ್ಯತೆ ಮೂಡುತ್ತದೆ.
–ಬಸವರಾಜ ಬುಳ್ಳಾ, ಉಪಾಧ್ಯಕ್ಷರು, ಜಾಗತಿಕ ಲಿಂಗಾಯತ ಮಹಾಸಭಾ.

# ಪ್ರಾಥಮಿಕ ಬಾಲ್ಯ ಆರೈಕೆ ಮತ್ತು ಶಿಕ್ಷಣ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಸೆ.15:ತಾಲೂಕಿನ ಡಿಗ್ಗಿ ಗ್ರಾಮದ ಅಂಗನವಾಡಿ ಕೇಂದ್ರ–1 ರಲ್ಲಿ ಪ್ರಾಥಮಿಕ ಬಾಲ್ಯ ಆರೈಕೆ ಮತ್ತು ಶಿಕ್ಷಣ ಇಸಿಸಿಇ ಪೋಷಣ ಶಿಬಿರ ಕಾರ್ಯಕ್ರಮ ಸೋಮವಾರ ಜರುಗಿತು.

ಮಕ್ಕಳಿಗೆ ಆಹಾರ ಮತ್ತು ತಿಂಡಿ–ತಿನ್ನುಸು ಬಗ್ಗೆ ಹೇಳಲಾಯಿತು. ಮನೆಯಲ್ಲಿ ಅಡುಗೆ ಮಾಡುವ ಸ್ವಚ್ಚತೆ ವಹಿಸಬೇಕು, ಅಡುಗೆ ಕೊನೆಯಲ್ಲಿ ಗೂಬ್ಬು ನಾರುವ ಕೆಟ್ಟ ತರಕಾರಿ ಇಡಬಾರದು. ಅಂಗಡಿ ಎಲ್ಲ ಸಿಗುವ ಮತ್ತು



ಎಣ್ಣೆ ಪದಾರ್ಥದಿಂದ ಮಾಡಿದ ತಿನ್ನುಸುಗಳನ್ನು ತಿನ್ನಬಾರದು ಎಂದು ಅಂಗನವಾಡಿ ಕಾರ್ಯಕರ್ತೆ ಸವಿತಾ ರಾಂಪುರೆ ಮಕ್ಕಳಿಗೆ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಏನ್.ಆರ್. ಎಮ್ ಪ್ರಯಾಗಬಾಯಿ, ಅಡುಗೆ ಸಿಬ್ಬಂದಿ ಸೇರಿದಂತೆ ಸರಕಾರಿ ಶಾಲೆಯ ಮಕ್ಕಳು ಇದ್ದರು.

'ಅಗೆಯುವ ಮೊದಲು ಡಯಲ್ ಮಾಡಿ' ಎಂದು ಅನಿಲದ ಬಗ್ಗೆ ಸುರಕ್ಷತೆಯ ಜಾಗೃತಿ ಮೂಡಿಸುವ ಬಗ್ಗೆ ಯೋಚಿಸಿ

# ಪೈಪ್‌ಲೈನ್ ಹಾನಿಯ ನಂತರ ಕಂಪನಿಯು ನಗರ ಅನಿಲ ಪೂರೈಕೆಯನ್ನು ತ್ವರಿತವಾಗಿ ಪುನಃಸ್ಥಾಪಿಸುತ್ತದೆ

ಮಲ್ಲಮ್ಮ ನುಡಿ ವಾರ್ತೆ


ಮೈಸೂರು: ಸೆ.15– 12ನೇ ಸೆಪ್ಟೆಂಬರ್ 2025: ಮೈಸೂರಿನ ಹೂಟಗಳ್ಳಿಯಕೆಎಚ್‌ಬಿಕಾಲೋನಿಯಲ್ಲಿ ಅನಧಿಕೃತ ಸಿವಿಲ್ ಕಾಮಗಾರಿಗಳ ಸಮಯದಲ್ಲಿಪೈಪ್‌ಲೈನ್ ಆಕಸ್ಮಿಕವಾಗಿ ಹಾನಿಗೊಳಗಾದ ನಂತರ, ಥಿಂಕ್ ಗ್ಯಾಸ್ (ಹಿಂದೆ ಎಜಿ & ಪಿ ಪ್ರಥಮ್ ಎಂದು ಕರೆಯಲಾಗುತ್ತಿತ್ತು) ಸ್ಥಾಪಿಸಿದ ನಗರ ಅನಿಲ ಸರಬರಾಜಿನಲ್ಲಿ ಇತ್ತೀಚೆಗೆ ಸ್ವಲ್ಪ ಸಮಯ ಅಡಚಣೆ ಉಂಟಾಯಿತು. ಥಿಂಕ್ ಗ್ಯಾಸ್ ತುರ್ತು ಪ್ರತಿಕ್ರಿಯೆ ತಂಡವು ಹಾನಿಗೆ ಒಳಗಾದ ವಿಭಾಗವನ್ನು ಪ್ರತ್ಯೇಕಿಸಿ ಕಡಿಮೆ ಸಮಯದಲ್ಲಿ ಅನಿಲ ಸರಬರಾಜನ್ನು ಪುನಃಸ್ಥಾಪಿಸುವ ಮೂಲಕ ಸಾರ್ವಜನಿಕ ಸುರಕ್ಷತೆಯನ್ನು ಖಚಿತಪಡಿಸಿತು ಮತ್ತು ನಿವಾಸಿಗಳಿಗೆ ಅನಾನುಕೂಲತೆಯನ್ನು ಕಡಿಮೆ ಮಾಡಿತು.

ಮನೆಗಳಿಗೆ ಪೈಪ್ಡ್ ನ್ಯಾಚುರಲ್ ಗ್ಯಾಸ್ (ಕಓಉ) ಮತ್ತು ಸಾರಿಗೆ ಬಳಕೆದಾರರಿಗೆ ಸಂಕುಚಿತ ನೈಸರ್ಗಿಕ ಅನಿಲ (ಅಓಉ) ಪೂರೈಸಲು ಥಿಂಕ್ ಗ್ಯಾಸ್ ಮೈಸೂರು ಜಿಲ್ಲೆಯಲ್ಲಿ ಬಲಿಷ್ಠವಾದ ಪೈಪ್‌ಲೈನ್ ಮೂಲಸೌಕರ್ಯವನ್ನು ಸ್ಥಾಪಿಸಿದೆ. ಪೈಪ್‌ಲೈನ್ ಮಾರ್ಗದಲ್ಲಿ ಗೋಚರಿಸುವ ಮಾರ್ಗ ಗುರುತುಗಳು, ಎಚ್ಚರಿಕೆಯ ಫಲಕಗಳು ಮತ್ತು ತುರ್ತು ಸಂಪರ್ಕ ಫಲಕಗಳಿದ್ದರೂ, ಉತ್ಖನನದಲ್ಲಿ ತೊಡಗಿರುವ ಗುತ್ತಿಗೆದಾರರು ಕೆಲಸವನ್ನು ಪ್ರಾರಂಭಿಸುವ ಮೊದಲು ಥಿಂಕ್ ಗ್ಯಾಸ್‌ಗೆ ತಿಳಿಸಲು ವಿಫಲರಾಗಿದ್ದಾರೆ ಮತ್ತು ಯಾವುದೇ ಘಟನೆಯ ನಂತರದ ವರದಿಯನ್ನು ಸಲ್ಲಿಸಿಲ್ಲ.

ಸರ್ಕಾರಿ ನಿಯಮಗಳ ಪ್ರಕಾರ, ಉತ್ಖನನ ಕಾರ್ಯವನ್ನು ಕೈಗೊಳ್ಳಲು ಯೋಜಿಸುತ್ತಿರುವ ಯಾವುದೇ ಮೂರನೇ ವ್ಯಕ್ತಿಯು ನಗರ ಪುರಸಭೆ ಅಧಿಕಾರಿಗಳಿಗೆ ಅಥವಾ ನಗರ ಅನಿಲ ವಿತರಣಾ ಕಂಪನಿಗೆ 'ಡಯಲ್ ಬಿಫೋರ್ ಯು ಡಿಗ್' ಸಂಪರ್ಕ ಸಂಖ್ಯೆಯ ಮೂಲಕ ತಿಳಿಸಬೇಕು. ಕಂಪನಿಗೆ ಪೂರ್ವ ಸೂಚನೆಯಿಲ್ಲದೆ ಈ ಘಟನೆ ಸಂಭವಿಸಿದ್ದು, ಥಿಂಕ್ ಗ್ಯಾಸ್ ಜವಾಬ್ದಾರಿಯುತ ಪಕ್ಷದ ವಿರುದ್ಧ ಅಧಿಕೃತ ದೂರು ದಾಖಲಿಸಲು ಪ್ರೇರೇಪಿಸಿತು. ಐಪಿಸಿ ಸೆಕ್ಷನ್ 285 ಮತ್ತು 336 ರ ಅಡಿಯಲ್ಲಿ ಪ್ರಸ್ತುತ ಕಾನೂನು ನಿಬಂಧನೆಗಳ ಪ್ರಕಾರ, ಅಂತಹ ಅನಧಿಕೃತ ಹಾನಿಯು 3 ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ₹25 ಕೋಟಿಗಳವರೆಗೆ ದಂಡ ವಿಧಿಸಬಹುದಾದ ಅಪರಾಧವಾಗಿದೆ.

ಥಿಂಕ್ ಗ್ಯಾಸ್, ಎಲ್ಲಾ ಗುತ್ತಿಗೆದಾರರು, ಏಜೆನ್ಸಿಗಳು ಮತ್ತು ವ್ಯಕ್ತಿಗಳು ಈ ಸುರಕ್ಷತಾ ಅವಶ್ಯಕತೆಗಳನ್ನು ಪಾಲಿಸಬೇಕೆಂದು ಒತ್ತಾಯಿಸುತ್ತದೆ. ಯಾವುದೇ ಅಗೆಯುವ ಚಟುವಟಿಕೆಯ ಮೊದಲು ಥಿಂಕ್ ಗ್ಯಾಸ್ ಅನ್ನು ಸಂಪರ್ಕಿಸಲು ಟೋಲ್–ಫ್ರೀ ಸಂಖ್ಯೆ 1800 2022 999.

ಥಿಂಕ್ ಗ್ಯಾಸ್ ಬಗ್ಗೆ: ಂಉ&ಕ ಪ್ರಥಮ್ ಮತ್ತು ಥಿಂಕ್ ಗ್ಯಾಸ್‌ನ




ವಿಲೀನಗೊಂಡ ಘಟಕವಾದ ಥಿಂಕ್ ಗ್ಯಾಸ್, ಈಗ ಥಿಂಕ್ ಗ್ಯಾಸ್ ಆಗಿ ಕಾರ್ಯನಿರ್ವಹಿಸುತ್ತಿದೆ, ಇದು ಭಾರತೀಯ ನಗರ ಅನಿಲ ವಿತರಣಾ (ಅಉಆ) ವ್ಯವಹಾರದಲ್ಲಿ ಪ್ರಮುಖ ಆಟಗಾರ. ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ನಿಯಂತ್ರಣ ಮಂಡಳಿ (ಕಓಉಖಃ) ನಿಂದ ನೀಡಲಾದ 19 ಅಉಆ ಪರವಾನಗಿಗಳನ್ನು ನಾವು ಹೊಂದಿದ್ದೇವೆ, ಇವುಗಳನ್ನು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ (ಒಓಕಓಉ) ಆಶ್ರಯದಲ್ಲಿ ಆಂಧ್ರಪ್ರದೇಶ, ಬಿಹಾರ, ಹಿಮಾಚಲ ಪ್ರದೇಶ, ಕರ್ನಾಟಕ, ಕೇರಳ, ಮಧ್ಯಪ್ರದೇಶ, ಪಂಜಾಬ್, ರಾಜಸ್ಥಾನ, ಉತ್ತರ ಪ್ರದೇಶ ಮತ್ತು ತಮಿಳುನಾಡು ಈ 10 ರಾಜ್ಯಗಳ 49 ಜಿಲ್ಲೆಗಳಲ್ಲಿ ಅಉಆ ಮೂಲಸೌಕರ್ಯವನ್ನು ಪ್ರತ್ಯೇಕವಾಗಿ ಅಭಿವೃದ್ಧಿಪಡಿಸಲು ಮತ್ತು ನೈಸರ್ಗಿಕ ಅನಿಲವನ್ನು ಒದಗಿಸಲು ಬಳಸಲಾಗುತ್ತದೆ.

ನಮ್ಮ ಅಉಆ ಜಾಲ ವಾಹನಗಳಲ್ಲಿ ಬಳಸಲು, ಸಂಕುಚಿತ ನೈಸರ್ಗಿಕ ಅನಿಲ (ಅಓಉ) ಹಾಗೂ ಮನೆಗಳು, ವಾಣಿಜ್ಯ ಸಂಸ್ಥೆಗಳು ಮತ್ತು ಕೈಗಾರಿಕೆಗಳಿಗೆ ಪೈಪ್ಡ್ ನೈಸರ್ಗಿಕ ಅನಿಲ (ಕಓಉ) ಪೂರೈಸುತ್ತದೆ. ಮುಂದಿನ ಕೆಲವು ವರ್ಷಗಳಲ್ಲಿ, ನಮ್ಮ ಜಾಲ 24,000 ಇಂಚು–ಕಿಮೀ ಉಕ್ಕಿನ ಪೈಪ್‌ಲೈನ್‌ಗಳು, 100 ಮಿಲಿಯನ್‌ಗಿಂತಲೂ ಹೆಚ್ಚು ಗ್ರಾಹಕರ ಅಗತ್ಯಗಳನ್ನು ಪೂರೈಸುವ 2000+ ಅಓಉ ಕೇಂದ್ರಗಳನ್ನು ಒಳಗೊಂಡಿರುತ್ತದೆ ಮತ್ತು 324,000 ಚದರ ಕಿಲೋಮೀಟರ್‌ಗಳನ್ನು ಒಳಗೊಂಡಿದೆ.

ಭಾರತದಲ್ಲಿ ಗ್ರೀನ್‌ಫೀಲ್ಡ್ ಅಉಆ ವ್ಯವಹಾರದಲ್ಲಿ ಥಿಂಕ್ ಗ್ಯಾಸ್ ಅತಿ ದೊಡ್ಡ ವಿದೇಶಿ ನೇರ ಹೂಡಿಕೆ (ಈಆಖ) ಹೊಂದಿದೆ. ನಮ್ಮ ಪ್ರಮುಖ ಹೂಡಿಕೆದಾರರಲ್ಲಿ ಖ–ಸ್ಕ್ವೇರ್ಡ್ ಕ್ಯಾಪಿಟಲ್ ಮತ್ತು OSAKA ಗ್ಯಾಸ್‌ನ ಜಪಾನಿನ ಒಕ್ಕೂಟ, ಎಖಿಖಓ, ಸುಮಿಟೊಮೊ ಕಾರ್ಪೊರೇಷನ್ ಮತ್ತು ಕೊನೊಯಿಕೆ ಟ್ರಾನ್ಸ್‌ಪೋರ್ಟ್ ಸೇರಿವೆ.

ಸುರಕ್ಷತೆ, ಇಖಉ, ಮಾರ್ಕೆಟಿಂಗ್, ಅಖಓ, ಸಂಗ್ರಹಣೆ, ಸುಸ್ಥಿರತೆ ಮತ್ತು ಅಪಾಯ ನಿರ್ವಹಣೆ – ಎಲ್ಲಾ ವ್ಯವಹಾರ ಪದ್ಧತಿಗಳಲ್ಲಿ ನಮ್ಮ ಕೊಡುಗೆಗಳಿಗಾಗಿ ವಿವಿಧ ಕೈಗಾರಿಕಾ ವೇದಿಕೆಗಳಲ್ಲಿ ನಮ್ಮ ಪ್ರಯತ್ನಗಳಿಗಾಗಿ ನಾವು ಗುರುತಿಸಲ್ಪಟ್ಟಿದ್ದೇವೆ.

# ಸರ್.ಎಂ.ವಿಶ್ವೇಶ್ವರಯ್ಯ ನವರ ಕಾರ್ಯ ಇಂದಿಗೂ ದೇಶಕ್ಕೆ ಮಾದರಿ: ಇ.ಓ.ಸುಲ್ಪಿ ಸರ್



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯ ಅವರು ಮಾಡಿರುವ ಕಾರ್ಯಗಳನ್ನು ಇಂದಿಗೂ ದೇಶಕ್ಕೆ ಮಾದರಿಯಾಗಿವೆ ಎಂದರು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಮೇಶ ಸುಲ್ಪಿ ಸರ್ ಹೇಳಿದರು.

ನಗರದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಎಂಜನೀಯರ ದಿನಾಚರಣೆ ಅಂಗವಾಗಿ ಭಾರತ ರತ್ನ ಸರ್. ಎಂ.ವಿಶ್ವೇಶ್ವರಯ್ಯನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿ, ಅವರ ಕಾಲದಲ್ಲಿ ನಿರ್ಮಿಸಲಾದ ಡ್ಯಾಂಗಳು ಇಂದಿಗೂ ಅದೇಷ್ಟೋ ರೈತರಿಗೆ ವರದಾನವಾಗಿ ಪರಿಣಮಿಸಿವೆ ಎಂದದರು. ಹೀಗಾಗಿ ಎಂಜನೀಯರ ಹುದ್ದೆಯಲ್ಲಿ ಇರುವವರ ಮೇಲೆ ಸಾಕಷ್ಟು ಜವಬ್ದಾರಿಗಳಿವೆ. ಆದ್ದರಿಂದ ನಮ್ಮ ವೃತ್ತಿಯನ್ನು ನಾವು ಶೃದ್ಧಾ ಭಕ್ತಿಯಿಂದ ಸಲ್ಲಿಸುವ ಮೂಲಕ ಯಶಶ್ವಿ ಆಗೋಣ ಎಂದರು. ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕರಾದ(ಪಂ.ರಾ) ಅರುಣಕುಮಾರ ಪಾಟೀಲ್ ಸರ್ ಅವರು ಮಾತನಾಡಿ, ಸರ್.ಎಂ.ವಿಶ್ವೇಶ್ವರಯ್ಯ ನವರು ದೇಶಕ್ಕೆ ಸಾಕಷ್ಟು ಕೊಡುಗೆಗಳನ್ನು ನೀಡಿದ್ದು, ಅವರು ಅಸಾಧ್ಯವಾದದ್ದು ಸಾಧಿಸಿ ತೋರಿಸಿದ್ದಾರೆ ಆದ್ದರಿಂದ ದೇಶದ ಜನ ಅವರನ್ನು ಇಂದಿಗೂ ಮರೆತ್ತಿಲ್ಲ ಎಂದರು. ನಂತರ ತಾಂತ್ರಿಕ ಸಂಯೋಜಕರಾದ ಶಿವರಾಜ ಪಾಟೀಲ್ ಅವರು ದಿನಾಚರಣೆ ಕುರಿತು ಮಾತನಾಡಿದರು. ಈ ಸಂಧರ್ಭದಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ಹಾಗೂ ನರೇಗಾ ತಾಂತ್ರಿಕ ಸಹಾಯಕರು, ಸಿಬ್ಬಂದಿಗಳು ಸೇರಿದಂತೆ ಮತ್ತಿತರರು ಇದ್ದರು. ಪಿಡಿಒ ಚಂದ್ರಾಮ ಧೂಳಖೇಡ ನಿರೂಪಿಸಿದರು. ಪಿಡಿಒ ಎ.ಕೆ. ಆನಂದ ವಂದಿಸಿದರು.

# ಡಿಸಿಸಿ ಬ್ಯಾಂಕ್ ನಿರ್ದೇಶಕ ಸ್ಥಾನಕ್ಕೆ ಉಮೇಶ ಕುಲಕರ್ಣಿ ನಾಮಪತ್ರ ಸಲ್ಲಿಕೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಬೀದರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ (ಡಿಸಿಸಿ ಬ್ಯಾಂಕ್) ನಿರ್ದೇಶಕ ಸ್ಥಾನಕ್ಕೆ ಸೆಪ್ಟೆಂಬರ್ 23ರಂದು ನಡೆಯಲಿರುವ ಚುನಾವಣೆಗೆ (ಅ) ವರ್ಗದಿಂದ ಉಮೇಶ ಪಾಂಡುರಂಗ ಕುಲಕರ್ಣಿ ಇವರು ಡಿಸಿಸಿ ಬ್ಯಾಂಕ್ ಕೇಂದ್ರ ಕಚೇರಿಯಲ್ಲಿ ಸೋಮುವಾರ ಚುನಾವಣಾಧಿಕಾರಿ ಸುರೇಖಾ ರವರಿಗೆ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಆರ್.ಪಾಟೀಲ, ತಾಲೂಕ ಪಂಚಾಯತ ಮಾಜಿ ಸದಸ್ಯ ಶ್ರೀಮಂತ ಪಾಟೀಲ್, ಚಂದ್ರಶೇಖರ ಪಾಟೀಲ ಅಲ್ಲೂರ್, ಸಿದ್ದು ಪಾಟೀಲ್ ಬೆಳಕೇರಾ, ಚಂದ್ರಶೇಖರ ಪಾವಡಶಟ್ಟಿ, ವೀರೇಶ ತುಗಾಂವ, ರವಿ ಪಾಟೀಲ್ ಕೂಡಂಬಲ್, ಶಿವಾನಂದ ಹಜಾರೆ, ಶ್ರೀಕಾಂತ ಕುಲಕರ್ಣಿ, ಗುರುರಾಜ ಕುಲಕರ್ಣಿ, ಪ್ರಕಾಶ ವಣಕೇರಿ, ಬಾಬುರಾವ ಪಾಟೀಲ್, ರಹಿಂ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶ್ರೀಮದ್ ರಂಭಾಪುರಿ ಜಗದ್ಗುರುಗಳವರ ದಸರಾ ಧರ್ಮ ಸಮ್ಮೇಳನದ ಆಮಂತ್ರಣ ಪತ್ರಿಕೆ ಬಿಡುಗಡೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಸೆ 15

ನಾಡಿನಲ್ಲಿ ವಿಶೇಷ ಹಾಗೂ ವಿಶಿಷ್ಟವಾದ ಧರ್ಮ ಕಾರ್ಯ ಹಾಗೂ ದಾಸೋಹವನ್ನು ನಿರಂತರವಾಗಿ ನಡೆಸಿಕೊಂಡು ಬರುತ್ತಿರುವ ಶ್ರೀಮಠವೆಂದರೆ ಹಾರಕೂಡ ಮಠ ಎಂದು ಶಾಸಕರಾದ ಶರಣು ಸಲಗರ ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಜರುಗಿದ ಶ್ರೀಮದ್ ರಂಭಾಪುರಿ ಜಗದ್ಗುರುಗಳವರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ ಆಮಂತ್ರಣ ಪತ್ರಿಕೆ ಬಿಡುಗಡೆ ಸಮಾರಂಭ ಉದ್ಘಾಟಿಸಿ ಮಾತನಾಡಿ ಶ್ರೀಮಠದ ಪೀಠಾಧಿಪತಿಗಳಾದ ಪೂಜ್ಯ ಡಾ. ಚನ್ನವೀರ ಶಿವಾಚಾರ್ಯರು ಅದ್ಭುತ ವ್ಯಕ್ತಿತ್ವ ಉಳ್ಳವರಾಗಿದ್ದು, ಇಂತಹ ಯತಿವರ್ಯರನ್ನು ಪಡೆದ ಭಕ್ತರು ಧನ್ಯರು.

ಇಂತಹ ಪೂಜ್ಯನೀಯ ಗುರುಗಳ ಗೌರವಾಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 2 ರ ವರೆಗೆ ಶರನ್ನವರಾತ್ರಿ ಧರ್ಮ ಸಮ್ಮೇಳನ ನಡೆಯುತ್ತಿರುವುದು ನಮ್ಮೆಲ್ಲರ ಭಾಗ್ಯ.

ಈ ಕಾರ್ಯಕ್ರಮದಲ್ಲಿ 5 ದಿನದ ದಾಸೋಹ ಹಾರಕೂಡ ಶ್ರೀಮಠದಿಂದ ನಡೆಯುತ್ತಿರುವುದು ಪೂಜ್ಯರ ದಾಸೋಹ ಪ್ರೇಮಕ್ಕೆ ನಿದರ್ಶನ.

ಸಮಾಜದಲ್ಲಿ ಶಾಂತಿ ಸಾಮರಸ್ಯ ಸಹಬಾಳ್ವೆ ಧರ್ಮ ಸಂಸ್ಕಾರ ನೀಡುವ ಘನ ಉದ್ದೇಶದಿಂದ ಆಯೋಜಿಸಿರುವ ಶರನ್ನವರಾತ್ರಿ ಧರ್ಮ ಸಮ್ಮೇಳನಕ್ಕೆ ಅಧಿಕ ಸಂಖ್ಯೆಯಲ್ಲಿ ಭಕ್ತರು ಆಗಮಿಸಬೇಕೆಂದು ಹಾರಕೂಡ ಶ್ರೀಗಳ ಆಶೀರ್ವಾದದೊಂದಿಗೆ ನಾಡಿನ ಜನತೆಗೆ ಪ್ರೀತಿಯಿಂದ ಆಮಂತ್ರಿಸುತ್ತೇವೆ ಎಂದು ನುಡಿದರು.

ಪದಾಧಿಕಾರಿಗಳಾದ ದಯಾನಂದ ಶೀಲವಂತ, ಜಗನ್ನಾಥ ಪಾಟೀಲ ಮಂಠಾಳ, ಮೇಘರಾಜ ನಾಗರಾಳೆ, ಸಿದ್ರಾಮಪ್ಪ ಗುದಗೆ, ಸುಭಾಶ ಮುರುಡ, ಸೂರ್ಯಕಾಂತ ಸಂಗೋಳಗಿ, ಎ. ಜಿ. ಪಾಟೀಲ, ಸಂಗಣ್ಣ ಪಾಟೀಲ ಅರಿ ಜಂಬಗಾ, ಸೂರ್ಯಕಾಂತ ಶೀಲವಂತ, ಚಂದ್ರಶೇಖರ ಪಾಟೀಲ, ಪಂಡಿತರಾವ ಮಾಲಿ ಪಾಟೀಲ, ವೀರಣ್ಣ ಶೀಲವಂತ, ಚಂದ್ರಶೇಖರ ಪಾಟೀಲ ಹಾಗೂ ತಾಲೂಕಿನ ಗದಲೇಗಾಂವ ಬಿ. ಸಿರಗಾಪೂರ, ಹಾರಕೂಡ, ಮಂಠಾಳ, ಹತ್ಯಾಳ, ಭೋಸಗಾ, ಆಲಗೂಡ, ಉಜಳಂಬ, ತೊಗಲೂರ, ಮುಚಳಂಬ, ಹಿರೇನಾಗಾಂವ, ಮುಡಬಿ, ಕೋಹಿನೂರ, ಗುಂಡೂರ, ಏಕಲೂರ, ಮೈಸಲಗಾ, ಯಲವಂತಗಿ, ಜನವಾಡ, ಬಟಗೇರಾ, ಗಿಲ್ಕಿ, ಚಿತ್ತಕೋಟ ಸೇರಿದಂತೆ ಬೀದರ ಮತ್ತು ಕಲಬುರ್ಗಿ ಜಿಲ್ಲೆಗಳ ಹಾಗೂ ಸೇಡಂ, ಚಿಂಚೋಳಿ, ಕಾಳಗಿ, ಚಿತ್ತಾಪುರ, ಹುಮನಾಬಾದ, ಭಾಲ್ಕಿ, ಹುಲಸೂರ, ಔರಾದ, ಕಮಲಾಪುರ, ಆಳಂದ ತಾಲೂಕಿನ ನೂರಾರು ಗ್ರಾಮಗಳ ಸಾವಿರಾರು ಭಕ್ತರು ಭಾಗವಹಿಸಿದ್ದರು. ರಮೇಶ್ ರಾಜೋಳೆ ಪ್ರಾಸ್ತಾವಿಕ ಹಾಗೂ ನಿರೂಪಿಸಿದರು. ಕಾರ್ತಿಕ ಸ್ವಾಮಿ ಎಲ್ಲದಗುಂಡಿ ಪ್ರಾರ್ಥನೆ ಗೀತೆ ಹಾಡಿದರು.

# 19 ರಾಜ್ಯಗಳಲ್ಲಿ ಭಾರೀ ಮಳೆ ಎಚ್ಚರಿಕೆ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ,ಸೆ.15:– ಕರ್ನಾಟಕ ಸೇರಿದಂತೆ ದೇಶದ 19 ರಾಜ್ಯಗಳಲ್ಲಿ ಭಾರೀ ಮಳೆಯ ಎಚ್ಚರಿಕೆಯನ್ನು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ನೀಡಿದೆ. ಸೆಪ್ಟೆಂಬರ್ 16 (ಮಂಗಳವಾರ) ರಂದು 19 ರಾಜ್ಯಗಳು / ಕೇಂದ್ರಾಡಳಿತ ಪ್ರದೇಶಗಳಲ್ಲಿ ಭಾರಿ ಮತ್ತು ಅತಿ ಭಾರೀ ಮಳೆಯಾಗುವ ಎಚ್ಚರಿಕೆ ನೀಡಿದೆ. ಇದು ಅರುಣಾಚಲ ಪ್ರದೇಶ, ಬಿಹಾರ, ಅಸ್ಸಾಂ, ಮೇಘಾಲಯ, ಉತ್ತರ ಪ್ರದೇಶ, ಜಾರ್ಖಂಡ್, ಗೋವಾ, ಮಹಾರಾಷ್ಟ್ರ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ, ತ್ರಿಪುರ, ಕರ್ನಾಟಕ, ತಮಿಳುನಾಡು, ಪುದುಚೇರಿ, ಉತ್ತರಾಖಂಡ, ಪಶ್ಚಿಮ ಬಂಗಾಳ, ಸಿಕ್ಕಿಂ ಮತ್ತು ಮಧ್ಯಪ್ರದೇಶಗಳಲ್ಲಿ ಸಂಭವಿಸುವ ಸಾಧ್ಯತೆಯಿದೆ ಎನ್ನಲಾಗಿದೆ.

# ಯಶಸ್ವಿಯಾಗಿ ಜರುಗಿದ ಬೆಳಕೇರಾ ಗ್ರಾಮ ಸಭೆ

# ನರೇಗಾ ಯೋಜನೆಯ ಲಾಭ ಪಡೆದುಕೊಳ್ಳಿ:ರಾಹುಲ್ ಕೈವಾರೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ತಾಲ್ಲೂಕಿನ ಬೆಳಕೇರಾ ಗ್ರಾಮ ಪಂಚಾಯತ್ ಆವರಣದಲ್ಲಿ 2025–26ನೇ ಸಾಲಿನ ಸಾಮಾಜಿಕ ಪರಿಶೋಧನೆ ಗ್ರಾಮ ಸಭೆ ಜರುಗಿತ್ತು. ಸಾಮಾಜಿಕ ಲೆಕ್ಕ ಪರಿಶೋಧನೆ ಕಾರ್ಯಕ್ರಮದ ತಾಲೂಕ ವ್ಯವಸ್ಥಾಪಕ ರಾಹುಲ್ ಕೈವಾರೆ ಮಾತನಾಡಿ, ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಗಂಡು ಹೆಣ್ಣಿಗೂ ಸಮಾನ ಕೆಲಸ ಹಾಗೂ ಸಮಾನ ವೇತನ ನೀಡಲಾಗುತ್ತಿದೆ.

ಪ್ರತಿಯೊಂದು ಕುಟುಂಬಕ್ಕೂ ವರ್ಷಕ್ಕೆ 100 ದಿನಗಳ ಕೆಲಸ ನೀಡಲಾಗುತ್ತಿದ್ದು, ಪ್ರತಿಯೋಬ್ಬರು ಯೋಜನೆಯ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ 15ನೇ ಹಣಕಾಸು ಆಯೋಗದ ಅನುದಾನ ಮತ್ತು 2020–21ನೇ ಸಾಲಿನಿಂದ 2024–25ನೇ ಸಾಲಿನ ವರೆಗೆ ಜಿಲ್ಲಾ ಮತ್ತು ತಾಲೂಕು ಪಂಚಾಯತನ ರಾಜ್ಯ ಹಣಕಾಸು ಆಯೋಗದ ಅನುದಾನದಡಿ ಅನುಷ್ಠಾನ ಮಾಡಿರುವ



ಕಾಮಗಾರಿಗಳ/ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಿದರು. ಸಾಮಾಜಿಕ ಪರಿಶೋಧನೆ ಪ್ರಕ್ರಿಯೆಯಲ್ಲಿ ಕಂಡು ಬಂದಿರುವ ಅಂಶಗಳ ಬಗ್ಗೆ ಮಾಹಿತಿ ನೀಡಿದರು. ಅದರಂತೆ ಸಭೆಯಲ್ಲಿ ತಿರ್ಮಾನಗಳು ಕೈಗೊಳಲಾಯಿತು. ನಿವೃತ್ತ ರೇಷ್ಮೆ ಇಲಾಖೆ ಅಧಿಕಾರಿ ಲಕ್ಷ್ಮಣ ಪೂಜಾರಿ ಮಾತನಾಡಿ, ರೈತರು ರೇಷ್ಮೆ ಬೆಳೆ ಬೆಳೆದು ತಮ್ಮ ಆರ್ಥಿಕ ಮಟ್ಟ ಸುಧಾರಿಸಿಕೊಳ್ಳಲು ರೇಷ್ಮೆ ಕೃಷಿ ಬೇಸಾಯ ಮಾಡಬೇಕೆಂದು ತಿಳಿಸಿದರು. ರೈತರು ತಮ್ಮ ವ್ಯವಸಾಯದ ಜೊತೆಗೆ ಬೆಳಕೇರಾ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಬನ್ನಳ್ಳಿ ಗ್ರಾಮದ ರೈತರು ರೇಷ್ಮೆ ಬೆಳೆಯುತ್ತಿದ್ದಾರೆ.


ರೇಷ್ಮೆ ಬೆಳೆಯುವ ರೈತರಿಗೆ ಸರ್ಕಾರ ಹಲವಾರು ಸೌಲಭ್ಯಗಳು ಒದಗಿಸಿದೆ ಇದರ ಸದುಪಯೋಗ ರೈತರು ರೇಷ್ಮೆ ಬೆಳೆಸಿ ಲಾಭ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷೆ ಪರ್ವಿನ್ ಬೇಗಂ, ಉಪಾಧ್ಯಕ್ಷೆ ವಿಜಯಲಕ್ಷ್ಮಿ, ಅಭಿವೃದ್ಧಿ ಅಧಿಕಾರಿ ಭಾಗ್ಯಜ್ಯೋತಿ, ಐಇಸಿ ಸಂಯೋಜಕ ವಿಶ್ವನಾಥ ಗಡ್ಡಿಮನಿ, ತಾಂತ್ರಿಕ ಸಂಯೋಜಕ ಸುಧಾಕರ ಪಾಟೀಲ್, ತಾಂತ್ರಿಕ ಸಹಾಯಕ ಮಹೇಬೂಬ್, ಅರಣ್ಯ ಇಲಾಖೆ ಅಧಿಕಾರಿ ರೋಫಖಾನ, ರೇಷ್ಮೆ ಇಲಾಖೆ ಅಧಿಕಾರಿ ಪ್ರಭುರಾವ ಕಟಗಿ, ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಮಾಣಿಕ ಹಿಪರ್ಗಿ ಸೇರಿದಂತೆ ಗ್ರಾಮ ಪಂಚಾಯತ್ ಸದಸ್ಯರು, ಗ್ರಾಮ ಪಂಚಾಯತ್ ವ್ಯಾಪ್ತಿಯ ಗ್ರಾಮಸ್ಥರು, ಪಂಚಾಯತ ಸಿಬ್ಬಂದಿ ವರ್ಗದವರು ಸೇರಿದಂತೆ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

# ಇಂದು ವಿಶ್ವ ಓಝೋನ್ ದಿನಾಚರಣೆ ಹಾಗೂ ಸಾಧಕರಿಗೆ ಪರಿಸರೋತ್ಸವ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ: ತಾಲ್ಲೂಕಿನ ಮರಕುಂದಾ ಗ್ರಾಮದಲ್ಲಿ ಚಾಲುಕ್ಯ ಶಿಕ್ಷಣ ಸಂಸ್ಥೆ ಮರಕುಂದಾ ಪರಿಸರ ವಾಹಿನಿ ಬೀದರ ಇವರ ಸಂಯುಂಕ್ತಾಶ್ರಯದಲ್ಲಿ ವಿಶ್ವ ಓಝೋನ್ ದಿನಾಚರಣೆ ಹಾಗೂ ಸಾಧಕರಿಗೆ ಪರಿಸರೋತ್ಸವ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ ಬೆಳಿಗ್ಗೆ 11 ಗಂಟೆಗೆ ಇಲ್ಲಿಯ ಗ್ರಾಮ ಪಂಚಾಯತ್‌ನಲ್ಲಿ ಜರುಗಲಿದೆ. ಬೀದರ ದಕ್ಷಣ ಕ್ಷೇತ್ರದ ಶಾಸಕ ಶೈಲೇಂದ್ರ ಬೆಲ್ದಾಳ ರವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಈ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಖೇಳಗಿ ಮಠದ ಶಿವಲಿಂಗೇಶ್ವರ ಸ್ವಾಮಿಗಳು, ಸಿಂಧನಕೇರಾ ಹೊನ್ನಲಿಂಗೇಶ್ವರ ಸ್ವಾಮಿಗಳು, ಮರಕುಂದಾ ದೇಶಿಕ್ ಮಠದ ಶರಣಬಸವ ದೇವರು ವಹಿಸುವರು. ಅಧ್ಯಕ್ಷತೆಯನ್ನು ನಿವೃತ್ತ ಪ್ರಾಚಾರ್ಯರು ಹಾಗೂ ಲೇಖಕರಾರು ಶಿವಕುಮಾರ ನಾಗವಾರ ವಹಿಸುವರು. ಮುಖ್ಯ ಅತಿಥಿಗಳಾಗಿ




ಬೀದರ ಪಂಚಗ್ಯಾರಂಟಿ ಯೋಜನೆ ಅನುಷ್ಠಾನ ಅಮಿತಿ ಜಿಲ್ಲಾಧ್ಯಕ್ಷರಾದ ಅಮೃತರಾವ ಚಿಮ್ಮಕೊಡೆ, ಆಗಮಿಸುವರು. ಬೀದರ ನಿವೃತ್ತ ಪ್ರಾಧ್ಯಾಪಕರಾದ ಸಂಗಯ್ಯ ವ್ಹಿ.ಕಲ್ಮಠ ವಿಶೇಷ ಉಪನ್ಯಾಸ ನೀಡುವರು. ಅತಿಥಿಗಳಾಗಿ ಬೀದರ ತಹಸೀಲ್ದಾರರಾದ ರವೀಂದ್ರ ದಾಮಾ, ಬೀದರ ತಾ.ಪಂ. ಕಾರ್ಯನಿರ್ವಾಹಣಾಧಿಕಾರಿ ಮಾಣಿಕರಾವ ಪಾಟೀಲ, ಬೀದರ ವಿಶ್ವವಿದ್ಯಾನಿಲಯ ವಿಶೇಷ ಅಧಿಕಾರಿ ರವೀಂದ್ರನಾಥ ಗಬಾಡೆ, ಹುಮನಾಬಾದ ಡಿವೈಎಸ್‌ಪಿಯಾದ ಜೆ.ಎಸ್ ನ್ಯಾಮೇಗೌಡರ, ಭಾಲ್ಕಿ ಡಿವೈಎಸ್‌ಪಿ ಶಿವಾನಂದ ಪವಾಡಶೆಟ್ಟಿ, ಸ್ವಾಮಿ ವಿವೇಕಾನಂದ ಶಿಕ್ಷಣ ಸಂಸ್ಥೆ ಅಧ್ಯಕ್ಷ ರಮೇಶ ಗಾದಾ, ಬಸವತೀರ್ಥ ವಿದ್ಯಾಪೀಠ ಕೇಂದ್ರ ಸಮಿತಿ ಅಧ್ಯಕ್ಷ ಕಂಟೇಪ್ಪ ದಾನಾ, ಪಬ್ಲಿಕ್ ಕನ್ನಡ ದಿನಪತ್ರಿಕೆಯ ಸಂಪಾದಕ ಗಂಧರ್ವ ಸೇನಾ, ಮರಕುಂದಾ ಗ್ರಾ.ಪಂ. ಅಧ್ಯಕ್ಷ ಬಾಬುರಾವ, ಉಪಾಧ್ಯಕ್ಷೆ ಶಿಲ್ಪಾರಾಣಿ, ಚಿಟಗುಪ್ಪ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದಿನ್ ಬಾಬಾ, ಹುಮನಾಬಾದ ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ ಗುಡಾಳ, ಭಾಲ್ಕಿ ಕ್ಷೇತ್ರ ಶಿಕ್ಷಣಾಧಿಕಾರಿ ಚನ್ನಪ್ಪ ಹಳ್ಳದ್, ಸಮಾಜ ಕಾರ್ಯಕರ್ತ ಮಹ್ಮದ್ ಅಸ್ಲಾಂಮಿಯಾ, ಚಾಲುಕ್ಯ ಶಿಕ್ಷಣ ಸಂಸ್ಥೆ ಅಧ್ಯಕ್ಷ ಶಾಮರಾವ ಹುಡೇದ್ ಭಾಗವಹಿಸಲಿದ್ದಾರೆ ಎಂದು ರಾಜೀವ್ ಗಾಂಧಿ ಮತ್ತು ವೃಕ್ಷಮಿತ್ರ ಪ್ರಶಸ್ತಿ ಪುರಸ್ಕೃತರು ಹಾಗೂ ಬೀದರ ಪರಿಸರವಾದಿ ಶೈಲೇಂದ್ರ ಕಾವಡಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಂಜಾಬ್ ಹರಿಯಾಣ ಮತ್ತು ಜಮ್ಮು ಕಾಶ್ಮೀರದ ನೆರೆ ಸಂತ್ರಸ್ತರಿಗೆ ಪರಿಹಾರ ನಿಧಿ ಸಂಗ್ರಹ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಪಟ್ಟಣದ ನಾಗರಿಕ ಸಮಿತಿ ವತಿಯಿಂದ ಪಂಜಾಬ್, ಹರಿಯಾಣ, ಜಮ್ಮು ಕಾಶ್ಮೀರದಲ್ಲಿ ಮಹಾ ಮಳೆಯಿಂದ ಹಾನಿಗೊಳಗಾದ ಸಂತ್ರಸ್ತರಿಗಾಗಿ ಪಟ್ಟದಲ್ಲಿ ನಾಗರಿಕ ಸಮಿತಿ ಬೃಹತ್ ಪಾದಯಾತ್ರೆ ಮಾಡಿ ಪರಿಹಾರ ನಿಧಿ ಹಣ ಸಂಗ್ರಹ




ಮಾಡಿದರು. ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕರ್, ಉಪಾಧ್ಯಕ್ಷ ನಸೀರ್ ಖಾನ, ಮಲ್ಲಿಕಾರ್ಜುನ ಪಾಟೀಲ್, ಮುಜಾಫರ್ ಪಟೇಲ್, ಶಾಮರಾವ ಭುತ್ತಾಳೆ, ದತ್ತು ಹಲಗೆ, ಪ್ರವೀಣ ರಾಜಾಪುರ್, ರಾಶೀದ್ ಪಟೇಲ್, ಬಾಬಾ ಆರ್.ಸಿ.ಸಿ., ನಸೀರ್ ಹಕಿಮ್, ಹುಸೇನ್, ನಿಜಾಮ ಹಕಿಮ್, ಶರಣು ಗಡಮಿ, ನಟವರ್ ಪವರ್, ತಬ್ಬರೇಜ್, ಹಬೀಬ್, ತೈಸಿನ್ ನಾಗುರೆ, ಸುಭಾಷ್ ಕುಂಬಾರ್, ಸಂಗಮೇಶ ಜವಾದಿ, ಪರಮೇಶ್ವರ್ ಬಬಡಿ, ಸಚಿನ ಮಠಪತಿ, ನೂರಇಸ್ಲಾಂ, ಮಲ್ಲಿಕಾರ್ಜುನ ಬೆನಕಿಪಳ್ಳಿ, ಸಾಯಿ ಸಿರ್ಕೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಚಿತ್ತಾಪುರ: ರೂಟರ್ಸ್ ಸಾಮಾಗ್ರಿಗಳನ್ನು ಪೂರೈಸಲು ದರಪಟ್ಟಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.15– ಚಿತ್ತಾಪುರ ನಗರ ಯೋಜನಾ ಪ್ರಾಧಿಕಾರ ಕಚೇರಿಯಲ್ಲಿ ಇ–ಆಫೀಸ್ ತಂತ್ರಾಂಶವನ್ನು ಅಳವಡಿಸಿಕೊಳ್ಳಬೇಕಾಗಿರುವ ಪ್ರಯುಕ್ತ ರೂಟರ್ಸ್ ಸಾಮಾಗ್ರಿಗಳನ್ನು ಪೂರೈಸಲು ಆಸಕ್ತಿಯುಳ್ಳ ಸಂಸ್ಥೆಯಿಂದ ಮುಚ್ಚಿದ ಲಕೋಟೆಯಲ್ಲಿ ದರಪಟ್ಟಿಯನ್ನು ಆಹ್ವಾನಿಸಲಾಗಿದೆ ಎಂದು ಚಿತ್ತಾಪುರ ನಗರ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಚ್ಛೆಯುಳ್ಳ ಸಂಸ್ಥೆಯವರು ಮುಚ್ಚಿದ ಲಕೋಟೆಯಲ್ಲಿ ಏಳು ದಿನದೊಳಗಾಗಿ ಚಿತ್ತಾಪುರ ನಗರ ಯೋಜನಾ ಪ್ರಾಧಿಕಾರದ ಕಚೇರಿಯಲ್ಲಿ ದರಪಟ್ಟಿಯನ್ನು ಸಲ್ಲಿಸಬೇಕು.

ಸರಬರಾಜು ಮಾಡುವ ಸಾಮಾಗ್ರಿಗಳ ವಿವರ, ಷರತ್ತುಗಳು ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಚಿತ್ತಾಪುರ ನಗರ ಯೋಜನಾ ಪ್ರಾಧಿಕಾರದ ಕಚೇರಿಗೆ ಸಂಪರ್ಕಿಸಲು ಕೋರಲಾಗಿದೆ.

# ಶಿಕ್ಷಕರು ಚಾರಿತ್ರ್ಯವಂತರಾಗಿರಬೇಕು : ಪರಮೇಶ್ವರ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.15:ಎಲ್ಲಾವೃತ್ತಿಗಳಲ್ಲಿಯೂಶಿಕ್ಷಕ ವೃತ್ತಿಅತ್ಯಂತ ಪವಿತ್ರವಾಗಿದೆ. ಹೀಗಾಗಿ ಶಿಕ್ಷಕರು ಚಾರಿತ್ರ್ಯವಂತರಾಗಿರಬೇಕು ಎಂದು ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ಡಿ.ಇಡಿ ಮತ್ತು ಬಿ.ಇಡಿ ಕಾಲೇಜಿನ ಪ್ರಾಂಶುಪಾಲ ಪರಮೇಶ್ವರ ಮಾಲಿ ಪಾಟೀಲ ಅಭಿಪ್ರಾಯಪಟ್ಟರು.

ಪಟ್ಟಣದ ಸಿ.ಬಿ.ಕಾಲೇಜು ಆವರಣದಲ್ಲಿಯ, ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ಬಿ.ಇಡಿ ಕಾಲೇಜಿನ ಸೆಮಿನಾರ್ ಹಾಲ್‌ನಲ್ಲಿ ಸೋಮವಾರ ನಡೆದ ಶಿಕ್ಷಕ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಶಿಕ್ಷಕರು ಯಾವಾಗಲೂ ರೋಲ್ ಮಾಡಲ್ ಆಗಿರಬೇಕು. ಎಲ್ಲರೂ ಶಿಕ್ಷಕರಂತಾಗಬೇಕೆಂದು ಬಯಸುವಂತೆ ಶಿಕ್ಷಕರ ಕಾರ್ಯವಿರಬೇಕು. ಅದಕ್ಕಾಗಿ ಶಿಕ್ಷಕರು ಸದಾ ಚಾರಿತ್ರ ??ವಂತರಾಗಿ ಜೀವನ ನಡೆಸಬೇಕು. ಭಾವಿ ಶಿಕ್ಷಕರು ಪವಿತ್ರವಾದ ಶಿಕ್ಷಕ ವೃತ್ತ ಆರಿಸಿಕೊಂಡಿರುವುದು ಸಂತಸದ ಸಂಗತಿ, ಶಿಕ್ಷಕ ವೃತ್ತಿಗೆ ಕಳಂಕ ತರದಂತೆ ಕಾರ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಎಸ್.ವಿ.ಶಿಕ್ಷಣ ಸಂಸ್ಥೆಯ ಸ್ನಾತ–ಕೋತರ ಪದವಿ ಪ್ರಾಂಶುಪಾಲೆ ಮೀನಾಕುಮಾರಿ ಪಾಟೀಲ, ಯಾವುದೇ ಕೆಲಸ ಸಿಗದಿದ್ದಾಗ ಶಿಕ್ಷಕ ವೃತ್ತಿ ಆಯ್ದುಕೊಳ್ಳಬಾರದು. ಶಿಕ್ಷಕ ವೃತ್ತಿ ಇಷ್ಟಪಟ್ಟು ಮಾಡುವ ಕೆಲಸವಾಗಿದೆ. ಶಿಕ್ಷಕ ವೃತ್ತಿಯಲ್ಲಿರುವ ಶಾಂತತೆ ಇನ್ನಾವ ವೃತ್ತಿಯಲ್ಲಿಯೂ ಕಂಡು ಬರುವುದಿಲ್ಲ. ಅದಕ್ಕಾಗಿ ಭಾವಿ ಶಿಕ್ಷಕರು ಇಷ್ಟಪಟ್ಟು ತಮ್ಮ ಮುಂದಿನ ಜೀವನ ಆಯ್ಕೆಮಾಡಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ ದಾಬಶೆಟ್ಟಿ ಶಿಕ್ಷಕರ ಕಾರ್ಯಕ್ಷಮತೆಯ ಬಗ್ಗೆ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಸಾಂಸ್ಕೃತಿಕ ಕಾರ್ಯಕ್ರಮದ ಸಂಯೋಜಕಿ ಶಿವಲೀಲಾ ಸತೀಷ ಮುದಾಳೆ, ರಮೇಶ ಲಿಂಬಾವೆ, ವಿಜಯಕುಮಾರ ರಾಜಶೇಖರ, ಬಿಗೆ ಅಮರ್ಜಿತ್ ಪಾಟೀಲ, ಸಂತೋಷ ಉಚ್ಚೆ, ರವಿಕುಮಾರ ಡೋಣಗಾಪೂರೆ, ಗುಣವಂತಿ, ಜಗದೇವಿ, ಪದ್ಮಿನಾ ಉಪಸ್ಥಿತರಿದ್ದರು.

ಕಾಲೇಜಿನ ಪ್ರಶಿಕ್ಷಣಾರ್ಥಿಗಳು ಪ್ರಾರ್ಥನಾಗೀತೆ ನಡೆಸಿಕೊಟ್ಟರು. ಪ್ರಶಿಕ್ಷಣಾರ್ಥಿ ಎಂಕೋಬಾ ಸ್ವಾಗತಿಸಿದರು. ಪ್ರಶಿಕ್ಷಣಾರ್ಥಿ ಬಿಂದು ನಿರೂಪಿಸಿದರು. ಪ್ರಶಿಕ್ಷಣಾರ್ಥಿ ಸಯ್ಯದ್ ವಂದಿಸಿದರು.

# ಸಂಘ ಮುನ್ನಡೆಸುವುದು ಸವಾಲಿನ ಕೆಲಸ : ಸಿ.ಜಿ.ಹಳ್ಳದ್



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.15: ಯಾವುದೇ ಸಹಕಾರ ಸಂಘಗಳು ಹುಟ್ಟುಹಾಕುವುದಕ್ಕಿಂತಲೂ ಅವುಗಳನ್ನು ಮುನ್ನಡೆಸಿಕೊಂಡು ಹೋಗುವುದು ಸವಾಲಿನ ಕೆಲಸವಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ಹೇಳಿದರು.

ಪಟ್ಟಣದ ಬಾಲಾಜಿ ಮಂದಿರದಲ್ಲಿ ಭಾನುವಾರ ನಡೆದ ವೀರಶೈವ ಪ್ರಾಥಮಿಕ ಶಾಲಾ ಶಿಕ್ಷಕರ ವಿವಿದೋದ್ದೇಶ ಸಹಕಾರ ಸಂಘದ 15ನೇ ವಾರ್ಷಿಕ ಮಹಾಸಭಾ ಉದ್ಘಾಟಿಸಿ ಅವರು ಮಾತನಾಡಿದರು. ವಿವಿಧೋದೇಶ ಸಹಕಾರ ಸಂಘಗಳನ್ನು ಹುಟ್ಟುಹಾಕುವುದಕ್ಕಿಂತಲೂ ಅವುಗಳನ್ನು ಸಮರ್ಪಕವಾಗಿ ಮುನ್ನಡೆಸಿಕೊಂಡು ಹೋಗುವುದು ಸವಾಲಿನ ಕಾರ್ಯವಾಗಿದೆ. ಇಂತಹದರಲ್ಲಿ ವೀರಶೈವ ಪ್ರಾಥಮಿಕ ಶಾಲಾ ಶಿಕ್ಷಕರ ವಿವಿಧೋದೇಶ ಸಹಕಾರ ಸಂಘ ಸುಮಾರು 15 ವರ್ಷಗಳಿಂದ ಸಾಗಿ ಗಂದಿರುವುದು ಪ್ರಶಂಶನೀಯ ಕಾರ್ಯವಾಗಿದೆ. ಸಂಘದ ವತಿಯಿಂದ ನಿವೃತ್ತ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸುವ ಕಾರ್ಯ ಶ್ಲಾಘನೀಯ ಆದರೆ ಸಂಘದ ಪ್ರತಿಭಾವಂತ ಮಕ್ಕಳಿಗೆ ಗುರುತಿಸಿ ಪ್ರೋತ್ಸಾಹ ಮಾಡುವ ಕಾರ್ಯವಾಗಬೇಕು, ಅಲ್ಲದೇ 1 ಲಕ್ಷ ರೂ. ಸಾಲ ಪಡೆಯಲು ಬಂದರೆ ಅವರಲ್ಲಿ 10 ಸಾವಿರ ರೂ. ಶೇರು ಬಂಡವಾಳ ಸಂಗ್ರಹಿಸಬೇಕು. ಹೆಚ್ಚಿನ ಸಂಖೆಯಲ್ಲಿ ಸದಸ್ಯರನ್ನು ನೇಮಕಮಾಡಿಕೊಂಡು ಸಂಘ ಇನ್ನೂ ಹೆಮ್ಮರವಾಗಿ ಬೆಳೆಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಹಲಮಂಡಗೆ, ಕೇವಲ 1.5 ಲಕ್ಷರೂ. ಶೇರು ಬಂಡವಾಳದಲ್ಲಿ ಸ್ಥಾಪನೆಯಾದ ವೀರಶೈವ ಪ್ರಾಥಮಿಕ ಶಾಲಾ ವಿವಿಧೋದೇಶ ಸಹಕಾರ ಸಂಘವು ಇಂದು 43.58 ಲಕ್ಷರೂ. ನಿವ್ವಳ ಲಾಭ ಗಳಿಸಿದೆ. ಪ್ರತಿವರ್ಷ ನಿವ್ವಳ ಲಾಭದಲ್ಲಿ ಏರಿಕೆಯಾಗುತ್ತಲೇ ಬಂದಿದೆ. ಯಾವುದೇ ಸುಸ್ತಿ ಸಾಲ ಈ ಸಹಕಾರ ಸಂಘದಲ್ಲಿಲ್ಲ. ಇದಕ್ಕೆಲ್ಲ ಇಲ್ಲಿಯ ಸದಸ್ಯರ ಶ್ರಮ ಮತ್ತು ನಿರ್ದೇಶಕರ ಅವಿರತ ದುಡಿಮೆಯೇ ಕಾರಣವಾಗಿದೆ ಎಂದು ಹೇಳಿದರು. ಸಂಘದ ಕಾರ್ಯದರ್ಶಿ ನಾಗಭೂಷಣ ಬೂದೆಪ್ಪ ಮಾಮಡಿ ವಾರ್ಷಿಕ ವರದಿ ವಾಚನ ಮಾಡಿದರು.

ಸಂಘದ ಸಲಹೆಗಾರರಾದ ಬಾಬುರಾವ ಗಂಗಪ್ಪಾ ಬಿರಾದಾರ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸೂರ್ಯಕಾಂತ ಸುಂಟೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಿರ್ದೇಶಕ ಬಸವರಾಜ ದಾನಾ ಮಾತನಾಡಿದರು. ಇದೇವೇಳೆ ಸಂಘದ ನಿವೃತ್ತ ಶಿಕ್ಷಕ ಮತ್ತು ಶಿಕ್ಷಕಿಯರಿಗೆ ಸಹಕಾರ ಸಂಘದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಘದ ಉಪಾಧ್ಯಕ್ಷ ಭಗವಾನ ವಲಾಂಡೆ, ಮಲ್ಲಿನಾಥ ಸಜ್ಜನ್, ಅಶೋಕ ಕುಂಬಾರ, ಜಯರಾಜ ದಾಬಶೆಟ್ಟಿ, ಶರಣಪ್ಪ ಕಂಟೆಪ್ಪ ರಾಚೋಟೆ, ಬಸವರಾಜ ಶಂಕರೆಪ್ಪ ರಂಜೇರೆ, ಚಂದ್ರಕಾಂತ ಅಪ್ಪಾರಾವ ಮಾಶೆಟ್ಟೆ, ಪ್ರಭು ಸಂಗಪ್ಪಾ ಡಿಗ್ಗೆ, ಬಸವರಾಜ ತೇಗಂಪೂರೆ, ರಾಜಕುಮಾರ ನಾಗಣ್ಣ ಘಂಟೆ, ಅನಿತಾ ಸಂಗಶೆಟ್ಟಿ ಗುರಣ್ಣಾ, ಶಿಕ್ಷಕರ ಸಂಘದ ನಿರ್ದೇಶಕಿ ಮೈತ್ರಾದೇವಿ ಚಂದ್ರಕಾಂತ ಬಿರಾದಾರ, ಷಡಕ್ಷರಿ ಸ್ವಾಮಿ, ಪುಣ್ಯವತಿ ಕಾಮಣ್ಣ, ವಿರಶೆಟ್ಟಿ ಇಟಗೆ, ಅಮೃತಪ್ಪ ರಂಜೇರೆ ಧನ್ನೂರ(ಹೆಚ್), ಮಲ್ಲಿಕಾರ್ಜುನ ಪಾಟೀಲ ಧನ್ನೂರ(ಹೆಚ್), ಸೋಮನಾಥ ಗೋರ್ಟಾ(ಬಿ), ವ್ಯವಸ್ಥಾಪಕ ವಿಶ್ವನಾಥ ವಾಡೆ ಉಪಸ್ಥಿತರಿದ್ದರು.

ಭಗವಾನ ವಲಾಂಡೆ ಸ್ವಾಗತಿಸಿದರು. ಬಸವರಾಜ ರಂಜೇರೆ ನಿರೂಪಿಸಿದರು. ಬಸವರಾಜ ತೇಗಂಪೂರೆ ವಂದಿಸಿದರು.

# ಬೆಳ್ಳೂರ್ ಗ್ರಾಮದಲ್ಲಿ ಗ್ಯಾರಂಟಿ ಯೋಜನೆಗಳ ಕ್ರಾಂತಿ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಸೆ.15 : ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಕೋಳರ್. ಕೆ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಬೆಳ್ಳೂರ್ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

ಯುವನಿಧಿ ಯೋಜನೆ : ಪದವೀಧರರು ಮತ್ತು ಡಿಪ್ಲೋಮಾ ಮುಗಿಸಿದ ಯುವಕರಿಗೆ ಯೋಜನೆಯ ಕುರಿತು ಪೂರ್ಣ ಮಾಹಿತಿ ಇಲ್ಲದಿರುವ ಕಾರಣ, ಸಮಿತಿಯು ಕಾಲೇಜುಗಳಲ್ಲಿ ಮತ್ತು ಗ್ರಾಮ ಮಟ್ಟದಲ್ಲಿ ವಿಶೇಷ ಪ್ರಚಾರ ಆಂದೋಲನಗಳನ್ನು ನಡೆಸುತ್ತಿದೆ. ನೋಂದಣಿ ಪ್ರಕ್ರಿಯೆಯಲ್ಲಿ ಸಹಾಯ ಮಾಡುತ್ತಿದೆ. ಮತ್ತು

ಗೃಹಲಕ್ಷ್ಮಿ, ಅನ್ನಭಾಗ್ಯ, ಶಕ್ತಿ ಯೋಜನೆ, ಗೃಹ ಜ್ಯೋತಿ, ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು...

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಮುಖಂಡರಾದ ಗೌಸೂದ್ದಿನ್ ಮೌಜನ್, ಪ್ರದೀಪ ಹುಲ್ಲೆ, ಸಮೀರ್ ಷಾ, ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ಕ.ಕ. ಅಭ್ಯರ್ಥಿಗಳಿಗೆ ಶೇ 100 ರಷ್ಟು ಮೀಸಲಿಗೆ ಒತ್ತಡ



ಮಲ್ಲಮ್ಮ ನುಡಿ ವಾರ್ತೆ ಬೀದರ. ಸೆ. 15 : ಸಂವಿಧಾನದ 371(ಜೆ) ಕಲಂ ತಿದ್ದುಪಡಿ ಕಾಯ್ದೆಯಡಿ ಕಲ್ಯಾಣ ಕರ್ನಾಟಕದ ಅಭ್ಯರ್ಥಿಗಳಿಗೆ ಉದ್ಯೋಗದಲ್ಲಿ ಶೇ 100 ರಷ್ಟು ಮೀಸಲು ಕಲ್ಪಿಸಲು ಸರ್ಕಾರದ ಮೇಲೆ ಒತ್ತಡ ತರಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ. ನಮೋಶಿ ಹೇಳಿದರು.

ಕರ್ನಾಟಕ ರಾಜ್ಯ ಮಾಧ್ಯಮಿಕ ಶಿಕ್ಷಕ ಸಂಘದ ಜಿಲ್ಲಾ ಘಟಕದ ವತಿಯಿಂದ ನಗರದ ಕುಂಬಾರವಾಡ ರಸ್ತೆಯಲ್ಲಿನ ಕೆ.ಆರ್.ಇ. ಸಂಸ್ಥೆಯ ಸಾಂಸ್ಕೃತಿಕ ಭವನದಲ್ಲಿ ಶನಿವಾರ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಹಾಗೂ 'ಸ್ವಾತಂತ್ರ್ಯ ಹೋರಾಟಗಾರ ವೀರಯ್ಯ ಸ್ವಾಮಿ' ಕೃತಿ ಬಿಡುಗಡೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸದ್ಯ ಕಾಯ್ದೆಯಡಿ ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ ಶೇ 80 ರಷ್ಟು ಮೀಸಲು ಸೌಲಭ್ಯ ಇದೆ ಎಂದು ತಿಳಿಸಿದರು.

1995 ರ ನಂತರದ ಖಾಸಗಿ ಅನುದಾನರಹಿತ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸುವುದು ಸೇರಿದಂತೆ ಶಿಕ್ಷಣ ಸಂಸ್ಥೆಗಳ ಹಾಗೂ ಶಿಕ್ಷಕರ ವಿವಿಧ ಬೇಡಿಕೆಗಳ ಈಡೇರಿಕೆಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಪರಮೇಶ್ವರ ಬಿರಾದಾರ ಮಾತನಾಡಿ, ಶಿಕ್ಷಕರ ಸಮಸ್ಯೆಗಳನ್ನು ಪರಿಹರಿಸಲು ಸಂಘ ಸದಾ ಸಿದ್ಧವಿದೆ ಎಂದು ತಿಳಿಸಿದರು.

ಶಿಕ್ಷಕರನ್ನು ಪ್ರೋತ್ಸಾಹಿಸುವ ದಿಸೆಯಲ್ಲಿ ಸಂಘವು ಬರುವ ದಿನಗಳಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದೆ ಎಂದು ಹೇಳಿದರು.

ಪ್ರೊ. ಎಸ್.ಬಿ. ಬಿರಾದಾರ ಮಾತನಾಡಿ, ವೀರಯ್ಯ ಸ್ವಾಮಿ ಅವರು ಸ್ವಾತಂತ್ರ್ಯ ಹೋರಾಟಗಾರರಾಗಿದ್ದರು. ಅವರ ದೇಶ ಭಕ್ತಿ ಯುವಕರಿಗೆ ಪ್ರೇರಣೆಯಾಗಬೇಕು ಎಂದು ತಿಳಿಸಿದರು.

ಲೇಖಕ ನಾಗಯ್ಯ ಸ್ವಾಮಿ ಅವರು ಬಿಡುಗಡೆಗೊಳಿಸಲಾದ 'ಸ್ವಾತಂತ್ರ್ಯ ಹೋರಾಟಗಾರ ವೀರಯ್ಯ ಸ್ವಾಮಿ' ಕೃತಿಯನ್ನು ಪರಿಚಯಿಸಿದರು. ಸಂಘದ ಜಿಲ್ಲಾ ಘಟಕದ ಗೌರವ ಸಲಹೆಗಾರ ಬಸವರಾಜ ಸ್ವಾಮಿ ಹೆಡಗಾಪುರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಅನುದಾನಿತ ಪದವಿಪೂರ್ವ ಉಪನ್ಯಾಸಕರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ವಿಜಯಕುಮಾರ ಪಾಟೀಲ ಹೆಡಗಾಪುರ ಹಾಗೂ ಶಿಕ್ಷಕರನ್ನು ಸನ್ಮಾನಿಸಲಾಯಿತು.

ಹೆಡಗಾಪುರದ ಶಿವಲಿಂಗ ಶಿವಾಚಾರ್ಯ, ದಾರುಕಲಿಂಗ ಶಿವಾಚಾರ್ಯ ದಿವ್ಯ ಸಾನಿಧ್ಯ ವಹಿಸಿದ್ದರು. ಎಚ್.ಕೆ.ಇ. ಸಂಸ್ಥೆಯ ಆಡಳಿತ ಮಂಡಳಿ ಸದಸ್ಯ ಡಾ. ರಜನೀಶ್ ವಾಲಿ, ಸಂಘದ ಜಿಲ್ಲಾ ಘಟಕದ ಗೌರವಾಧ್ಯಕ್ಷ ವಿಜಯಕುಮಾರ ಪಾಟೀಲ ಯರನಳ್ಳಿ, ಪ್ರಮುಖರಾದ ರಾಮಕೃಷ್ಣನ್ ಸಾಳೆ, ರಾಜಶೇಖರ ಮಂಗಲಗಿ, ಚಂದ್ರಶೇಖರ ಪಾಟೀಲ, ಸಿದ್ದಮ್ಮ, ನರಸಾರೆಡ್ಡಿ, ಬಳಿರಾಮ ಕುರನಾಳೆ, ಉಮೇಶ ಪಾಟೀಲ, ಸತೀಶ ಬಿರಾದಾರ ಮತ್ತಿತರರು ಇದ್ದರು.

ಸಂಘದ ಜಿಲ್ಲಾ ಘಟಕದ ಖಜಾಂಚಿ ಸಂತೋಷ ಮಂಗಳೂರೆ ಸ್ವಾಗತಿಸಿದರು. ಉಪಾಧ್ಯಕ್ಷ ಲಕ್ಷ್ಮಣ ಪೂಜಾರಿ ನಿರೂಪಿಸಿದರು. ಸಂಘಟನಾ ಕಾರ್ಯದರ್ಶಿ ಸಂತೋಷ ಸೋಲಪುರೆ ವಂದಿಸಿದರು.

# ಕೊನೆಗೂ ಬಸ್ ಮುಖ ಕಂಡ ಡೊಣಗಾಂವವಾಡಿ



ಬೀದರ. ಸೆ. 15 : ಕಮಲನಗರ ತಾಲ್ಲೂಕಿನ ಡೊಣಗಾಂವವಾಡಿ ಕೊನೆಗೂ ಬಸ್ ಮುಖ ಕಂಡಿದೆ.

ಔರಾದ್‌ನಿಂದ ಏಕಂಬಾ, ಚಿಮ್ಮೆಗಾಂವ್, ಹಂದಿಕೇರಾ, ಡೊಣಗಾಂವವಾಡಿ, ಡೊಣಗಾಂವ್, ಕಮಲನಗರ ಮಾರ್ಗವಾಗಿ ಭಾಲ್ಕಿಗೆ ಆರಂಭಿಸಿದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಹೊಸ ಬಸ್ ಸೋಮವಾರ ಮೊದಲ ಬಾರಿ ಗ್ರಾಮಕ್ಕೆ ಬಂದಾಗ ಗ್ರಾಮಸ್ಥರು ಬ್ಯಾಂಡ್ ಬಾಜಾದೊಂದಿಗೆ ಸ್ವಾಗತಿಸಿ ಬರಮಾಡಿಕೊಂಡರು. ಬಸ್‌ಗೆ ಬಾಳೆ ದಿಂಡು, ಕಬ್ಬು ಕಟ್ಟಿ, ಹೂವಿನ ಹಾರ ಹಾಕಿ ಪೂಜೆ ಸಲ್ಲಿಸಿದರು. ಪಟಾಕಿ ಸಿಡಿಸಿದರು. ನೆರೆದವರಿಗೆ ಸಿಹಿ ಹಂಚಿದರು. ಔರಾದ್‌ನಿಂದ ಏಕಂಬಾ, ಚಿಮ್ಮೆಗಾಂವ್, ಹಂದಿಕೇರಾ, ಡೊಣಗಾಂವವಾಡಿ, ಡೊಣಗಾಂವ್, ಕಮಲನಗರ ಮಾರ್ಗವಾಗಿ ಭಾಲ್ಕಿಗೆ ಬಸ್ ಓಡಿಸಲು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ಮನವಿ ಮಾಡಿದ್ದೆ. ಸಚಿವದ್ವಯರ ಸೂಚನೆ ಮೇರೆಗೆ ಈ ಮಾರ್ಗದಲ್ಲಿ ಹೊಸ ಬಸ್ ಸಂಚಾರ ಶುರು ಮಾಡಲಾಗಿದೆ ಎಂದು ಕಾಂಗ್ರೆಸ್ ಕಿಸಾನ್ ವಿಭಾಗದ ರಾಷ್ಟ್ರೀಯ ಸಂಯೋಜಕ ಪ್ರಕಾಶ ಘಾಳೆ ಹೇಳಿದರು.

ಸ್ವಾತಂತ್ರ್ಯನಂತರ ಡೊಣಗಾಂವವಾಡಿ ಗ್ರಾಮಕ್ಕೆ ಬಸ್ ಸೌಕರ್ಯವೇ ಇರಲಿಲ್ಲ. ಹಿಂದೆ ಕುರುಬರವಾಡಿ, ಮಾಳೆಗಾಂವ್, ಚಿಮ್ಮೆಗಾಂವ್, ಹಂದಿಕೇರಾ, ದೋಪರವಾಡಿ, ಡೊಣಗಾಂವವಾಡಿ ಗ್ರಾಮಸ್ಥರಿಗೆ ನೇರವಾಗಿ ತಾಲ್ಲೂಕು ಕೇಂದ್ರ ಕಮಲನಗರಕ್ಕೆ ಹೋಗಲು ಬಸ್‌ಗಳು ಇರಲಿಲ್ಲ. ಔರಾದ್ ಇಲ್ಲವೇ ಉದಗಿರಕ್ಕೆ ತೆರಳಿ ಅಲ್ಲಿಂದ ಕಮಲನಗರಕ್ಕೆ ಹೋಗಬೇಕಾಗುತ್ತಿತ್ತು ಎಂದು ತಿಳಿಸಿದರು.

ಇದೀಗ ನಿತ್ಯ ಎರಡು ಟ್ರಿಪ್ ಬಸ್ ಸಂಚಾರಕ್ಕೆ ಚಾಲನೆ ನೀಡಿರುವುದರಿಂದ ಈ ಗ್ರಾಮಗಳ 20 ಸಾವಿರ ಜನರಿಗೆ ಶಿಕ್ಷಣ, ಆಸ್ಪತ್ರೆ, ಸರ್ಕಾರಿ ಕಚೇರಿ ಸೇರಿದಂತೆ ವಿವಿಧ ಕೆಲಸದ ನಿಮಿತ್ತ ತಾಲ್ಲೂಕು ಕೇಂದ್ರಕ್ಕೆ ತೆರಳಲು ಅನುಕೂಲವಾಗಿದೆ. ಡೊಣಗಾಂವವಾಡಿ ಗ್ರಾಮಸ್ಥರು ವಿವಿಧೆಡೆ ನಡೆದು–ಕೊಂಡು ಹೋಗುವುದು ತಪ್ಪಿದೆ ಎಂದು ಹೇಳಿದರು.

ಹಿಂದೆ ಚಿಮ್ಮೆಗಾಂವ್–ಹಂದಿಕೇರಾ ಗ್ರಾಮದ ಹೊರವಲಯದಿಂದಲೇ ಬಸ್ ಸಂಚಾರ ಇತ್ತು. ಭೀಮಣ್ಣ ಖಂಡ್ರೆ ಅವರು ಸಾರಿಗೆ ಸಚಿವರಾಗಿದ್ದಾಗ ಬೀದರ್–ಉದಗಿರ ಬಸ್‌ಗಳು ಚಿಮ್ಮೆಗಾಂವ್–ಹಂದಿಕೇರಾ ಮಾರ್ಗವಾಗಿ ಸಂಚರಿಸುವಂತೆ ಕ್ರಮ ಕೈಗೊಂಡಿದ್ದರು ಎಂದು ಸ್ಮರಿಸಿಕೊಂಡರು.

ಪ್ರಕಾಶ ಘಾಳೆ ಅವರ ಪ್ರಯತ್ನದಿಂದಾಗಿ ವಿವಿಧ ಗ್ರಾಮಗಳ ಬಸ್ ಸಮಸ್ಯೆ ಬಗೆಹರಿದಿದೆ ಎಂದು ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು ಹೇಳಿದರು.

ಗ್ರಾಮಸ್ಥರು ಬಸ್ ಚಾಲಕ–ನಿರ್ವಾಹಕರನ್ನು ಸತ್ಕರಿಸಿ, ಸಿಹಿ ತಿನ್ನಿಸಿದರು. ಇದಕ್ಕೂ ಮುನ್ನ ಚಿಮ್ಮೆಗಾಂವನಲ್ಲೂ ಬಸ್‌ಗೆ ಪೂಜೆ ಸಲ್ಲಿಸಲಾಯಿತು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬೀದರ್ ವಿಭಾಗೀಯ ನಿಯಂತ್ರಣಾಧಿಕಾರಿ ರಾಜು ಜಾಧವ್, ತಹಶೀಲ್ದಾರ್ ಅಮೀತ್ ಕುಲಕರ್ಣಿ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಹಣಮಂತರಾಯ ಕೌಟಗೆ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಯಶೋದಾ ಸಂತೋಷ್, ಸದಸ್ಯ ಅನಿಲ್ ಬಿರಾದಾರ, ಪ್ರಮುಖರಾದ ಚಂದ್ರಕಾಂತ ಕಾರಬಾರಿ, ನರಸಿಂಗ್ ಬಾಬುರಾವ್ ಪಾಟೀಲ, ತುಕಾರಾಮ ರಾಠೋಡ್ ಮತ್ತಿತರರು ಹಾಜರಿದ್ದರು.

# ಸಾಲಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡ ಕುಟುಂಬಕ್ಕೆ ಸಾಂತ್ವನ ಹೇಳಿದ ಸಚಿವ ರಹೀಂ ಖಾನ್



ಬೀದರ,ಸೆ.15: ಪೌರಾಡಳಿತ ಮತ್ತು ಹಜ್ ಸಚಿವ ರಹೀಮ್ ಖಾನ್ ಅವರು ಇತ್ತೀಚೆಗೆ ಮೈಲೂರಿನ ಒಂದೇ ಕುಟುಂಬದ ಆರು ಸದಸ್ಯರು ಸಾಲಬಾಧೆಯಿಂದ ಆತ್ಮಹತ್ಯೆಗೆ ಮಾಡಿಕೊಂಡ ಮೃತರ ಕುಟುಂಬವನ್ನು ಭೇಟಿ ಮಾಡಿ, ಅವರಿಗೆ ಸಾಂತ್ವನ ಹೇಳಿ, ವೈಯಕ್ತಿಕ 1 ಲಕ್ಷ ರೂಪಾಯಿ ಸಹಾಯವನ್ನು ನೀಡಿದರು. ಬದುಕುಳಿದ ಮಗುವಿಗೆ ಉಚಿತ ಶಿಕ್ಷಣವನ್ನು ನೀಡುವುದಾಗಿಯೂ ಅವರು ಭರವಸೆ ನೀಡಿದರು. ಬೀದರ್ ತಾಲ್ಲೂಕಿನ ಮೈಲೂರು ನಿವಾಸಿಗಳಾದ ಶಿವಮೂರ್ತಿ ಕುಟುಂಬದ ಆರು ಸದಸ್ಯರು ಸಾಲಬಾಧೆಯಿಂದ ಆತ್ಮಹತ್ಯೆಗೆ ಯತ್ನಿಸಿದ್ದು ತುಂಬಾ ದುಃಖಕರ. ದುರಂತವೆಂದರೆ, ಮೂವರು ಮಕ್ಕಳು ಮತ್ತು ಅವರ ತಂದೆ ಪ್ರಾಣ ಕಳೆದುಕೊಂಡರು. ಅದೃಷ್ಟವಶಾತ್, ತಾಯಿ ಮತ್ತು ಒಬ್ಬ ಮಗ ಬದುಕುಳಿದರು. ಈ ಸಂದರ್ಭದಲ್ಲಿ ಮುಖಂಡರುಗಳಾದ ಶೌಕತ್ ಅಲಿ, ಶ್ರೀಮಂತ್, ಪ್ರಶಾಂತ್ ಭಾವಿಕಟ್ಟಿ, ಜಾಫರ್ ಭಾಯ್, ದಸ್ರತ್, ರಾಜ್‌ಕುಮಾರ್ ಭಾವಿಕಟ್ಟಿ ಮತ್ತು ಇತರರು ಉಪಸ್ಥಿತರಿದ್ದರು.

# ಸೆ. 17 ರಂದು ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ

ಕಲಬುರಗಿ,ಸೆ.15–ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಅಂಗವಾಗಿ ಸೆಪ್ಟೆಂಬರ್ 17ರಂದು ಬುಧವಾರ ಬೆಳಿಗ್ಗೆ 8.45 ಗಂಟೆಗೆ ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಕಲಬುರಗಿ ನಗರದ ಸರ್ದಾರ ವಲ್ಲಭ್‌ಭಾಯಿ ಪಟೇಲ್‌ರವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ನಂತರ ಬೆಳಿಗ್ಗೆ 9 ಗಂಟೆಗೆ ಕಲಬುರಗಿ ನಗರದ ಜಿಲ್ಲಾ ಪೊಲೀಸ್ ಪರೇಡ್ ಮೈದಾನದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಲಿದ್ದಾರೆ. ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಹಾಗೂ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಗೌರವ ಉಪಸ್ಥಿತಿ ವಹಿಸುವರು. ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಅಫಜಲಪುರ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಎಂ.ವೈ. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ ಹಾಗೂ ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ, ಅಲ್ಲಮಪ್ರಭು ಪಾಟೀಲ, ವಿಧಾನ ಪರಿಷತ್ ಶಾಸಕರುಗಳಾದ ಡಾ. ಬಿ.ಜಿ.ಪಾಟೀಲ, ಶಶೀಲ ಜಿ. ನಮೋಶಿ, ತಿಮ್ಮಣ್ಣಪ್ಪ ಕಮಕನೂರ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ಡಾ. ತಳವಾರ ಸಾಬಣ್ಣ, ಸುನೀಲ್ ವಲ್ಯಾಪುರೆ, ಜಗದೇವ ಗುತ್ತೇದಾರ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷ ಸೈಯದ್ ಮುಹಮ್ಮದ್ ಅಲಿ ಅಲ್ ಹುಸೇನಿ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂಖಾನ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ ಹಾಗೂ ಮಹಾನಗರಪಾಲಿಕೆ ಮಹಾಪೌರ ವರ್ಷಾ ರಾಜೀವ ಜಾನೆ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು. ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಶಾಂತನು ಸಿನ್ಹಾ, ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಕೃಷ್ಣ ಭಾಜಪೇಯಿ, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ನಲಿನ್ ಅತುಲ್, ಕೆ.ಕೆ.ಆರ್.ಟಿ.ಸಿ. ವ್ಯವಸ್ಥಾಪಕ ನಿರ್ದೇಶಕರಾದ ಡಾ. ಬಿ. ಸುಶೀಲಾ ಹಾಗೂ ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಪಾಂಡ್ವೆ ರಾಹುಲ್ ತುಕಾರಾಂ ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು.

# ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ತರಬೇತಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಸೆ.15: ಪಟ್ಟಣದ ಶಾಂತಿವರ್ಧಕ ಪ್ರೌಢ ಶಾಲೆ ಕಮಲನಗರನಲ್ಲಿ ಜಿಲ್ಲಾ ಹಂತದ ಮಾಸ್ಟರ್ ತರಬೇತಿದಾರರಿಂದ ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7 ವರೆಗೆ ನಡೆಯುವ ಸಾಮಾಜಿಕ ಮತ್ತು ಆರ್ಥಿಕ ಸಮಿಕ್ಷೆಗಾಗಿ ನೇಮಕ ಮಾಡಿದ ಕಮಲನಗರ ತಾಲೂಕಿನಲ್ಲಿರುವ ಸಮೀಕ್ಷೆದಾರರಿಗೆ ತರಬೇತಿ ನೀಡಲಾಯಿತು.

ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ ಪಾಟೀಲ ಮಾತನಾಡಿ, ತಾಲೂಕಿನ ವಿವಿಧ ಭಾಗಗಳಲ್ಲಿ ವಾಸವಾಗಿರುವ ಹಾಗೂ ವಿಭಿನ್ನ ವೃತ್ತಿಗಳಲ್ಲಿ ತೊಡಗಿರುವ ವ್ಯಕ್ತಿಗಳು ಮತ್ತು ಜನ–ಸಮುದಾಯಗಳಲ್ಲಿ ಇರುವ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಅಸಮಾನತೆಯನ್ನು ಕಡಿಮೆ ಮಾಡುವ ಅಗತ್ಯತೆಯ ಹಿನ್ನೆಲೆಯಲ್ಲಿ ಸಾಮಾಜಿಕ ಹಾಗೂ ಶೈಕ್ಷಣಿಕ ಸ್ಥಿತಿಗತಿಗಳ ಕುರಿತಂತೆ ವೈಜ್ಞಾನಿಕ ಅಧ್ಯಯನ ಮಾಡುವುದು ಈ ಸಮಿಕ್ಷೆಗಾಗಿ ಉದ್ದೇಶ ವಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಸಂಪನ್ಮೂಲ ವ್ಯಕ್ತಿಗಳು ನಾಗೇಶ್ ಸಂಗಮೆ, ಮಹದೇವ ಮಡಿವಾಳ, ಉಮಾಕಂತ ಮಹಾಜನ್, ಸೂರ್ಯಕಾಂತ ಬಿರಾದರ್, ವೆಂಕಟ್ ನಾಗಲಗಿದ್ದೆ ಅವರು ಸಮೀಕ್ಷೆ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದರು

ಕಮಲನಗರ, ಚಿಮ್ಮೇಗಾಂವ, ಕುಶನೂರ (ಟಿ), ಮುಧೋಳ (ಬಿ) ಹೊಳಸಮುದ್ರ, ತೋರಣಾ, ಡೋಣಗಾಂವ (ಎಂ), ಮುರ್ಕಿ ಮತ್ತು ದಾಪಕಾ ಕ್ಲಸ್ಟರಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮಿಕ್ಷೆಗೆ ನೇಮಕವಾದ ಎಲ್ಲಾ ಸಮಿಕ್ಷಕೆದಾರರಿಗೆ ಅವರ ಜವಾಬ್ದಾರಿ ತಿಳಿಸಲಾಯಿತು.

ವಿವಿಧ ಕಾರ್ಯಕ್ರಮ ಆಯೋಜನೆ । ಬಳ್ಳಾರಿಯಲ್ಲಿ ಸಂಭ್ರಮದ ಅಂತರಾಷ್ಟ್ರೀಯ ದಿನಾಚರಣೆ

# ಸಂವಿಧಾನದಿಂದ ದೇಶ ಭದ್ರ: ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅಭಿಮತ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.15–ಭಾರತಸಂವಿಧಾನವನ್ನು ನಾವೆಲ್ಲರೂಎಷ್ಟುಗೌರವಿಸುತ್ತೇವೆಯೋ, ಅಷ್ಟೇ ಮುಂಬರುವ ದಿನಗಳಲ್ಲಿ ಅಭಿವೃದ್ಧಿ ಹೊಂದಿದ ಭಾರತ ಕಾಣುತ್ತೇವೆ. ಆದರೆ ತಿರಸ್ಕಾರ ಮನೋಭಾವ ಕಂಡಾಗ ರಾಷ್ಟ್ರದ ಅವನತಿಯ ಹಾದಿಯೂ ಸಹ ಅಷ್ಟೇ ಸಮೀಪಿಸುತ್ತದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಭಿಪ್ರಾಯ ಪಟ್ಟರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ 'ನನ್ನ ಮತ–ನಮ್ಮ ಹಕ್ಕು' ಎಂಬ ಧ್ಯೇಯವಾಕ್ಯದೊಂದಿಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಸೋಮವಾರ ಏರ್ಪಡಿಸಿದ್ದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಡಾ.ಬಾಬು ಜಗನ್‌ಜೀವನ್ ರಾಮ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವುದರ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಈಗಿನ ಪೀಳಿಗೆಯು ಪ್ರಸ್ತುತ ದಿನಮಾನಗಳಲ್ಲಿ ನಡೆಯುವ ಆಗು–ಹೋಗುಗಳನ್ನು ಗಮನಿಸಬೇಕಿದೆ. ರಾಷ್ಟ್ರದ ವ್ಯವಸ್ಥೆ, ಕಾನೂನುಗಳ ಪರಿಪೂರ್ಣತೆ, ಕಾನೂನು ಅನುಷ್ಠಾನವಾಗದಿದ್ದರೆ ಆಗುವ ಘಟನೆಗಳನ್ನು ಗಮನಿಸಬೇಕು. ಹಾಗಾಗಿ ವಿದ್ಯಾರ್ಥಿಗಳು ಆಳವಾದ ಅಧ್ಯಯನ ನಡೆಸಬೇಕು ಎಂದು ಕಿವಿಮಾತು ಹೇಳಿದರು.

ಸ್ವಾತಂತ್ರ್ಯದ ನಂತರದ ದೇಶದ ಅಭಿವೃದ್ಧಿ ಮತ್ತು ಮುಂದಿನ ಪೀಳಿಗೆಯ ಭವಿಷ್ಯಕ್ಕಾಗಿ ಡಾ.ಬಿ.ಆರ್. ಅಂಬೇಡ್ಕರ್ ಅವರು ಭಾರತ–ಕ್ಕೆ ಅತ್ಯುತ್ತಮ ಆಡಳಿತ ವ್ಯವಸ್ಥೆ ನೀಡಬೇಕೆಂದು ಗಣರಾಜ್ಯ ಹಾಗೂ ಪ್ರಜಾಪ್ರಭುತ್ವ ಕಲ್ಪನೆಯನ್ನು ರೂಪಿಸಿ ಅದನ್ನು ಸಂವಿಧಾನದಲ್ಲಿ ಅಳವಡಿಸಿ, ಅದೇ ರೀತಿಯಾದ ಆಡಳಿತ ರೂಪಿಸಿ, ಆ ವ್ಯವಸ್ಥೆಯನ್ನು ಅಂಗೀಕರಿಸಿ, ನಮಗೆ ನಾವೇ ಅರ್ಪಿಸಿಕೊಂಡಿದ್ದೇವೆ ಎಂದು ತಿಳಿಸಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರು ಅಪಾರ ಜ್ಞಾನಿಗಳಾಗಿದ್ದರು. ಅವರು ಎಲ್ಲಾ ಕಾನೂನುಗಳನ್ನು ಅರಿತು–ಕೊಂಡಿದ್ದರು. ಜಗತ್ತಿನ ಎಲ್ಲಾ ವ್ಯವಸ್ಥೆಗಳನ್ನು ಅರಿತುಕೊಂಡ ಬಾಬಾ ಸಾಹೇಬರು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಸಂವಿಧಾನದ ಮೂಲಕ ಕಲ್ಪಿಸಿಕೊಟ್ಟರು. ಯಾವುದೇ ಒಂದು ದೇಶದ ಅಭಿವೃದ್ಧಿಯು ಅಲ್ಲಿನ ಆಡಳಿತ ವ್ಯವಸ್ಥೆ ಮೇಲೆ ಅವಲಂಬಿತವಾಗಿರುತ್ತದೆ. ಅಂತಹ ಉತ್ತಮ ಆಡಳಿತ ವ್ಯವಸ್ಥೆಯನ್ನು ನಮ್ಮ ದೇಶದಲ್ಲಿ ಕಾಣಬಹುದಾಗಿದೆ ಎಂದರು.

ವಿಶ್ವದಲ್ಲಿಯೇ ಎರಡನೇ ಅತಿದೊಡ್ಡ ಜನಸಂಖ್ಯೆ ಹೊಂದಿದ ರಾಷ್ಟ್ರ ಭಾರತ. ಪ್ರಜಾಪ್ರಭುತ್ವ ಹೊಂದಿದ ರಾಷ್ಟ್ರವಾಗಿದೆ. ಜನಪ್ರತಿನಿಧಿಗಳಿಂದಲೇ ಕಾನೂನು ರೂಪಿಸಲಾಗುತ್ತದೆ. ಜನರಿಗಾಗಿಯೇ ಅನುಷ್ಠಾನಗೊಳಿಸಲಾಗುತ್ತದೆ. ಹಾಗಾಗಿ ವಿಶ್ವವೇ ಅಭಿವೃದ್ಧಿ ಹೊಂದುತ್ತಿರುವ ನಮ್ಮ ರಾಷ್ಟ್ರದತ್ತ ನೋಡುತ್ತಿದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಇಂದಿನ ಯುವ–ಪೀಳಿಗೆಯೇ ಪ್ರಜಾಪ್ರಭುತ್ವ ಭವಿಷ್ಯವಾಗಿದೆ. ಈಗಿನ ಯುವ ಮನಸ್ಕರು ಸಂವಿಧಾನ ಹಕ್ಕುಗಳು ಮತ್ತು ಮೂಲಭೂತ ಕರ್ತವ್ಯಗಳ ಅರಿವು ಹೊಂದಬೇಕಿದೆ. ಉದಾತ್ತ ಗುರಿ ಹೊಂದುವುದರ ಮೂಲಕ ದೇಶಕ್ಕೆ ಅಭಿವೃದ್ಧಿಯ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.

ವಿಶೇಷ ಉಪನ್ಯಾಸಕರಾಗಿ ಭಾಗವಹಿಸಿದ್ದ ಕಂಪ್ಲಿಯ ಉಪನ್ಯಾಸಕರಾದ ರಮೇಶ್ ಛಲವಾದಿ ಅವರು ಮಾತನಾಡಿ, ಜನರ ಆರ್ಥಿಕ ಮತ್ತು ಸಾಮಾಜಿಕ ಜೀವನದಲ್ಲಿ ಯಾವುದೇ ರಕ್ತಕ್ರಾಂತಿಯಿಲ್ಲದೇ, ಕ್ರಾಂತಿಕಾರಕ ಬದಲಾವಣೆ ತರುವುದೇ, ಪ್ರಜಾಪ್ರಭುತ್ವ ಸರ್ಕಾರವಾಗಿದೆ. ಪ್ರಜಾಪ್ರಭುತ್ವವು ನಮಗೆ ಸಿಕ್ಕಿರುವ ವರದಾನವಾಗಿದೆ ಎಂದು ಹೇಳಿದರು.

ಪ್ರಜಾಪ್ರಭುತ್ವದ ತಾಯಿಬೇರು ಮತದಾನ. ಅದನ್ನು ಹೇಗೆ ಬಳಸಿಕೊಳ್ಳಬೇಕು ಎಂಬುದನ್ನು ನಾವು ಅರಿತುಕೊಂಡರೆ, ಅಂದುಕೊಂಡಂತಹ ಅಭಿವೃದ್ಧಿ ದೇಶವನ್ನು ಕಾಣಬಹುದಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮ ಆರಂಭಕ್ಕೂ ಮುನ್ನ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಸಂವಿಧಾನ ಪ್ರಸ್ತಾವನೆಯನ್ನು ಬೋಧಿಸಿದರು. ಇಂದಿನಿಂದ ಅಕ್ಟೋಬರ್ ಅಂತ್ಯದವರೆಗೆ ಜಿಲ್ಲೆಯ ಎಲ್ಲಾ ಶಾಲಾ–ಕಾಲೇಜುಗಳಲ್ಲಿ ಭಾಷಣ, ಚರ್ಚಾಸ್ಪರ್ಧೆ, ಚಿತ್ರಕಲೆ ಮತ್ತು ಫೋಟೋಗ್ರಫಿ ಸ್ಪರ್ಧೆಗಳಿಗೆ ಚಾಲನೆ ನೀಡಲಾಯಿತು. ನ.26 ರಂದು ವಿಜೇತರಾದವನ್ನು ಸನ್ಮಾನಿಸಲಾಗುತ್ತದೆ.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಜಲಾಲಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯ್ಕ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಡಿಡಿಪಿಯು ನಾಗಲಿಂಗಯ್ಯ ಸ್ವಾಮಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಬಳ್ಳಾರಿ ಜಿಲ್ಲಾ ಅಧ್ಯಕ್ಷ ಆಸೀಫ್ ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಶಾಲಾ–ಕಾಲೇಜು ಮಕ್ಕಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

*ಆಕರ್ಷಕ ಸೈಕಲ್ ರ್‍ಯಾಲಿ:*

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ನಗರದಲ್ಲಿ ಸೋಮವಾರ ನೂತನ ಜಿಲ್ಲಾಡಳಿತ ಭವನದಿಂದ ಆಕರ್ಷಕ ಸೈಕಲ್ ರ್‍ಯಾಲಿ ನಡೆಯಿತು. 'ನನ್ನ ಮತ–ನಮ್ಮ ಹಕ್ಕು' ಎಂಬ ಘೋಷಣೆ ಕೂಗಲಾಯಿತು. ಚಿಗುರು ಕಲಾತಂಡದ ಹುಲುಗಪ್ಪ ಸಂಗಡಿಗರಿಂದ ಮತದಾನ ಜಾಗೃತಿ ಗೀತೆಗಳನ್ನು ಪ್ರಸ್ತುತಪಡಿಸಿದರು.

ಬಳಿಕ ಸೈಕಲ್ ರ್‍ಯಾಲಿಗೆ ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಅವರು ಸೈಕಲ್ ಸವಾರಿ ಮಾಡುವ ಮೂಲಕ ಚಾಲನೆ ನೀಡಿದರು. ರ್‍ಯಾಲಿಯು ನೂತನ ಜಿಲ್ಲಾಡಳಿತ ಭವನದಿಂದ ಆರಂಭಗೊಂಡು ಗಡಿಗಿ ಚೆನ್ನಪ್ಪ ವೃತ್ತ– ಕನಕ ದುರ್ಗಮ್ಮ ದೇವಸ್ಥಾನ ವೃತ್ತ– ಎಸ್.ಪಿ ವೃತ್ತ– ಹೆಚ್.ಆರ್. ಗವಿಯಪ್ಪ ವೃತ್ತದ ಮಾರ್ಗವಾಗಿ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ವೇದಿಕೆ ಕಾರ್ಯಕ್ರಮದವರೆಗೆ ಸಾಗಿಬಂದಿತು.

# ಮಹಿಳೆ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.15–ಸಂಡೂರು ತಾಲ್ಲೂಕಿನ ಸುಶೀಲಾನಗರ ಗ್ರಾಮದ 1ನೇ ವಾರ್ಡ್ನ ನಿವಾಸಿ ಲಕ್ಷ್ಮೀಬಾಯಿ ಎನ್ನುವ 25 ವರ್ಷದ ಮಹಿಳೆಯು ಆ.27 ರಂದು ಹೊಟ್ಟೆನೋವು ಚಿಕಿತ್ಸೆಗಾಗಿ ಆಸ್ಪತ್ರೆಗೆ ಹೋಗಿಬರುತ್ತೇನೆ ಎಂದು ಹೇಳಿ ಮರಳಿಬಾರದೇ ಕಾಣೆಯಾಗಿದ್ದು, ಈ ಕುರಿತು ಸಂಡೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು: ಅಂದಾಜು 4.9 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ದುಂಡು ಮುಖ, ಅಗಲವಾದ ಹಣೆ, ಸಾಧಾರಣ ಮೈಕಟ್ಟು ಹೊಂದಿರುತ್ತಾಳೆ. ಮೇಲ್ಭಾಗದ ಹಲ್ಲುಗಳು ಚಿಕ್ಕದಾಗಿದ್ದು, 10 ಇಂಚು ಕಪ್ಪು ಕೂದಲು ಇವೆ. ಕಾಣೆಯಾದ ಸಂದರ್ಭದಲ್ಲಿ ಪಾಚಿ ಹಸಿರು ಬಣ್ಣದ ಸೀರೆ ಮತ್ತು ಬ್ಲೌಸ್ ಧರಿಸಿರುತ್ತಾಳೆ. ಕನ್ನಡ ಮತ್ತು ಲಂಬಾಣಿ ಭಾಷೆ ಮಾತನಾಡುತ್ತಾಳೆ. ಕಾಣೆಯಾದ ಮಹಿಳೆಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಸಂಡೂರು ಪೊಲೀಸ್ ಠಾಣೆ ಪಿ.ಎಸ್.ಐ ಮೊ.9480803061,8548080429 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.15–ಸಂಡೂರು ತಾಲ್ಲೂಕಿನ ಭುಜಂಗನಗರ ಗ್ರಾಮದ 02 ನೇ ವಾರ್ಡ್ನ ನಿವಾಸಿಯಾದ ಕೆ.ಕಲ್ಲೇಶಿ ಎನ್ನುವ 55 ವರ್ಷದ ವ್ಯಕ್ತಿಯು ಸೆ.08 ರಂದು ಕಾಣೆಯಾಗಿರುವ ಕುರಿತು ಸಂಡೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು: ಅಂದಾಜು 5.2 ಅಡಿ ಎತ್ತರ, ದುಂಡು ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಮುಖದಲ್ಲಿ ಕಪ್ಪು ಚುಕ್ಕೆ ಗುರುತು ಇವೆ. ಕಾಣೆಯಾದ ಸಂದರ್ಭದಲ್ಲಿ ಕೇಸರಿ ಬಣ್ಣದ ತುಂಬು ತೋಳಿನ ಅಂಗಿ ಮತ್ತು ಕಡು ನೀಲಿ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ ಭಾಷೆ ಮಾತನಾಡುತ್ತಾನೆ.

ಕಾಣೆಯಾದ ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ಸಂಡೂರು ಪೊಲೀಸ್ ಠಾಣೆಯ ಪಿ.ಎಸ್.ಐ ಮೊ.9480803061,8548080429 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ: ಪೌರರಕ್ಷಣಾ ದಳದ ಸ್ವಯಂ ಸೇವಕರಾಗಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.15–ಜಿಲ್ಲೆಯಲ್ಲಿ ಪೌರರಕ್ಷಣಾ ದಳದ ಸ್ವಯಂ ಸೇವಕರಾಗಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪೌರರಕ್ಷಣಾ ದಳದ ಉದ್ದೇಶ ಪ್ರಕೃತಿ ವಿಕೋಪ, ವಿಪತ್ತು ನಿರ್ವಹಣೆ ಮತ್ತು ಮಾನವ ನಿರ್ಮಿತ ವಿಕೋಪಗಳ ಸಮಯದಲ್ಲಿ ಸಾರ್ವಜನಿಕರ ಆಸ್ತಿ ಮತ್ತು ಪ್ರಾಣ ಕಾಪಾಡಲು ಪ್ರಮುಖ ಪಾತ್ರವಹಿಸುತ್ತಿದ್ದಾರೆ. ಇಂತಹ ಸಾಮಾಜಿಕ ಕಾರ್ಯವನ್ನು ಮಾಡಲು ಇಚ್ಛಿಸುವ ಬಳ್ಳಾರಿ ನಗರ ಮತ್ತು ಗ್ರಾಮೀಣ ಪ್ರದೇಶದ ಸಾರ್ವಜನಿಕರು ಮತ್ತು ಕಾಲೇಜು ವಿದ್ಯಾರ್ಥಿಗಳು ಸದಸ್ಯರಾಗುವ ಮೂಲಕ ಸೇವೆ ಸಲ್ಲಿಸಬಹುದಾಗಿದೆ.

ಅರ್ಜಿಗಳನ್ನು ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ರಸ್ತೆಯ ದೇವರಾಜು ಅರಸು ಭವನ ಎದುರುಗಡೆಯ ಜಿಲ್ಲಾ ಪೌರರಕ್ಷಣಾ ಕಚೇರಿ ಅಥವಾ ಜಿಲ್ಲಾ ಗೃಹರಕ್ಷಕದಳ ಕಚೇರಿಯಲ್ಲಿ ಅಕ್ಟೋಬರ್ 04 ರವರೆಗೆ ಅರ್ಜಿ ಪಡೆಯಬಹುದಾಗಿದೆ.

*ಸೂಚನೆ:*

ಪೌರರಕ್ಷಣಾ ವಿಭಾಗದ ಸದಸ್ಯನಾಗಲು ಯಾವುದೇ ವಿದ್ಯಾರ್ಹತೆ ಇರುವುದಿಲ್ಲ. ಮಾಜಿ ಯೋಧರು ಮತ್ತು ನಿವೃತ್ತ ಸರ್ಕಾರಿ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮುನ್ನಡೆಸಬಹುದು. ಈ ಸದಸ್ಯರು ಸಮಾಜ ಸೇವೆಯ ಭಾವನೆಯಿಂದ ಬರಬೇಕೆ ಹೊರತು ಅನ್ಯಭಾವನೆಗಳಿಂದ ಕೂಡಿರುವುದಿಲ್ಲ.

ಸ್ವ–ಇಚ್ಛೆಯಿಂದ ಸ್ವಯಂ ಸೇವಕರಾಗಿ ಕಾರ್ಯ/ಕರ್ತವ್ಯ ನಿರ್ವಹಿಸಬೇಕು. ಸರ್ಕಾರದ ಯಾವುದೇ ಧನಸಹಾಯ ಇರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ದೂ.08392 276421 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪೌರರಕ್ಷಣಾ ದಳದ ಮುಖ್ಯ ವಾರ್ಡನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಕ್ಷಕರ ದಿನಾ ಆಚರಣೆ; ಅರ್ಧ ಅವಧಿಗೆ ಬಾಗಿಲು ಮುಚ್ಚಿದ ಶಾಲೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ಶಿಕ್ಷಕರ ದಿನಾಚರಣೆಯ ಉದ್ದೇಶದಿಂದ ಕೇವಲ ಒಂದುವರೆ ಗಂಟೆ ಶಾಲಾ ಅವಧಿ ಶಾಲೆ ನಡೆಸಿ ನಂತರ ಶಾಲೆಗೆ ಬೀಗ ಹಾಕಿದ ಘಟನೆ ಕುಕನೂರು ತಾಲೂಕಿನ ಇಟಗಿ ಗ್ರಾಮದಲ್ಲಿ ಜರುಗಿದೆ.



ಶಿಕ್ಷಣ ಇಲಾಖೆ ಹಾಗೂ ಶಾಲಾ ಶಿಕ್ಷಕರ ಸಂಘದ ವತಿಯಿಂದ ಯಲಬುರ್ಗಾ ಪಟ್ಟಣದಲ್ಲಿ ಕುಕನೂರು ಹಾಗೂ ಯಲಬುರ್ಗಾ ಅಖಂಡ ತಾಲೂಕಿನ ಶಿಕ್ಷಕರ ದಿನಾಚರಣೆಯನ್ನು ಆಯೋಜಿಸಿದ್ದು ಶಾಲಾ ಶಿಕ್ಷಕರ ಸಂಘ ಹಾಗೂ ಶಿಕ್ಷಣ ಇಲಾಖೆಯ ವತಿಯಿಂದ ಎಲ್ಲಾ ಶಿಕ್ಷಕರಿಗೂ ಶನಿವಾರ ಶಾಲಾ ಅವಧಿ ಮುಗಿದ ಮೇಲೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಆಹ್ವಾನಿಸಲಾಗಿತ್ತು ಆದರೆ ಕುಕನೂರು ತಾಲೂಕಿನ ಇಟಗಿ ಗ್ರಾಮದ ಮಹೇಶ್ವರ ಪ್ರಾಥಮಿಕ ಶಾಲೆ 10:00 ಗಂಟೆಗೆ ಶಾಲೆಗೆ ಬೀಗ ಹಾಕಿ ರಜೆ ಘೋಷಣೆ ಮಾಡಿದ ಘಟನೆ ಬೆಳಕಿಗೆ ಬಂದಿರುತ್ತದೆ.

ದೇಶ ಕಂಡ ಶ್ರೇಷ್ಠ ವ್ಯಕ್ತಿ ಸರ್ವಪಲ್ಲಿ ರಾಧಾಕೃಷ್ಣ ಅವರ ಜನ್ಮದಿನವನ್ನು ಶಿಕ್ಷಕರ ದಿನಾಚರಣೆ ಎಂದು ದೇಶಾದ್ಯಂತ ಸಪ್ಟೆಂಬರ್ 5 ರಂದು ಆಚರಿಸಿದ್ದು ಅಂದು ತಮ್ಮ ತಮ್ಮ ಶಾಲೆಯಲ್ಲಿ ಸಾಂಕೇತಿಕವಾಗಿ ಆಚರಣೆ ಮಾಡಿ ನಂತರ ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಕಾರ್ಯಕ್ರಮ ಆಯೋಜಿಸುವುದು ಸಹಜವಾದ ಸಂಗತಿಯಾಗಿದೆ. ಆದರೆ ಸರ್ವಪಲ್ಲಿ ರಾಧಾಕೃಷ್ಣ ಅವರ ಆಶಯದಂತೆ ಶಿಕ್ಷಕರ ದಿನಾಚರಣೆಗೆ (ಅವರ ಜಯಂತಿ ಆಚರಣೆ) ಯಾವುದೇ ಕಾರಣಕ್ಕೂ ಶಾಲಾ ಹಾಗೂ ತರಗತಿಗಳಿಗೆ ಧಕ್ಕೆ ಉಂಟಾಗಬಾರದು ಶಾಲಾ ತರಗತಿಗಳು ಯಥಾರೀತಿಯಾಗಿ ಸಾಗುತ್ತಿರಬೇಕು ಎಂಬ ಹೆಬ್ಬಯಕೆ ಅವರದಾಗಿತ್ತು

> ಖಾಸಗಿ ಶಾಲೆಗಳ ಒಕ್ಕೂಟದಿಂದ ಶಿಕ್ಷಕರ ದಿನಾಚರಣೆಯಲ್ಲಿ ಪಾಲ್ಗೊಳ್ಳುವ ನಿರ್ಧಾರ ಕೈಗೊಳ್ಳಲಾಗಿದ್ದು ಈ ಕುರಿತಂತೆ ಕ್ಷೇತ್ರ ಶಿಕ್ಷಣಾಧಿಕಾರಿಗೆ ಅನುಮತಿ ನೀಡುವಂತೆ ಕೇಳಿಕೊಂಡಿದ್ದು ಅವರು ನಿರಾಕರಿಸಿದಾಗ ನಮ್ಮ ಸಂಘಟನೆಯ ಹೇಳಿಕೆಯಂತೆ ಶಾಲೆಗೆ 10:00 ಗಂಟೆಗೆ ರಜೆ ಘೋಷಣೆ ಮಾಡಿರುತ್ತೇವೆ.
>
> **ಮುಖ್ಯೋಪಾಧ್ಯಾಯರು**
> **ಮಹೇಶ್ವರ ಪ್ರಾಥಮಿಕ ಮತ್ತು ಪ್ರೌಢಶಾಲೆ ಇಟಗಿ**

> ನಮ್ಮ ಮಕ್ಕಳು ಇಂದು 10:00ಗೆ ಶಾಲೆಯಿಂದ ಮರಳಿ ಬಂದಿದ್ದು ಆಶ್ಚರ್ಯ ತಂದಿರುತ್ತದೆ . ಯಾವುದು ತುರ್ತು ಪರಿಸ್ಥಿತಿಯ ನಿಮಿತ್ಯ ರಜೆ ಘೋಷಣೆ ಮಾಡಿದ್ದಾರೆ ಎಂಬ ಅನುಮಾನ ನಮ್ಮಲ್ಲಿ ಮೂಡಿದ್ದು, ಸುಮ್ಮನಾಗಿರುತ್ತವೆ.
>
> **– ಹೆಸರು ಹೇಳಲು ಇಚ್ಛಿಸದ ಪಾಲಕ**

ಆದರೆ ಸರ್ವಪಲ್ಲಿ ರಾಧಾಕೃಷ್ಣ ಅವರಿಗೆ ಗೌರವ ಕೊಡಬೇಕಾದ ಶಾಲಾ ಶಿಕ್ಷಕರ ಅವರಿಗೆ ಅಗೌರವ ತೋರುತ್ತಿರುವುದು ಎಷ್ಟರಮಟ್ಟಿಗೆ ಸರಿ ಎಂಬ ಪ್ರಶ್ನೆ ಎಲ್ಲರಲ್ಲೂ ಕಾಣಲು ಪ್ರಾರಂಭಿಸಿದ್ದು. ಮಕ್ಕಳಲ್ಲಿ ಹಾಗೂ ಸಾರ್ವಜನಿಕರಲ್ಲಿ ಶಿಸ್ತು ಸಂಯಮ ಮೂಡಿಸಬೇಕಾದ ಶಿಕ್ಷಕರೇ ತಮ್ಮ ವೃತ್ತಿಯನ್ನು ಅರ್ಧದಲ್ಲಿ ಮಟಕುಗೊಳಿಸಿ ಸಂಭ್ರಮಾಚರಣೆಗೆ ತೆರಳುವುದು ಎಷ್ಟರಮಟ್ಟಿಗೆ ಸರಿ ಎಂಬುದು ಯಕ್ಷಪ್ರಶ್ನೆಯಾಗಿದೆ.

ಕಳೆದ ಎರಡು ವರ್ಷ ಶಿಕ್ಷಕರ ದಿನಾಚರಣೆ ಸಂಭ್ರಮದಲ್ಲಿ ತಾಲೂಕಿನಾದ್ಯಂತ (ಕುಕನೂರು ಹಾಗೂ ಯಲಬುರ್ಗಾ ತಾಲೂಕು ಒಳಗೊಂಡಂತೆ) ಶಾಲೆಗೆ ರಜೆ ಘೋಷಿಸಿದ್ದು ನಂತರ ಪತ್ರಿಕೆಗಳಲ್ಲಿನ ವರದಿ ನಂತರ ಶಿಕ್ಷಣ ಇಲಾಖೆಯ ಅಧಿಕಾರಿಗಳು ಎಚ್ಚೆತ್ತುಕೊಂಡಿದ್ದು ಈ ಬಾರಿ ಶಿಕ್ಷಕರ ದಿನಾಚರಣೆಗೆ ಸಂಬಂಧಿಸಿದಂತೆ ತರಗತಿಗಳಿಗೆ ಯಾವುದೇ ಅಡಚಣೆ ಉಂಟಾಗದಂತೆ ಶಾಲಾವದಿ ಪೂರ್ಣಗೊಳಿಸಿ ಕಾರ್ಯಕ್ರಮಕ್ಕೆ ಆಗಮಿಸುವಂತೆ ಸೂಚನೆ ನೀಡಲಾಗಿತ್ತು ತಾಲೂಕಿನಾದ್ಯಂತ ಶಾಲಾ ತರಗತಿಗಳು ಸುಸೂತ್ರವಾಗಿ ಜರುಗಿದ್ದು ಶಾಲಾವದಿಯ ನಂತರ ಎಲ್ಲಾ ಶಿಕ್ಷಕರು ಜಯಂತಿ ಆಚರಣೆಗೆ ತೆರಳಿರುತ್ತಾರೆ.

ಆದರೆ ಇಟಗಿ ಗ್ರಾಮದ ಖಾಸಗಿ ಶಾಲೆಯಾದ ಮಹೇಶ್ವರ ಪ್ರಾಥಮಿಕ ಶಾಲೆಗೆ ಬೆಳಗ್ಗೆ 10 ಗಂಟೆಗೆ ನೇ ರಜೆ ಘೋಷಣೆ ಮಾಡಿ ಬೀಗ ಹಾಕಿರುವುದು ಶಿಕ್ಷಣ ಇಲಾಖೆಯ ನಿಯಮವನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಸಾಬೀತಾಗಿರುತ್ತದೆ. ಇನ್ನು ಮುಂದಾದರೂ ಕುಕನೂರು ಹಾಗೂ ಯಲಬುರ್ಗಾ ತಾಲೂಕಿನಲ್ಲಿ ಶಾಲೆಗಳು ಸರ್ಕಾರದ ನಿಯಮ ಉಲ್ಲಂಘಿಸಿದಂತೆ ಕ್ರಮ ಕೈಗೊಳ್ಳುತ್ತಾರೆ ಎಂಬುದು ಸಾರ್ವಜನಿಕರ ಪ್ರಶ್ನೆಯಾಗಿದೆ.

# ಹಿಂದೂ ಹೂಗಾರ ಎಂದು ನಮೂದಿಸಲು ಶಂಕರ ಹೂಗಾರ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ರಾಜ್ಯದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ–2025 ಮನೆ ಮನೆ ಸಮೀಕ್ಷೆಯಲ್ಲಿ ಹೂಗಾರ ಸಮಾಜದವರು ಹಿಂದೂ ಹೂಗಾರ ಎಂದು ನಮೂದಿಸಲು ಬೆಂಗಳೂರು ಅಖಿಲ ಕರ್ನಾಟಕ ಹೂಗಾರ ಸೇವಾ ಮಹಾಸಭಾ (ರಿ.) ಅಧ್ಯಕ್ಷರಾದ ತಾಲೂಕಿನ ಕಲ್ಲೂರು ಗ್ರಾಮದ ಶಂಕರ ಹೂಗಾರ ತಿಳಿಸಿದ್ದಾರೆ.



ಈ ಕುರಿತು ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವರು,

ಅಖಿಲ ಕರ್ನಾಟಕ ಹೂಗಾರ ಸೇವಾ ಮಹಾಸಭಾ (ರಿ.) ಬೆಂಗಳೂರು ಇವರು ಮಾಡುವ ಮನವಿಯೇನೆಂದರೆ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ರಾಜ್ಯದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ–2025 ಮನೆ ಮನೆ ಸಮೀಕ್ಷೆಯನ್ನು ಇದೇ ದಿನಾಂಕ 22–09–2025 ರಿಂದ ಅಕ್ಟೋಬರ್ 7ರ ವರೆಗೆ ರಾಜ್ಯಾದ್ಯಂತ ಹಮ್ಮಿಕೊಂಡಿದೆ. ಈ ಸಂದರ್ಭದಲ್ಲಿ ಕರ್ನಾಟಕದಲ್ಲಿ ವೃತ್ತಿಯಿಂದಲೇ ಅನ್ವರ್ಥನಾಮವನ್ನು ಪಡೆದ ನಾವು ಹೂ ಪತ್ರಿ ಕೊಡುವ ಕಾಯಕದಿಂದ ಹೂಗಾರರೆನಿಸಿಕೊಂಡಿದ್ದೇವೆ.

ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸ್ಥಿತಿಗತಿಯ ಕುರಿತು ಮಾಹಿತಿ ಪಡೆದುಕೊಳ್ಳುವ ಸಮೀಕ್ಷೆ ವೇಳೆಯಲ್ಲಿ, ನೈಜ ಜಾತಿಯನ್ನು ಪ್ರತಿಯೊಬ್ಬರು ನಮೂದಿಸಬೇಕು. ಹೀಗಾಗಿ ಜೀರ, ಗುರವ, ಗುರುವ ಪೂಜಾರ, ಪೂಜಾರಿ, ಫುಲಾರಿ ಫೂಲಮಾಲಿ ಎಂಬ ಉಪನಾಮಗಳಿಂದ ಕರೆಯಲ್ಪಡುವ ಕರ್ನಾಟಕದ ನಮ್ಮ ಹೂಗಾರ ಸಮುದಾಯದ ಸಮಸ್ತರು ಧರ್ಮದ ಕಾಲಂನಲ್ಲಿ ಹಿಂದೂ ಎಂದು ಜಾತಿ ಕಾಲಂನಲ್ಲಿ ಹೂಗಾರ ಎಂದು ಕುಲಕಸುಬು ಕಾಲಂನಲ್ಲಿ ಹೂಗಾರಿಕೆ ಎಂದು ನಮೂದಿಸಬೇಕೆಂದು ಹೂಗಾರ ಮಹಾಸಭಾದ ಪರವಾಗಿ ಅಧ್ಯಕ್ಷ ಶಂಕರ ಹೂಗಾರ ಪತ್ರಿಕೆಗೆ ತಿಳಿಸಿದ್ದಾರೆ.

# ಶಿವಪ್ರಿಯ ಕಾನೂನು ಮಹಾವಿದ್ಯಾಲಯದ ವಿದ್ಯಾರ್ಥಿ ಪ್ರತಿನಿಧಿಗಳ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಶಿವಪ್ರಿಯ ಕಾನೂನು ಮಹಾವಿದ್ಯಾಲಯ 2025–26ನೇ ಸಾಲಿನ ವಿದ್ಯಾರ್ಥಿ ಪ್ರತಿನಿಧಿಗಳ ಆಯ್ಕೆ ಮಾಡಲಾಯಿತು.

ಪ್ರಧಾನ ಕಾರ್ಯದರ್ಶಿಯಾಗಿ ವೆಂಕಟನರೇಂದ್ರ, ಉಪಕಾರ್ಯದರ್ಶಿ ಸುಶ್ಮಿತ, ಸಹ ಕಾರ್ಯದರ್ಶಿ ಅಣ್ಣಪ್ಪ, ವಿದ್ಯಾರ್ಥಿ ಪ್ರತಿನಿಧಿಗಳು ಲತೀಫ್, ಲಕ್ಷ್ಮಿ, ಅನುಪಮಾ, ಕುಂಡಲಿಕ, ಸಂದೀಪ್, ವಿಜಯಲಕ್ಷ್ಮಿ, ಕೃಷ್ಣವೇಣಿ, ಮತ್ತು ಪ್ರವಾಸೋದ್ಯಮ ಸಚಿವರಾಗಿ ಶ್ರೀದೇವಿ ಹಿರೇಮಠ ,ಭೀಮೇಶ್, ಕ್ರೀಡಾ ಮಂತ್ರಿಗಳಾಗಿ ಸುಧಾ ಬೋಸ್ಲೆ ,ಸಾಂಸ್ಕೃತಿಕ ಚಟುವಟಿಕೆ ಮಂತ್ರಿ ರಾಘವೇಂದ್ರ, ಕಾನೂನು ನೆರವು ಮಂತ್ರಿಗಳಾಗಿ ದೇವಿ ಕಿರಣ್, ವಿಜಯಲಕ್ಷ್ಮಿ, ಸಂದೀಪ್ ಕುಮಾರ್ ಮತ್ತು ಪತ್ರಿಕಾ ಪ್ರತಿನಿಧಿಗಳಾಗಿ ಶ್ರೀದೇವಿ ಹಿರೇಮಠ.ಶಿವಕುಮಾರ್ ಮ್ಯಾಗೇರಿ ಆಯ್ಕೆಯಾಗಿದ್ದಾರೆ.

ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಪ್ರೊಫೆಸರ ಡಾ. ಬಸವರಾಜ್ ಅನಸಿ ಅವರು ಮಾತನಾಡಿ ಆಯ್ಕೆಯಾದ ಎಲ್ಲರಿಗೂ ಅಭಿನಂದನೆಗಳನ್ನು ತಿಳಿಸಿದ್ದಾರೆ. ಉಪನ್ಯಾಸಕರಾದ ರಜೆಯ ಸುಲ್ತಾನ, ಸರಸ್ವತಿ ,ಸುಕನ್ಯ ,ಪ್ರದೀಪ್ , ತಿರುಪತಿ, ಸಂಗಮನಾಥ ಮೂರುಶಿಲ್ಲಿನ , ಶಾಲಿನಿ ಮತ್ತು ಎಲ್ಲಾ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಸಂಸ್ಕಾರದಿಂದ ಜೀವನ ಪಾವನ : ಶ್ರೀ ಸಿದ್ದೇಶ್ವರ ಶಿವಾಚಾರ್ಯರು

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಂಗಮರು ಪೂರ್ವಜರ ಆಚಾರ ವಿಚಾರಗಳನ್ನು ಅರಿತು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ಧರ್ಮರಕ್ಷಣೆಗೆ ಮುಂದಾಗಬೇಕು.



ಪ್ರತಿಯೊಬ್ಬ ಮನುಷ್ಯ ಧರ್ಮ ಸಂಸ್ಕಾರಗಳ ಅರಿವು ಹೊಂದುವುದು ಅವಶ್ಯ. ಜತೆಗೆ ಅದನ್ನು ಪಾಲಿಸಿದರೆ ಜೀವನ ಪಾವನವಾಗುವುದು ಎಂದು ಮೈನಳ್ಳಿ–ಬಿಕನಳ್ಳಿ ಷ.ಬ್ರ.108 ಶ್ರೀ ಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ನಗರದ ಶ್ರೀ ರೇಣುಕಾಚಾರ್ಯ ಮಂದಿರದಲ್ಲಿ ಶ್ರೀ ವೀರಮಹೇಶ್ವರ ಕ್ಷೇಮಾಭಿವೃದ್ಧಿ ಸಂಘ, ಪತ್ತಿನ ಸಹಕಾರ ಸಂಘ ಇವುಗಳ ವಾರ್ಷಿಕ ಮಹಾಸಭೆ ಹಾಗೂ ಪ್ರತಿಭಾ ಪುರಸ್ಕಾರದ ಪ್ರಯುಕ್ತ ಭಾನುವಾರ ಆಯೋಜಿಸಿದ್ದ ಜಂಗಮ ವಟುಗಳಿಗೆ ಅಯ್ಯಾಚಾರ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. 8 ವರ್ಷ ವಯಸ್ಸಿನ ಎಲ್ಲ ಜಂಗಮರು ಸಂಪ್ರದಾಯದಂತೆ ಅಯ್ಯಾಚಾರ ದೀಕ್ಷೆ ಪಡೆಯಬೇಕು. ಇಂದು ಶಿವದೀಕ್ಷಾ ಪಡೆದ ವಟುಗಳು ತಮ್ಮ ಜೀವನದುದ್ದಕ್ಕೂ ನಿತ್ಯ ಸ್ನಾನದ ನಂತರ ಶಿವಪೂಜೆ ನೆರವೇರಿಸಬೇಕು ಇದರಿಂದ ನಿಮ್ಮ ಭವಿಷ್ಯಕ್ಕೆ ಭದ್ರ ಬುನಾದಿ ದೊರೆಯುದರಲ್ಲಿ ಯಾವುದೇ ಸಂದೇಹವಿಲ್ಲ ಎಂದರು.

ವೀರಶೈವ ಧರ್ಮ ಪರಂಪರೆಯಲ್ಲಿ ಬರುವ 16 ಸಂಸ್ಕಾರಗಳಲ್ಲಿ ಅತ್ಯಂತ ಶ್ರೇಷ್ಠವಾದ ಸಂಸ್ಕಾರವೇ ದೀಕ್ಷಾ ಸಂಸ್ಕಾರ. ಭಗವಂತನನ್ನು ಸಾಕ್ಷಾತ್ಕಾರ ಮಾಡಿಕೊಳ್ಳುವ ಮಾರ್ಗವೇ ದೀಕ್ಷೆಯಾಗಿದೆ. ಈ ಪರಂಪರೆಯಲ್ಲಿ ಅನಾದಿ ಕಾಲದಿಂದಲೂ ಲಿಂಗದೀಕ್ಷೆಗೆ ತನ್ನದೇ ಆದ ಮಹತ್ವ ನೀಡಿದೆ. ದೀಕ್ಷೆ ಎಂಬ ಪದಕ್ಕೆ ತನ್ನದೆ ಆದ ಮಹತ್ವವಿದೆ. ದೀ ಎಂದರೇ ದಿಯತೇ ಶಿವಜ್ಞಾನಂ ಕ್ಷೀಯತೆ ಪಾಶ ಬಂಧನಂ ಶಿವಜ್ಞಾನ ಲಭಿಸಿ ಪಾಪಕರ್ಮಗಳನ್ನು ನಾಶ ಮಾಡುವ ಶಕ್ತಿ ದೀಕ್ಷೆಗಿಯಿದೆ ಎಂದರು. ಬ್ರಾಹ್ಮಿ ಮುಹೂರ್ತದಲ್ಲಿ ಬೆಳಗ್ಗೆ 15ಕ್ಕೂ ಹೆಚ್ಚು ಜಂಗಮ ವಟುಗಳಿಗೆ ಅಯ್ಯಾಚಾರ ದೀಕ್ಷೆ ಶ್ರೀಗಳು ನೀಡಿದರು. ಇದಕ್ಕೂ ಮುನ್ನ ಶ್ರೀ ರೇಣುಕಾಚಾರ್ಯರ ಮೂರ್ತಿಗೆ ರುದ್ರಾಭಿಷೇಕ, ವಿಶೇಷ ಹೂವಿನ ಅಲಂಕಾರ, ಮಹಾಪೂಜೆ ಜರುಗಿತು. ಕೊಪ್ಪಳ ನಗರ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜಂಗಮ ಸಮಾಜದ ಬಾಂದವರು ಪಾಲ್ಗೊಂಡಿದ್ದರು.

# ಭಾವಣಿ ವ್ಯಾಪಾರಸ್ಥರ ಕ್ಷೇಮಾಭಿವೃದ್ಧಿ ಸಂಘದ ಸದಸ್ಯತ್ವ ಅಭಿಯಾನ ಕುರಿತು

ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರ: ತಾಲ್ಲೂಕಿನ ಭಾವಣಿ ವ್ಯಾಪಾರಸ್ಥರ ಕ್ಷೇಮಾಭಿವೃದ್ಧಿ ಸಂಘ ಲಿಂಗಸುಗೂರು ವತಿಯಿಂದ ನಗರದ ಎಲ್ಲಾ ವ್ಯಾಪಾರಸ್ಥರಿಗೆ ಸದಸ್ಯತ್ವ ಅಭಿಯಾನವನ್ನು ಯಶಸ್ವಿಯಾಗಿ ನಿರ್ವಹಿಸಲು ಪತ್ರಿಕಾ ಗೋಷ್ಠಿ ನಡೆಯಿತು.

ಸಂಘದ ಅಧ್ಯಕ್ಷರಾದ ಸುಮಂತ ಕನಕಗಿರಿ, ಪ್ರಧಾನ ಕಾರ್ಯದರ್ಶಿ ಸಿದ್ದು ಬಡಿಗೇರ, ಖಜಾಂಚಿ ನಿರ್ಮಲ ಡಾಗಾ ಸಂಘದ ಉದ್ದೇಶ, ಗುರಿ ಮತ್ತು ಅಭಿಯಾನದ ವಿವರವನ್ನು ಪತ್ರಿಕಾ ಗೋಷ್ಠಿಯಲ್ಲಿ ಹೇಳಿದರು ನಗರದಲ್ಲಿ ಆನ್‌ಲೈನ್ ಮಾರುಕಟ್ಟೆ ಯುಗದ ಪರಿಣಾಮದಿಂದ ವ್ಯಾಪಾರಸ್ಥರಿಗೆ ಅನೇಕ ಸಮಸ್ಯೆಗಳು ಎದುರಾಗುತ್ತಿವೆ. ಎಲ್ಲ ವ್ಯಾಪಾರಸ್ಥರನ್ನು ಒಗ್ಗೂಡಿಸಿ, ಸಂಘಟಿತವಾಗಿ ಕೈಜೋಡಿಸಿ ಉತ್ತಮ ಪರಿಸ್ಥಿತಿ ನಿರ್ಮಿಸುವ ಉದ್ದೇಶ ಎಂದು ನಿರ್ಧರಿಸಿದ್ದೇವೆ.

19–09–2025 ರಂದು ಬೆಳಿಗ್ಗೆ 10 ಗಂ–ಟೆಗೆ ರಾಘವೇಂದ್ರ ಮಠ ಲಿಂಗಸುಗೂರು ನಲ್ಲಿ ನಡೆಯುವ ಸದಸ್ಯತ್ವ ಅಭಿಯಾನದಲ್ಲಿ ನಗರದಲ್ಲಿನ ಎಲ್ಲಾ ವ್ಯಾಪಾರಸ್ಥರು ತಮ್ಮ ಅಂಗಡಿಗಳನ್ನು ಬಂದಮಾಡಿ, ಸ್ವಯಂ ಪ್ರೇರಿತವಾಗಿ ಭಾಗವಹಿಸಲು ಹೇಳಿದರು.

# ಸಹಕಾರಿ ಕ್ಷೇತ್ರದ ಬೆಳವಣಿಗೆಗೆ ಪ್ರಾಮಾಣಿಕ ಪರಿಶ್ರಮ ಅಗತ್ಯ-ಎಸ್.ಆರ್.ಪಾಟೀಲ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,14-ತಾನು ಎಲ್ಲರಿಗಾಗಿ, ಎಲ್ಲರೂ ತನಗಾಗಿ ಎಂಬ ತತ್ವದ ಸಹಕಾರಿ ಕ್ಷೇತ್ರದ ಬೆಳವಣಿಗೆಗೆ ಆಡಳಿತ ಮಂಡಳಿ ಹಾಗೂ ಸಿಬ್ಬಂದಿಗಳ ಪ್ರಾಮಾಣಿಕ ಪರಿಶ್ರಮ ಅಗತ್ಯವಾಗಿದೆ ಎಂದು ಮಾಜಿ ಸಚಿವ ಎಸ್.ಆರ್.ಪಾಟೀಲ ಹೇಳಿದರು.

ನವನಗರದ ಡಾ.ಅಂಬೇಡ್ಕರ ಭವನದಲ್ಲಿ ರವಿವಾರ ನಡೆದ ಜಿಲ್ಲಾ ರಡ್ಡಿ ನೌಕರರ ಪತ್ತಿನ ಸಹಕಾರ ಸಂಘದ 10 ನೇ ವಾರ್ಷಿಕ ಮಹಾಸಭೆ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಹಕ ನೌಕರರು ಸಂಘದಿಂದ ಪಡೆದ ಸಾಲವನ್ನು ಸದ್ವಿನಿಯೋಗ ಮಾಡಿಕೊಂಡು ಅಭಿವೃದ್ಧಿ ಸಾಧಿಸಿ ನಿಗದಿತ ಸಮಯಕ್ಕೆ ಸಾಲ ಮರುಪಾವತಿಸಿ ಸಂಘದ ಬೆಳವಣಿಗೆಗೆ ಸಹಕರಿಸಬೇಕು ಎಂದರು.

ಮುಖ್ಯ ಅತಿಥಿ ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಮಾತನಾಡಿ, ಸಂಘ ಸಮಾಜದ ನೌಕರರ ಅಭಿವೃದ್ಧಿಗೆ ಸಹಕಾರಿಯಾಗಲಿ, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಪ್ರೋತ್ಸಾಹಿಸುವ ಸಾಮಾಜಿಕ ಕಳಕಳಿಯ ಕಾರ್ಯ ನಿರಂತರವಾಗಿರಲಿ ಎಂದು ಹೇಳಿದರು.

ಇನ್ನೋರ್ವ ಮುಖ್ಯ ಅತಿಥಿ ಬಾಗಲಕೋಟೆ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಅಧ್ಯಕ್ಷ ಅಜಯಕುಮಾರ ಸರನಾಯಕ, ಸಂಘ ಹೆಚ್ಚು ಠೇವಣಿ ಸಂಗ್ರಹಿಸಿ ಸಾಲದ ಅವಶ್ಯಕತೆಯುಳ್ಳ ನೌಕರರಿಗೆ ಅನುಕೂಲತೆ ಕಲ್ಪಿಸಬೇಕು ಎಂದರು.

ಅತಿಥಿ ಬಾಲಾಜಿ ಶುಗರ್ಸ್ ಅಧ್ಯಕ್ಷ ಎಚ್.ಎಲ್.ಪಾಟೀಲ ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಶಾಸಕ ಎಚ್.ವಾಯ್.ಮೇಟಿ, ಸಹಕಾರಿ ರಂಗದ ಬೆಳವಣಿಗೆಗೆ ಎಲ್ಲರ ಸಹಕಾರ, ಪ್ರಾಮಾಣಿಕತೆ, ವಿಶ್ವಾಸ ಅಗತ್ಯವಾಗಿದೆ ಎಂದು ಹೇಳಿದರು.

ಸಂಘದ ವಾರ್ಷಿಕ ವರದಿ ಮಂಡಿಸಿದ ಅಧ್ಯಕ್ಷ ಆರ್.ಎಸ್.ಪಾಟೀಲ, ಸಂಘ ಕಳೆದ ಮಾರ್ಚ ಅಂತ್ಯಕ್ಕೆ 17.22 ಲಕ್ಷ ರೂ.ಗಳ ನಿವ್ವಳ ಲಾಭ ಗಳಿಸಿದ್ದು, ಸದಸ್ಯರಿಗೆ ಪ್ರತಿಶತ 12 ರಷ್ಟು ಲಾಭಾಂಶ ಹಂಚಿಕೆ ಮಾಡಲು ತೀರ್ಮಾನಿಸಿದೆ. 5 ಲಕ್ಷ ರೂ.ಗಳವರೆಗೆ ಸಾಲದ ಮಿತಿ ಹೆಚ್ಚಿಸಲಾಗುತ್ತಿದೆ ಎಂದು ಹೇಳಿದರು. ಸಾನಿಧ್ಯ ವಹಿಸಿದ್ದ ಆಧ್ಯಾತ್ಮ ಚಿಂತಕ ಪ್ರದೀಪ ಗುರೂಜಿ, ಪರಸ್ಪರ ಸಹಕಾರ, ಸಹಬಾಳ್ವೆಯ ತತ್ವವೇ ಸಹಕಾರಿ ಕ್ಷೇತ್ರದ ಧ್ಯೇಯವಾಗಿದ್ದು, ಆಡಳಿತ ಮಂಡಳಿ, ಗ್ರಾಹಕರು, ಸಿಬ್ಬಂದಿ ಎಲ್ಲರೂ ಸಹಕಾರದೊಂದಿಗೆ ಸಂಘಗಳನ್ನು ಬೆಳೆಸಬೇಕು ಎಂದರು. ವೇದಿಕೆಯಲ್ಲಿ ಸಂಘದ ಸರ್ವ ಸದಸ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಎಸ್ಎಸ್ಎಲ್ಸಿ ಹಾಗೂ ಪಿಯುಸಿಯಲ್ಲಿ ಶೇ.90 ಕ್ಕಿಂತಲೂ ಹೆಚ್ಚು ಅಂಕ ಗಳಿಸಿದ ರಡ್ಡಿ ಸಮಾಜದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತಲ್ಲದೇ, ಸಮಾಜದ ನಿವೃತ್ತ ನೌಕರರು, ದಾನಿಗಳನ್ನು ಸನ್ಮಾನಿಸಲಾಯಿತು.

ಬೆನಕಟ್ಟಿಯ ಹೇಮರಡ್ಡಿ ಮಲ್ಲಮ್ಮ ಭಜನಾ ಸಂಘದವರು ಪ್ರಾರ್ಥನೆ ಹಾಡಿದರು. ಸಂಘದ ನಿರ್ದೇಶಕ ಅಶೋಕ ಎಮ್ಮಿ ಸ್ವಾಗತಿಸಿದರು. ನಿರ್ದೇಶಕ ಎಸ್.ಬಿ.ಮಾಚಾ ಪ್ರಾಸ್ತಾವಿಕವಾಗಿ ಮಾತನಾಡಿ ಸಂಘದ ಪ್ರಗತಿಯನ್ನು ತಿಳಿಸಿದರು. ಸಂಜಯ ನಡುವಿನಮನಿ, ಪಾಂಡುರಂಗ ಸನ್ನಪ್ಪನವರ ನಿರೂಪಿಸಿದರು. ಉಮಾ ಕೆಳಗಿನಗೌಡರ ವಂದಿಸಿದರು.

# ರಾಂಪುರ ಕೊಕ್ಕೊ ತಂಡ ಜಿಲ್ಲಾ ಮಟ್ಟಕ್ಕೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.15-ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ಜರುಗಿದ ತಾಲೂಕು ಮಟ್ಟದ ಪದವಿ ಪೂರ್ವ ಕಾಲೇಜು ಕ್ರೀಡಾಕೂಟದ ಕೊಕ್ಕೊ ಸ್ಪರ್ಧೆಯಲ್ಲಿ ರಾಂಪುರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ತಂಡ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದೆ.

ವೈಯಕ್ತಿಕ ಸ್ಪರ್ಧೆಗಳಲ್ಲೂ ಕಾಲೇಜಿನ ಕ್ರೀಡಾಪಟುಗಳು ಸಾಧನೆ ತೋರಿದ್ದು, ಐಶ್ವರ್ಯ ಬೂದಿಹಾಳ ಗುಂಡು ಮತ್ತು ಚಕ್ರ ಎಸೆತದಲ್ಲಿ ಪ್ರಥಮ ಸ್ಥಾನ, ಪ್ರದೀಪ ಕೊಲ್ಕಾರ 3ಸಾವಿರ ಮೀಟರ್ ಓಟದಲ್ಲಿ ಪ್ರಥಮ ಹಾಗೂ ಪ್ರವೀಣ ಹಿರೇಮಠ 800 ಮೀ. ಓಟದಲ್ಲಿ ದ್ವಿತೀಯ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ ಎಂದು ಕಾಲೇಜಿನ ಪ್ರಾಚಾರ್ಯ ಸುರೇಶ ಮೇಟಿ ಹಾಗೂ ಕ್ರೀಡಾ ತರಬೇತುದಾರ ಪ್ರೊ. ವಿ.ಎಸ್.ದಾಸರ ತಿಳಿಸಿದ್ದಾರೆ.

# ಪಾಲಕರ ಸಭೆ-ವಿದ್ಯಾರ್ಥಿಗಳ ಪ್ರಗತಿ ಕುರಿತು ಸಮಾಲೋಚನೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.15-ನಗರದ ಬಿ.ವಿ.ವಿ.ಸಂಘದ ಬಸವೇಶ್ವರ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯದ 2025-26 ನೇ ಶೈಕ್ಷಣಿಕ ಸಾಲಿನ ಪಾಲಕರ ಸಭೆ ರವಿವಾರ ನೂತನ ಸಭಾ ಭವನದಲ್ಲಿ ಜರುಗಿ, ಪಾಲಕರ ಕರ್ತವ್ಯಗಳು. ಶಿಕ್ಷಕರ ಸೇವೆ ಮತ್ತು ವಿದ್ಯಾರ್ಥಿಗಳ ಪ್ರಗತಿಯ ಕುರಿತು ಸಮಾಲೋಚನೆ ನಡೆಸಲಾಯಿತು.

ಸಭೆಗೆ ಮುಖ್ಯ ಅತಿಥಿಯಾಗಿದ್ದ ಪ್ರೊ.ಆರ್.ಆರ್.ರಡ್ಡೇರ, ವಿದ್ಯಾರ್ಥಿಗಳ ಪ್ರಗತಿ ಕುರಿತು ಪಾಲಕರು ಹಾಗೂ ಶಿಕ್ಷಕರು ಚರ್ಚಿಸಿ ಅವರ ಕಲಿಕೆ, ಓದಿನ ಬಗ್ಗೆ ಕಾಳಜಿ ವಹಿಸಿದಾಗ ಮಾತ್ರ ಮಕ್ಕಳು ಯಶಸ್ಸನ್ನು ಕಾಣಲು ಸಾಧ್ಯ ಎಂದರು.

ಡಾ.ಎಸ್.ಎಂ.ತಿಪ್ಪಣ್ಣವರ ಮಾತನಾಡಿ, ತಂದೆ ತಾಯಿ ಮಕ್ಕಳ ಪ್ರಗತಿಯ ಬಗ್ಗೆ ಗಮನಹರಿಸಿದಾಗ ಮಾತ್ರ ವಿದ್ಯಾರ್ಥಿ ಶೈಕ್ಷಣಿಕವಾಗಿ ಪ್ರಗತಿಯನ್ನು ಹೊಂದಲು ಸಾಧ್ಯ. ಇಂದು ಹೆಚ್ಚು ಸಮಯ ಮೊಬೈಲ ಬಳಸುವುದರಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸ ಕುಂಠಿತವಾಗಿದೆ. ಮೊಬೈಲಿಗಿಂತ ಅವರ ಆಹಾರ, ಆರೋಗ್ಯವನ್ನು ಗಮನಿಸಿ ಶಿಕ್ಷಕರೊಂದಿಗೆ ಪಾಲಕರು ಕೈ ಜೋಡಿಸಿದಾಗ ಪ್ರಗತಿಯನ್ನು ಕಾಣಬಹುದಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಎನ್.ಹೆಚ್.ಬೇವಿನಹಳ್ಳಿ, ತಂದೆ ತಾಯಿ ಋಣ, ಗುರುವಿನ ಋಣ, ರಾಷ್ಟ್ರದ ಋಣ ಇವುಗಳನ್ನು ಅರಿತು ನಾವು ಬಾಳಬೇಕಾಗಿದೆ. ವಿದ್ಯಾರ್ಥಿಗಳು ಆಡಂಬರದ ಜೀವನದ ಬದಲು ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದರು. ಯು.ಸಿ.ಶೀಲವಂತ, ಶ್ರೀಮತಿ ವಿ.ಎಂ.ನಿಂಬಾಳೆ, ಎ.ಎ.ಬಾಗಲಕೋಟೆ, ಎಸ್.ಎಸ್.ಪಾಟೀಲ, ಜಿ.ಎಚ್.ಜಗಳೂರು, ಡಾ.ಎಸ್.ಎಮ್.ತಿಪ್ಪಣ್ಣವರ, ಡಾ.ಎಂ.ಎಚ್.ಪಾಟೀಲ ಉಪಸ್ಥಿತರಿದ್ದರು. ಪಿ.ಬಿ.ಕಟ್ಟಿಮನಿ ಸ್ವಾಗತಿಸಿದರು. ವಿದ್ಯಾ.ಕೆ.ಹಿರೇಮಠ ನಿರೂಪಿಸಿದರು, ಶ್ವೇತಾ ರೇವಡಕುಂದಿ ವಂದಿಸಿದರು.

# ಸಹಕಾರಿ ಸಂಘಗಳಿಂದ ಬಡವರಿಗೆ ಆರ್ಥಿಕ ಸಹಾಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ,15-ಸಹಕಾರ ಸಂಘಗಳ ಬೆಳವಣಿಗೆಗೆ ಗ್ರಾಹಕರು, ಠೇವಣಿದಾರರ ಸಹಕಾರ ಅಗತ್ಯವಾಗಿದೆ ಎಂದು ನಿವೃತ್ತ ಶಿಕ್ಷಕ ಕೆ.ಪಿ.ಅರಿಷಿನಗೋಡಿ ಹೇಳಿದರು.

ತಾಲೂಕಿನ ಬೆನಕಟ್ಟಿ ಗ್ರಾಮದಲ್ಲಿ ಜರುಗಿದ ಸ್ಥಳೀಯ ವಿಶ್ವಭಾರತಿ ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘದ 15 ನೆಯ ವಾರ್ಷಿಕ ಸರ್ವ ಸಾಧಾರಣ ಸಭೆಯ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ಬಡವರು, ಮಧ್ಯಮ ವರ್ಗದ ಜನರಿಗೆ ಆರ್ಥಿಕ ಸಹಾಯ ಒದಗಿಸುವಲ್ಲಿ ಸಹಕಾರಿ ಸಂಘಗಳು ಮಹತ್ತರ ಪಾತ್ರ ನಿರ್ವಹಿಸುತ್ತವೆ ಎಂದರು.

ಸಂಘದ ವ್ಯವಸ್ಥಾಪಕ ಟಿ.ಎಚ್.ಸನ್ನಪ್ಪನವರ ಸಂಘದ ವಾರ್ಷಿಕ ವರದಿ ಮಂಡಿಸಿ, ಸಂಘ ಕಳೆದ ಮಾರ್ಚ್ ಅಂತ್ಯಕ್ಕೆ 4.86 ಲಕ್ಷ ರೂಪಾಯಿ ಲಾಭ ಗಳಿಸಿದ್ದು, ಗ್ರಾಹಕರಿಗೆ ಪ್ರತಿಶತ 5 ರಷ್ಟು ಲಾಭಾಂಶ ನೀಡಲು ನಿರ್ಧರಿಸಿದೆ ಎಂದು ಹೇಳಿದರು. ಗ್ರಾಹಕರ ಪರವಾಗಿ ಶಿವಾನಂದ ಅಂಗಡಿ ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾ ಅಧ್ಯಕ್ಷ ಗದಿಗೆಪ್ಪ ಅರಕೇರಿ ಮಾತನಾಡಿ, ಪರಸ್ಪರ ಸಹಕಾರದೊಂದಿಗೆ ನಡೆದಾಗ ಮಾತ್ರ ಸಹಕಾರಿ ಕ್ಷೇತ್ರ ಬೆಳೆಯಲು ಸಾಧ್ಯ ಎಂದರು.

ಮಾಲತೇಶ ಅಮಾತೆಪ್ಪನವರ ಸಭೆ ಉದ್ಘಾಟಿಸಿದರು. ಪಿಕೆಪಿಎಸ್ ಅಧ್ಯಕ್ಷ ವೇಮನ ಯಡಹಳ್ಳಿ ಮಾತನಾಡಿದರು. ಹೇಮರಡ್ಡಿ ಮಲ್ಲಮ್ಮ ದೇವಸ್ಥಾನ ಸಮಿತಿ ಅಧ್ಯಕ್ಷ ಪಂಡಿತ ಮಾಚಾ, ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ, ಆರ್.ಟಿ.ಅರಿಷಿನಗೋಡಿ, ನಿರ್ದೇಶಕರಾದ ಹಣಮಂತ ತೆಗ್ಗಿ, ತಿಪ್ಪಣ್ಣ ಗುಳೇದ, ಕೃಷ್ಣಾ ಪಾಟೀಲ, ನಿಂಗಣ್ಣ ಸಣ್ಣಪ್ಪನವರ, ಹಣಮಂತ ವಾಲೀಕಾರ ವೇದಿಕೆಯಲ್ಲಿದ್ದರು.

# ಸ್ವಾಸ್ಥ್ಯ ಸಂಕಲ್ಪ ಕುರಿತ ಉಪನ್ಯಾಸ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.15-ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿ ಪಟ್ಟಣದ ಹುಚ್ಚೇಶ್ವರ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದ ಎನ್ಎಸ್ಎಸ್ ಘಟಕ ಹಾಗೂ ಸಾಂಸ್ಕೃತಿಕ ವಿಭಾಗ ಹಾಗೂ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಹಯೋಗದಲ್ಲಿ ಸ್ವಾಸ್ಥ್ಯ ಸಂಕಲ್ಪ ಉಪನ್ಯಾಸ ಕಾರ್ಯಕ್ರಮ ಜರುಗಿತು.

ಯೋಗಿನಿದೇವಿ ಮಹಿಳಾ ಬಿಎಡ್ ಮಹಾವಿದ್ಯಾಲಯದ ಪ್ರಾಧ್ಯಾಪಕ ಪ್ರೊ. ಅಶೋಕ ಮಲಘಾಣ ಉಪನ್ಯಾಸ ನೀಡಿದರು. ಅಧ್ಯಕ್ಷತೆಯನ್ನು ಹುಚ್ಚೇಶ್ವರ ವಿದ್ಯಾವರ್ಧಕ ಸಂಘದ ಸಹಕಾರ್ಯದರ್ಶಿ ವಿದ್ಯಾಧರ ಮಳ್ಳಿ ವಹಿಸಿದ್ದರು. ಧರ್ಮಸ್ಥಳ ಸಂಸ್ಥೆಯ ಬಾಗಲಕೋಟೆ ಯೋಜನಾಧಿಕಾರಿ ಬಸವರಾಜ ಅಂಗಡಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಕಮತಗಿ ವಲಯ ಮೇಲ್ವಿಚಾರಕ ಕೃಷ್ಣಾನಂದ ಕಲೋತಿ, ಹುಚ್ಚೇಶ್ವರ ವಿದ್ಯಾವರ್ಧಕ ಸಂಘದ ಆಡಳಿತಾಧಿಕಾರಿ ಅನಿಲಕುಮಾರ್ ಕಲ್ಯಾಣಶೆಟ್ಟಿ, ಪ್ರಾಚಾರ್ಯ ಎಸ್.ವಿ.ಬಾಗೇವಾಡಿ, ಉಪನ್ಯಾಸಕ ಎಂ.ಎಸ್.ಶೆಟ್ಟರ, ಎಂ.ಪಿ.ಹುಲಿಮನಿಗೌಡ್ರು, ಬಸವರಾಜ ಅಂಗಡಿ, ಎಸ್.ಕೆ.ಮುತ್ತಲಗೇರಿ ಹಾಗೂ ಬೋಧಕ, ಬೋಧಕೇತರ ಸಿಬ್ಬಂದಿ, ಮಹಾವಿದ್ಯಾಲಯದ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಉಪನ್ಯಾಸಕಿ ಅನುಪಮಾ ಹೆಬ್ಬಳ್ಳಿ ನಿರೂಪಿಸಿದರು.

ಬೀರಕಬ್ಬಿ ವಂದಿಸಿದರು.

# ಬೀಳೂರು ಗುರುಬಸವ ಪತ್ತಿನ ಸಂಘದ ವಾರ್ಷಿಕ ಸಭೆ ಮೆಡಿಕಲ್ ಕಾಲೇಜಿಗೆ 23ಲಕ್ಷ ರೂ. ನೆರವು-ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.15- ಹೆಚ್ಚು ವ್ಯವಹಾರ, ಗ್ರಾಹಕರ ವಿಶ್ವಾಸ, ಪಾರದರ್ಶಕ ಆಡಳಿತದ ಮೂಲಕ ಜಿಲ್ಲೆಯಲ್ಲಿ ಮಾದರಿಯೆನಿಸಿರುವ ನಗರದ ಬೀಳೂರು ಗುರುಬಸವ ಪತ್ತಿನ ಸಹಕಾರಿ ಸಂಘ ಚಿಕ್ಕ ಮಕ್ಕಳ ಚಿಕಿತ್ಸೆಗಾಗಿ ಪ್ರತಿ ವರ್ಷ 23 ಲಕ್ಷ ರೂ.ಗಳ ನೆರವನ್ನು ನಿಜಲಿಂಗಪ್ಪ ಮೆಡಿಕಲ್ ಕಾಲೇಜಿಗೆ ನೀಡುತ್ತಿದೆ.

ಈ ಕುರಿತು ಸಂಘದ ಅಧ್ಯಕ್ಷ ವೀರಣ್ಣ ಚರಂತಿಮಠ, ರವಿವಾರ ಜರುಗಿದ ಸಂಘದ 25 ನೇ ವಾರ್ಷಿಕ ಮಹಾಸಭೆಯಲ್ಲಿ ಮಾಹಿತಿ ಒದಗಿಸಿ, ಚಿಕ್ಕ ಮಕ್ಕಳಲ್ಲಿ ಕಂಡು ಬರುತ್ತಿರುವ ಹಿಮೋಪೋಲಿಯಾ ಮತ್ತು ಥೆಲಿಸೆಮಿಯಾ ಚಿಕಿತ್ಸೆಗಾಗಿ ಪ್ರತಿ ವರ್ಷವೂ ಮೆಡಿಕಲ್ ಕಾಲೇಜಿಗೆ ನೆರವು ನೀಡುತ್ತಿದ್ದು, ಈ ವರ್ಷ ಹೆಚ್ಚಿನ ನೆರವು ಕೇಳಿದ್ದಾರೆ. ಅದನ್ನು ನೀಡಲು ಆಡಳಿತ ಮಂಡಳಿಯಲ್ಲಿ ಒಪ್ಪಿಗೆ ಪಡೆಯಲಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬೆಳಗಾವಿ ವಿಭಾಗದ ಸಹಕಾರಿ ಸಂಘಗಳ ಸಂಯುಕ್ತ ನಿಬಂಧಕ ಕಲ್ಲಪ್ಪ ಓಬಣಗೋಳ ಮಾತನಾಡಿ, ರಾಷ್ಟ್ರೀಕೃತ ಬ್ಯಾಂಕುಗಳಲ್ಲಿರುವ ಎಲ್ಲ ಸೌಲಭ್ಯಗಳನ್ನು ಬೀಳೂರು ಗುರುಬಸವ ಪತ್ತಿನ ಸಂಘ ಹೊಂದಿದ್ದು, ಗಟ್ಟಿಯಾದ ಬುನಾದಿ ಹೊಂದಿದ್ದು ಪಾರದರ್ಶಕತೆ, ಪ್ರಾಮಾಣಿಕತೆಯ ಆಡಳಿತ ಮೂಲಕ ಜಿಲ್ಲೆಯಲ್ಲಿ ಮಾದರಿ ಸಹಕಾರಿ ಸಂಘ ಎನಿಸಿಕೊಂಡಿದೆ ಎಂದು ಹೇಳಿದರು.

ಸಭೆಯಲ್ಲಿ ಉಪಾಧ್ಯಕ್ಷ ಮುರಗೆಪ್ಪ ನಾರಾ, ವ್ಯವಸ್ಥಾಪಕ ಎಮ್.ಎಚ್.ಹಿರೇಮಠ. ನಿರ್ದೇಶಕರಾದ ಗುರುಬಸವ ಸೂಳಿಭಾವಿ, ಈರಣ್ಣ ಅಥಣಿ, ಲಕ್ಷ್ಮೀನಾರಾಯಣ ಕಾಸಟ್, ವಿಜಯಕುಮಾರ ಅಂಗಡಿ, ವೀರಣ್ಣ ಹಲಕುರ್ಕಿ, ಶ್ರೀಶೈಲ ಅಂಗಡಿ, ಕುಮಾರ ಯಳ್ಳಿಗುತ್ತಿ, ಅಶೋಕ ಸಜ್ಜನ ಬೇವೂರ, ಮಲ್ಲಿಕಾರ್ಜುನ ಸಾಸನೂರ, ಪ್ರಕಾಶ ರೇವಡಿಗಾರ, ಪ್ರಭುಸ್ವಾಮಿ ಸರಗಣಾಚಾರಿ, ರುದ್ರು ಅಕ್ಕಿಮರಡಿ, ಜಯಪ್ರಕಾಶ ಬೆಂಡಿಗೇರಿ, ರಾಜು ನಾಯ್ಕರ, ಭಾಗ್ಯಶ್ರೀ ಹಂಡಿ, ರೇಖಾ ಮೊರಬದ ಸೇರಿದಂತೆ ಅನೇಕರು ಇದ್ದರು.

# ದೇವರುಗಳಿಗೆ ನೀರೆರೆದು ಜಾತ್ರೆಗೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.15-ಜಿಲ್ಲೆಯ ಹುನಗುಂದ ತಾಲೂಕಿನ ತಿಮ್ಮಾಪೂರ ಗ್ರಾಮದಲ್ಲಿ ಶನಿವಾರ ದೇವರುಗಳಿಗೆ ನೀರೆರೆಯುವ ಕಾರ್ಯಕ್ರಮದೊಂದಿಗೆ ಊರಿನ ಜಾತ್ರೆಗೆ ಚಾಲನೆ ನೀಡಲಾಯಿತು.

ಗ್ರಾಮದ ಮಾರುತೇಶ್ವರ, ಬಸವೇಶ್ವರ ಹಾಗೂ ಗ್ರಾಮ ದೇವತೆಗಳಿಗೆ ಯುವಕರು ನೀರು ಎರೆದು ಜಾತ್ರಾ ಮಹೋತ್ಸವಕ್ಕೆ ಮುನ್ನುಡಿ ಬರೆದರು.

ಮಾರುತೇಶ್ವರ ದೇವರ ಅರ್ಚಕರಾದ ಕನಕಪ್ಪ ಪೂಜಾರಿ ಮತ್ತು ಸಂಜೀವಪ್ಪ ಪೂಜಾರಿ, ಬಸವಣ್ಣದೇವರ ಅರ್ಚಕ ಪುಟ್ಟರಾಜ ಶರಣಯ್ಯ ಹಿರೇಮಠ, ಗ್ರಾಮದ ಯುವಕರಾದ ಸಂಕೇತ ಹೆರಕಲ್ಲ, ರವಿ ಬೇರಗಿ, ಸಂತೋಷ ಹಳ್ಳೂರ, ಮಹಾಂತೇಶ ಕೆಂಚನಗೌಡರ, ಬಸವರಾಜ ಮೂಲಿಮನಿ, ಬಸವರಾಜ ಹಳ್ಳೂರ, ಸಂಗಣ್ಣ ಹೊರಗೋದಿನಿ, ಪ್ರೀತಮ್, ದಾದ್ಮಿ, ಸಿಕ್ರೇಶಗೌಡ, ಹನುಮಗೌಡ, ಅಶೋಕ ಮಡಿವಾಳರ, ವಿಜಯಕುಮಾರ ಹುನೂರ, ಪ್ರಸನ್ನ ಹೆರಕಲ್ಲ, ಸಂದೀಪ ವಾಲಿಕಾರ, ತರುಣ ಸುನಗದ, ಸಾಗರ್ ಬಡಿಗೇರ, ಹಡಗಲಿಯ ಶ್ರವಣ ನೇಗಲಿ, ಬಸವರಾಜ ಕೋಣೆ, ಅಶೋಕ ಮಣಿನಾಗರ, ಶ್ರೀಶೈಲ್ ಮಡಿವಾಳರ, ಗೌತಮ್ ಹೆರಕಲ್, ಹರೀಶ್ ಹಾದಿಮನಿ ಇತರರು ದೇವರಿಗೆ ನೀರೆರುವ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಪತ್ರಕರ್ತ ದಿ.ಪ್ರಕಾಶ ಗುಳೇದಗುಡ್ಡಗೆ ನುಡಿನಮನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.15-ಇತ್ತೀಚೆಗೆ ನಿಧನ ಹೊಂದಿದ ಹುನಗುಂದ ತಾಲೂಕಿನ ಕಮತಗಿಯ ಪತ್ರಕರ್ತ ಪ್ರಕಾಶ ಗುಳೇದಗುಡ್ಡ ಅವರಿಗೆ ಮೇಘಮೈತ್ರಿ ಕನ್ನಡ ಸಾಹಿತ್ಯ ಸಂಸ್ಥೆ ಗೀತಗಾಯನದ ಮೂಲಕ ನುಡಿ ನಮನ ಸಲ್ಲಿಸಿತು.

ದಿವಂಗತರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ನಮನ ಸಲ್ಲಿಸಿದ ಪಟ್ಟಣ ಪಂಚಾಯತಿ ಅಧ್ಯಕ್ಷ ಬಸವರಾಜ ಕುಂಬಳಾವತಿ, ಪ್ರಕಾಶ ಅವರು ಸ್ನೇಹಜೀವಿಯಾಗಿದ್ದು, ಒಳ್ಳೆಯ ಗುಣದವರು ಹಾಗೂ ಮೃದು ಸ್ವಭಾವದವರಾಗಿದ್ದರು. ಎಲ್ಲರ ಜೊತೆ ಆತ್ಮೀಯರಾಗಿ ಬೆಳೆದಿದ್ದ ಪ್ರಕಾಶ ಅವರ ಸಾವು ನಿಜಕ್ಕೂ ಆಘಾತದ ಸಂಗತಿ. ಕಮತಗಿ ಪಟ್ಟಣ ಒಬ್ಬ ಸರಳ, ಸಜ್ಜನಿಕೆಯ ವ್ಯಕ್ತಿಯನ್ನು ಕಳೆದುಕೊಂಡು ದು:ಖದಲ್ಲಿದೆ. ಅವರ ಆತ್ಮಕ್ಕೆ ದೇವರು ಚಿರಶಾಂತಿ ನೀಡಲಿ, ಅವರ ಕುಟುಂಬಕ್ಕೆ ದು:ಖ ಸಹಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸಿದರು. ಮೇಘಮೈತ್ರಿ ಕನ್ನಡ ಸಾಹಿತ್ಯ ಸಂಘದ ಅಧ್ಯಕ್ಷ ರಮೇಶ ಕಮತಗಿ ಮಾತನಾಡಿ, ಆತ್ಮೀಯ ಸ್ನೇಹಿತರಾಗಿದ್ದ ಪ್ರಕಾಶ ನಮಗೆಲ್ಲ ಮಾರ್ಗದರ್ಶಕರಾಗಿದ್ದರು. ಮಾಧ್ಯಮ ಕ್ಷೇತ್ರದಲ್ಲಿ ಅಪಾರ ಸೇವೆ ಸಲ್ಲಿಸಿ ಜನರ ಹೃದಯ ಗೆದ್ದಿದ್ದ ಅವರ ಅಗಲುವಿಕೆಯಿಂದ ಕಮತಗಿಗೆ ತುಂಬಲಾರದ ನಷ್ಟವಾಗಿದೆ ಎಂದು ಹೇಳಿ, ಪ್ರಕಾಶರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಎಂದರು.

ಮಲ್ಲೇಶ ಬಿಜಾಪುರ, ಕಲ್ಮೇಶ ಧಾರವಾಡ, ಡಾ.ಎನ್.ಆರ್.ದಿಡ್ಡಿಮಣಿ, ಮುತ್ತುಬಳ್ಳಾ, ಬಸವರಾಜ ಹುಲ್ಲೂರ ನುಡಿ ನಮನ ಸಲ್ಲಿಸಿದರು.

ಸ್ಥಳೀಯ ಮಠದ ಪೂಜ್ಯ ಶಿವಕುಮಾರ ಸ್ವಾಮೀಜಿ ಮಾತನಾಡಿ, ಪ್ರಕಾಶ ಗುಳೇದಗುಡ್ಡ ಮಠದ ಪರಮಭಕ್ತ. ಸ್ನೇಹಜೀವಿಯಾಗಿದ್ದ ಪ್ರಕಾಶ್ ಅಗಲಿಕೆ ಬಹಳ ಬೇಸರವನ್ನುಂಟು ಮಾಡಿದೆ. ಅವರ ಒಳ್ಳೆಯ ಕೆಲಸಗಳನ್ನು ನೆನೆಯೋಣ. ಯುವಕರಿಗೆ ಮಾದರಿಯಾಗಿದ್ದ ಅವರ ಆತ್ಮಕ್ಕೆ ಶಾಂತಿ ಕೋರೋಣ ಎಂದರು.

ನಂತರ ಜ್ಞಾನಸಿಂಧು ಕಲಾ ತಂಡ ಗುಳೇದಗುಡ್ಡದ ಶಂಕರ ಮುಂದಿನಮನಿ ಹಾಗೂ ಚಿದಾನಂದ ಕಾಟವಾ ಮತ್ತು ಉಮಾ ಕನಕೇರಿ ಅವರ ಪಂಡಿತ ಪುಟ್ಟರಾಜ ಗವಾಯಿಗಳ ಪಾಠಶಾಲೆ ಕಮತಗಿ ತಂಡದವರಿಂದ ಗೀತ ನಮನ ಕಾರ್ಯಕ್ರಮ ಜರುಗಿತು.

# ಲೋಕ ಅದಾಲತ್-ಒಂದೇ ದಿನದಲ್ಲಿ 32570 ಪ್ರಕರಣ ಇತ್ಯರ್ಥ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.15-ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಬಾಗಲಕೋಟೆ ಜಿಲ್ಲಾ ನ್ಯಾಯಾಲಯದಲ್ಲಿ ನಗರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎನ್.ವಿ.ವಿಜಯ್ ನೇತೃತ್ವದಲ್ಲಿ ಶನಿವಾರ ನಡೆದ ಲೋಕ ಅದಾಲತನಲ್ಲಿ 32570 ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥ ಪಡಿಸಲಾಯಿತು. 2017 ರಿಂದ ಕುಟುಂಬದ ಮಧ್ಯೆ ನಡೆದಿದ್ದ ಆಸ್ತಿವಿವಾದಕ್ಕೆ ಸಂಬಂಧಿಸಿದ ಪ್ರಕರಣ ಜಿಲ್ಲೆಯ ಕೆಳಹಂತದ ನ್ಯಾಯಾಲಯದಿಂದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಕ್ಕೆ ಬಂದಿತ್ತು. ಅದನ್ನು ಶನಿವಾರ ರಾಜೀ ಸಂಧಾನದ ಮೂಲಕ ಇತ್ಯರ್ಥ ಪಡಿಸಲಾಯಿತು. ಲೋಕ ಅದಾಲತ್‌ನಲ್ಲಿ ಬಾಕಿ ಇರುವ 8533 ಪೈಕಿ 5085 ಹಾಗೂ ವ್ಯಾಜ್ಯಪೂರ್ವ ಪ್ರಕರಣಗಳ 29014 ಪ್ರಕರಣಗಳ ಪೈಕಿ 27485 ಪ್ರಕರಣ ಸೇರಿ ಒಟ್ಟು 32570 ಪ್ರಕರಣಗಳನ್ನು ರಾಜಿ ಸಂಧಾನ ಮೂಲಕ ಇತ್ಯರ್ಥ ಪಡಿಸಲಾಯಿತು. ಅದಾಲತ್‌ನಲ್ಲಿ ಒಟ್ಟು 137.93 ಕೋಟಿ ರೂ.ಗಳ ಪ್ರಕರಣದ ಮೊತ್ತವಾಗಿತ್ತು. ಜಿಲ್ಲಾ ನ್ಯಾಯಾಲಯದಲ್ಲಿ ಬಾಕಿ ಇರುವ 2551 ಪ್ರಕರಣಗಳ ಪೈಕಿ 1490, ಬೀಳಗಿ ನ್ಯಾಯಾಲಯದಲ್ಲಿ 190 ಪೈಕಿ 112, ಮುಧೋಳ ನ್ಯಾಯಾಲಯದಲ್ಲಿ 465 ಪೈಕಿ 450, ಬನಹಟ್ಟಿ ನ್ಯಾಯಾಲಯದಲ್ಲಿ 1648 ಪೈಕಿ 532, ಹುನಗುಂದ ನ್ಯಾಯಾಲಯದಲ್ಲಿ 1301 ಪೈಕಿ 1037, ಇಲಕಲ್ಲ ನ್ಯಾಯಾಲಯದಲ್ಲಿ 438 ಪೈಕಿ 355, ಬಾದಾಮಿ ನ್ಯಾಯಾಲಯದಲ್ಲಿ 662 ಪೈಕಿ 564, ಜಮಖಂಡಿ ನ್ಯಾಯಾಲಯದಲ್ಲಿ 1248 ಪೈಕಿ 534 ಹಾಗೂ ಎಫ್.ಟಿ.ಎಸ್.ಸಿ ಕೋರ್ಟನಲ್ಲಿ 30 ಪೈಕಿ 1 ಪ್ರಕರಣಗಳನ್ನು ಇತ್ಯರ್ಥಪಡಿಸಲಾಯಿತು. ವ್ಯಾಜ್ಯಪೂರ್ವ ಪ್ರಕರಣಗಳಲ್ಲಿ ಬ್ಯಾಂಕಿಗೆ ಸಂಬಂಧಿಸಿದ 1591 ಪೈಕಿ 62 ಪ್ರಕರಣಗಳು ಒಟ್ಟು 1.03 ಕೋಟಿ ರೂ.ಗಳಿಗೆ ಇತ್ಯರ್ಥಗೊಂಡರೆ, ವಿದ್ಯುತ ಬಿಲ್‌ಗೆ ಸಂಬಂಧಿಸಿದ 165 ಪೈಕಿ 165 ಇತ್ಯರ್ಥಗೊಂಡು 3.23 ಲಕ್ಷ ರೂ, ನೀರಿನ ಕರಕ್ಕೆ ಸಂಬಂಧಿಸಿದ 2418 ಪೈಕಿ 2418ಕ್ಕೆ 1 ಕೋಟಿ ರೂ, ಸಂಚಾರಿ ಉಲ್ಲಂಘನೆಗೆ ಸಂಬಂಧಿಸಿದ 9250 ಪೈಕಿ 9250ಕ್ಕೆ 30.94 ಲಕ್ಷ ರೂ, ಆಸ್ತಿ ತೆರಿಗೆಗೆ ಸಂಬಂಧಿಸಿದಂತೆ 15519 ಪೈಕಿ 15519 ಪ್ರಕರಣಗಳನ್ನು 7.99 ಕೋಟಿ ರೂ.ಗಳಿಗೆ ಇತ್ಯರ್ಥಪಡಿಸಲಾಯಿತು. ಲೋಕ ಅದಾಲತ್ ಶಿಬಿರದಲ್ಲಿ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ಹಾಗೂ ಎಫ್‌ಟಿಎಸ್‌ಸಿ-1 ನ್ಯಾಯಾಧೀಶ ಪಿ.ಎಸ್.ಸದರ ಜೋಶಿ, 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧಿಶ ಜಿ.ಎ.ಮೂಲಿಮನಿ, 4ನೇ ಹೆಚ್ಚುವರಿ ಜಿಲ್ಲಾ ಸತ್ರ ನ್ಯಾಯಾಧೀಶ ಜೇಶಕರಣಮ್ ಕೆ, 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರಮೇಶ ಎಕಬೋಟೆ, ಜಿಲ್ಲಾ ನ್ಯಾಯಾಧೀಶರು ಮತ್ತು ಕುಟುಂಬ ನ್ಯಾಯಾಧೀಶ ಕೃಷ್ಣಮೂರ್ತಿ ಪಡಸಲಗಿ, ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶ ಮಹೇಶ ಪಾಟೀಲ, 1ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧಿಶ ಸುದೀಪ ನಾಯಕ, 2ನೇ ಹೆಚ್ಚುವರು ಹಿರಿಯ ದಿವಾಣಿ ನ್ಯಾಯಾಧೀಶ ರಾಜಶೇಖರ ತಿಳಗಂಜಿ, ಪ್ರಧಾನ ದಿವಾಣಿ ನ್ಯಾಯಾಧೀಶ ಮುರಗೇಂದ್ರ ತುಬಾಕೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಇದ್ದರು.

# ಸೆ.17ಕ್ಕೆ ಮುಖ್ಯಮಂತ್ರಿಗಳಿಂದ ಕೆ.ಕೆ.ಆರ್.ಡಿ.ಬಿ. ಹಾರ್ಟ್ ಲೈನ್ ಯೋಜನೆಗೆ ಚಾಲನೆ:ಡಾ.ಅಜಯ್ ಸಿಂಗ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.15: ಪ್ರದೇಶದ ಹೃದ್ರೋಗಿಗಳಿಗೆ ಗೋಲ್ಡನ್ ಹವರ್‌ನಲ್ಲಿ ಚಿಕಿತ್ಸೆ ಒದಗಿಸುವ ನಿಟ್ಟಿನಲ್ಲಿಕೆ.ಕೆ.ಆರ್.ಡಿ.ಬಿ.ಮಂಡಳಿಯ ಆರ್ಥಿಕ ನೆರವಿನ "ಕೆ.ಕೆ.ಅರ್.ಡಿ.ಬಿ ಹಾರ್ಟ್‌ಲೈನ್" ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೆ.17 ರಂದು ಕಲ್ಯಾಣ ಕರ್ನಾಟಕಉತ್ಸವಕಾರ್ಯಕ್ರಮದಲ್ಲಿ ಚಾಲನೆ ನೀಡಲಿದ್ದಾರೆ ಎಂದು ಕೆ.ಕೆ. ಆರ್.ಡಿ.ಬಿ ಅಧ್ಯಕ್ಷ ಡಾ.ಅಜಯ್ ಸಿಂಗ್ ಹೇಳಿದರು.

ಸೋಮವಾರ ಕಲಬುರಗಿ ನಗರದಲ್ಲಿರುವ ಮಂಡಳಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಇತ್ತೀಚಿನ ಜೀವನಶೈಲಿ ಕಾರಣ ಹದಿಹರೆಯದ ಯುವಕರು,40ಕ್ಕಿಂತ ಕಡಿಮೆ ವಯಸ್ಸಿನವರಲ್ಲಿಯೂ ಹಾರ್ಟ್ ಅಟ್ಯಾಕ್ ಕಾಣುತ್ತಿದ್ದೇವೆ. ಕಳೆದ 3 ವರ್ಷದಲ್ಲಿ ಜಯದೇವ ಆಸ್ಪತ್ರೆಯ ಅಂಕಿ ಸಂಖ್ಯೆ ನೋಡಿದಾಗ ಹೃದಯಾಘಾತದಿಂದ ನಿಧನ ಹೊಂದಿದ 1,004 ರಲ್ಲಿ 45 ವಯಸ್ಸಿಗ್ಗಿಂತ ಕಡಿಮೆ ಇರುವ 477 ಜನ ಸಾವನಪ್ಪಿದ್ದಾರೆ. ಹೀಗಾಗಿ ಹೃದಯಾಘಾತದಿಂದ ಸಾವು ತಪ್ಪಿಸುವ ನಿಟ್ಟಿನಲ್ಲಿ ಈ ಹಾರ್ಟ್‌ಲೈನ್ ಯೋಜನೆ ಆರಂಭಿಸಲಾಗುತ್ತಿದೆ ಎಂದರು.

ಈ ಯೋಜನೆಯಡಿ ಕಲಬುರಗಿ ಜಿಲ್ಲೆಗೆ 9,ಬೀದರ–4,ಯಾದಗಿರಿ–2, ರಾಯಚೂರು–5, ಬಳ್ಳಾರಿ–4, ಕೊಪ್ಪಳ–5, ವಿಜಯನಗರ–3 ಸೇರಿದಂತೆ ಒಟ್ಟು ಅತ್ಯಾಧುನಿಕ 32 ಅಂಬುಲೆನ್ಸ್ ವಾಹನಗಳನ್ನು ಒದಗಿಸಲಾಗಿದೆ. ಕಾರ್ಡಿಯಕ್ ಮಾನಿಟರ್, ಡೆಫಿಬ್ರಿಲೇಟರ್, ಪೋರ್ಟೇಬಲ್ ವೆಂಟಿಲೇಟರ್, ಅಂಬು ಬ್ಯಾಗ್, ಎಮರ್ಜೆನ್ಸಿ ಡ್ರಗ್ಸ್ ಸೇವೆಗಳನ್ನು ಈ ಅಂಬುಲೆನ್ಸ್ ಹೊಂದಿವೆ ಎಂದರು.

32 ಅಂಬುಲೆನ್ಸ್ ವಾಹನಗಳು ಪ್ರದೇಶದ ತಾಲೂಕಾ, ಸಮುದಾಯ ಆರೋಗ್ಯ ಆಸ್ಪತ್ರೆಗಳಿಗೆ ಹಂಚಿಕೆ ಮಾಡಿದ್ದು, ಒಟ್ಟು 9.64 ಕೋಟಿ ರೂ. ವೆಚ್ಚದಲ್ಲಿ ಖರೀದಿಸಿದ ಅಂಬುಲೆನ್ಸ್ (ಬಿ.ಎಲ್.ಎಸ್) ಅರೋಗ್ಯ ಇಲಾಖೆಗೆ ಹಸ್ತಾಂತರಿಸಿದೆ. ಪ್ರಸ್ತುತ ಇರುವ 49 ಅಂಬುಲೆನ್ಸ್ ಸೇರಿದಂತೆ ಒಟ್ಟಾರೆ



81 ಅಂಬುಲೆನ್ಸ್ ವಾಹನಗಳು ಪ್ರದೇಶದ ಆರೋಗ್ಯ ಸೇವೆಗಳಿಗೆ ಲಭ್ಯವಾಗಲಿವೆ ಎಂದರು.

ಮಂಡಳಿಯಿಂದ ಕಳೆದ 2 ವರ್ಷಗಳಲ್ಲಿ "ಆರೋಗ್ಯ ಆವಿಷ್ಕಾರ" ಯೋಜನೆಯಡಿ ಸುಮಾರು 2,000 ಕೋಟಿ ರೂ. ಒದಗಿಸಿದ್ದೇವೆ. ಪ್ರಸಕ್ತ ವರ್ಷ ಸಹ ಕಲಬುರಗಿಯಲ್ಲಿ ಇಂದಿರಾ ಗಾಂಧಿ ಮಕ್ಕಳ ಆಸ್ಪತ್ರೆ ನಿರ್ಮಾಣಕ್ಕೆ 40 ಕೋಟಿ ರೂ., ಬೀದರ ವೈದ್ಯಕೀಯ ಸಂಸ್ಥೆಯ ಆಸ್ಪತ್ರೆಯಲ್ಲಿ ಕ್ಯಾನ್ಸರ್ ವಿಭಾಗ ಅರಂಭಿಸಲು 18 ಕೋಟಿ ರೂ., ಕಲಬುರಗಿಯ ಜಿಮ್ಸ್ ಅಧೀನದಲ್ಲಿ ಎಂಡೋಕ್ರೋನೊಲೋಜಿ ಘಟಕ ಸ್ಥಾಪನೆಗೆ 18 ಕೋಟಿ ರೂ., ಕಲಬುರಗಿಯಲ್ಲಿ ನಿಮ್ಹಾನ್ಸ್ ಶಾಖೆ ಸ್ಥಾಪನೆಗೆ 34 ಕೋಟಿ ರೂ., ಕೊಪ್ಪಳ ವೈದ್ಯಕೀಯ ವಿಜ್ಞಾನ ಸಂಸ್ಥೆ ಸ್ಥಾಪನೆಗೆ 34 ಕೋಟಿ ರೂ., ರಾಯಚೂರಿನ ರಾಜೀವ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ 17 ಕೋಟಿ ರೂ. ಹಾಗೂ ಯಲಬುರ್ಗಾ, ಜೇವರ್ಗಿ ಹಾಗೂ ಕೊಪ್ಪಳನಲ್ಲಿ ತಲಾ 6 ಕೋಟಿ ರೂ. ವೆಚ್ಚದಲ್ಲಿ ನರ್ಸಿಂಗ್ ಕಾಲೇಜು ಸ್ಥಾಪನೆ ಮತ್ತು ಕಲಬುರಗಿಯಲ್ಲಿ ಆರೋಗ್ಯ ಭವನ ನಿರ್ಮಾಣಕ್ಕೆ ಮಂಡಳಿ ಅನುದಾನ ನೀಡುತ್ತಿದೆ ಎಂದರು.

ಹಬ್ & ಸ್ಪೋಕ್ ಮಾದರಿಯಲ್ಲಿ ಚಿಕಿತ್ಸೆ: ಕೆ.ಕೆ.ಆರ್.ಡಿ.ಬಿ ಹಾರ್ಟ್ ಲೈನ್ ಯೋಜನೆ ಹಬ್ & ಸ್ಪೋಕ್ ಮಾದರಿಯಲ್ಲಿ ಚಿಕಿತ್ಸೆ ನೀಡುವ ಯೋಜನೆಯಾಗಿದೆ. ಗ್ರಾಮೀಣ ಭಾಗದಲ್ಲಿ ಯಾವುದೇ ವ್ಯಕ್ತಿ ಹೃದಯಾಘಾತಕ್ಕೆ ಒಳಗಾದಲ್ಲಿ ಅಂಬುಲೆನ್ಸ್ ಗೆ ಕರೆ ಮಾಡಿದಾಗ ಅಂಬುಲೆನ್ಸ್ ರೋಗಿಯನ್ನು ಹತ್ತಿರದ ತಾಲೂಕಾ ಆಸ್ಪತ್ರೆಗಳಿಗೆ ಕರೆದು–ಕೊಂಡು ಹೋಗಲಾಗುತ್ತದೆ. ಅಲ್ಲಿ ಸೂಕ್ತ ತರಬೇತಿ ಪಡೆದ ಹಬ್ & ಸ್ಪೋಕ್ ಸೆಂಟರ್ ವೈದ್ಯರು ಜಯದೇವ ಆಸ್ಪತ್ರೆಯ ತಜ್ಞ ವೈದ್ಯರ ಸಲಹೆ ಪಡೆದು ಪ್ರಾಥಮಿಕ ಚಿಕಿತ್ಸೆ ನೀಡುತ್ತಾರೆ. ಹೆಚ್ಚಿನ ಚಿಕಿತ್ಸೆ ಬೇಕಾದಲ್ಲಿ ಜಯದೇವ ಆಸ್ಪತ್ರೆಗೆ ರೋಗಿಯನ್ನು ಕಳುಹಿಸುವ ವ್ಯವಸ್ಥೆ ಇಲ್ಲಿ ಮಾಡಲಾಗುತ್ತದೆ. ಇದಕ್ಕಾಗಿ ಪ್ರತಿ ತಾಲೂಕಾ ಆಸ್ಪತ್ರೆಯಲ್ಲಿ 12 ಚಾನೆಲ್ ಇ.ಸಿ.ಜಿ, ಎನ್.ಐ.ಬಿ.ಪಿ., ಎಸ್.ಪಿ.ಓ–2, ಮೊಬೈಲ್ ಫೋನ್, ಲ್ಯಾಪಟಾಪ, ಪ್ರಿಂಟರ್ ಸೌಲಭ್ಯ ಒದಗಿಸಲಾಗಿದೆ ಎಂದರು.

ಕಲಬುರಗಿ, ಬೀದರ, ಯಾದಗಿರಿ, ರಾಯಚೂರು ಜಿಲ್ಲೆಯ ಕೆಲವು ಆಸ್ಪತ್ರೆಗಳು ಕಲಬುರಗಿಯ ಜಯದೇವ ಆಸ್ಪತ್ರೆ ಹಬ್ ಗೆ, ಕೊಪ್ಪಳ ಜಿಲ್ಲೆಯ ಅಸ್ಪತ್ರೆಗಳು ಬಾಗಲಕೋಟೆಯ ಹಬ್‌ಗೆ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಅಸ್ಪತ್ರೆಗಳು ಬಳ್ಳಾರಿ ಹಬ್ ಗೆ ಒಳಪಡಲಿವೆ. ಮುಂದಿನ ದಿನದಲ್ಲಿ ಸಮುದಾಯ ಅರೋಗ್ಯ ಕೇಂದ್ರದ ವರೆಗೂ ಈ ಸೇವೆ ವಿಸ್ತರಣೆ ಮಾಡುವ ಚಿಂತನೆ ಇದೆ ಎಂದು ಡಾ.ಅಜಯ್ ಸಿಂಗ್ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಂಡಳಿ ಕಾರ್ಯದರ್ಶಿ ನಲಿನ್ ಅತುಲ್, ಉಪ ಕಾರ್ಯದರ್ಶಿ ಮಂಜುನಾಥ ಸ್ವಾಮಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿಭಾಗೀಯ ನಿರ್ದೇಶಕ ಡಾ.ಶಂಕ್ರಪ್ಪ ಮೈಲಾರಿ, ಉಪನಿರ್ದೇಶಕ ಡಾ.ಅಂಬರಾಯ ರುದ್ರವಾಡಿ,ಡಿ.ಎಚ್.ಓ ಡಾ.ಶರಣಬಸಪ್ಪ ಕ್ಯಾತನಾಳ ಇದ್ದರು.

# ಜಿಲ್ಲಾ ಉಸ್ತುವಾರಿ ಸಚಿವರಿಂದ ಬೆಳೆ ಹಾನಿ ಪರಿಶೀಲನೆ:
## 45ರಷ್ಟು ರೈತರು ಪರಿಹಾರಕ್ಕೆ ದೂರು ಕೊಟ್ಟಿದ್ದಾರೆ:ಪ್ರಿಯಾಂಕ್ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,.ಸೆ.15: ಕಳೆದ ಆಗಸ್ಟ್ ಮತ್ತು ಇತ್ತೀಚೆಗೆ ಕಲಬುರಗಿ ಜಿಲ್ಲೆಯಾದ್ಯಂತ ಸುರಿದ ಮಳೆಗೆ ಜಿಲ್ಲೆಯಲ್ಲಿ ಪ್ರಾಥಮಿಕ ವರದಿ ಪ್ರಕಾರ 1.05 ಲಕ್ಷ ಹೆಕ್ಟೇರ್ ಪ್ರಮಾಣದ ಬೆಳೆ ಹಾನಿಯಾಗಿದ್ದು, ಇದರಲ್ಲಿ ಬೆಳೆ ವಿಮೆಯಡಿ ನೊಂದಾಯಿತರಪೈಕಿ ಶೇ.45ರಷ್ಟು ರೈತರು ಪರಿಹಾರಕ್ಕೆ ದೂರು ಸಲ್ಲಿಸಿದ್ದಾರೆ ಎಂದು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. ಸೋಮವಾರ ಕಲಬುರಗಿ ತಾಲೂಕಿನ ಕೆರೆಭೋಸಗಾ ಗ್ರಾಮದಲ್ಲಿ ಸರ್ವೆ ನಂಬರ್ 87/2



ರಲ್ಲಿನ ಪಾರ್ವತಿಬಾಯಿ ಶ್ರೀಮಂತರಾವ ಅವರ ಹೊಲಕ್ಕೆ ಭೇಟಿ ನೀಡಿದ ಸಚಿವರು, ಸುಮಾರು 4 ಎಕರೆಯಲ್ಲಿ ಬೆಳೆದ ತೊಗರಿ ಇತ್ತೀಚಿನ ಮಳೆಗೆ ಹಾನಿಯಾಗಿರುವುದನ್ನು ಪರಿಶೀಲಿಸಿದಲ್ಲದೆ ರೈತರಿಂದ ಮಾಹಿತಿ ಪಡೆದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಜಿಲ್ಲೆಯಲ್ಲಿನ ಬೆಳೆ ಹಾನಿ ನಿಖರ ತನಿಖೆಗೆ ಕೃಷಿ, ಕಂದಾಯ, ತೆ–ೋಟಗಾರಿಕೆ ಅಧಿಕಾರಿಗಳು ಒಳಗೊಂಡ ತಂಡ ರಚಿಸಿ ಜಂಟಿ ಸಮೀಕ್ಷೆಗೆ ಆದೇಶಿಸಲಾಗಿದೆ. ಬೆಳೆ ಹಾನಿ ಇನ್ನು ಹೆಚ್ಚಾಗಿರುವ ಸಾಧ್ಯತೆ ಇದೆ ಎಂದರು. ತೋಟಗಾರಿಕೆ ಬೆಳೆಗಾರರಿಗೆ ಪರಿಹಾರ ಹಣ ತುಂಬಾ ಕಡಿಮೆ ಸಿಗುತ್ತಿದೆ ಎಂದು ಸುದ್ದಿಗಾರರ ಪ್ರಶ್ನೆಗೆ ಕೇಂದ್ರದ ಎನ್.ಡಿ.ಆರ್.ಎಫ್ ನಿಯಮಾವಳಿ ಪ್ರಕಾರವೇ ಪರಿಹಾರ ನೀಡಬೇಕಾಗುತ್ತದೆ ಎಂದು ಸಚಿವರು ಉತ್ತರಿಸಿದರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜರ್ ಆಲಂ ಖಾನ್, ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್, ಉಪನಿರ್ದೇಶಕ ಸೋಮಶೇಖರ ಬಿರಾದಾರ, ಕಲಬುರಗಿ ತಹಶೀಲ್ದಾರ ಕೆ. ಆನಂದಶೀಲ ಮೊದಲಾದವರು ಇದ್ದರು.

# ಇಂದು ಭಾರತ-ಅಮೆರಿಕ ವ್ಯಾಪಾರ ಮಾತುಕತೆ

ಮುಂಬೈ:ಸೆ.15: ಸುಂಕದ ವಿವಾದ,ರಷ್ಯಾದತೈಲಖರೀದಿಯಮೇಲಿನ ಒತ್ತಡದನಡುವೆಮಂಗಳವಾರ ಭಾರತಮತ್ತುಅಮೆರಿಕನವದೆಹಲಿಯಲ್ಲಿ ವ್ಯಾಪಾರಮಾತುಕತೆಗಳನ್ನುನಡೆಸಲಿವೆ ಎಂದು ಅಧಿಕಾರಿಗಳು ತಿಳಿಸಿದ್ದು ಉಭಯದೇಶಗಳು ಸುಂಕದವಿವಾದವನ್ನುಪರಿಹರಿಸಲುಪ್ರಯತ್ನಿಸುತ್ತಿವೆ ಎಂದು ಹೇಳಿದ್ದಾರೆ.ವಿಶ್ವದ ಅತ್ಯಂತ ಜನಸಂಖ್ಯೆಹೊಂದಿರುವದೇಶವುಪ್ರಸ್ತುತ ತನ್ನಹೆಚ್ಚಿನರಫ್ತುಗಳಮೇಲೆಅಮೆರಿಕದತೀವ್ರ ಸುಂಕಗಳನ್ನುಎದುರಿಸುತ್ತಿದೆ.ಈಹೊರೆಯನ್ನು ಕಡಿಮೆ ಮಾಡುವ ವ್ಯಾಪಾರ ಒಪ್ಪಂದಕ್ಕೆ ಬರಲು ಇದುವರೆಗೆ ವಿಫಲವಾಗಿದೆ. ಉಕ್ರೇನ್ ಹಾಗೂ ರಷ್ಯಾ ನಡುವಿನ ಯುದ್ಧವನ್ನು ನಿಲ್ಲಿಸುವ ಸಲುವಾಗಿ ರಷ್ಯಾ ಮೇಲೆ ಒತ್ತಡ ಹೇರಲು ಪ್ರಯತ್ನಿಸುತ್ತಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಭಾರತದ ಮೇಲೆ ಸುಂಕ ಸಮರ ನಡೆಸಿದ್ದಾರೆ.

# ಲೋಕ ಜನಶಕ್ತಿ ಪಕ್ಷದ ಪದಾಧಿಕಾರಿಗಳ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಸೆ.15:ಗಾಂಧಿನಗರದಲ್ಲಿರುವ ಕನಿಷ್ಕ ಹೋಟೆಲ್ ಲೋಕಜನಶಕ್ತಿ ಪಕ್ಷದ ರಾಜ್ಯ ಘಟಕದ ಮತ್ತು ಜಿಲ್ಲಾ ಘಟಕದ ಪದಾಧಿಕಾರಿಗಳ ಸಭೆ ನಡೆಸಲಾಯಿತು. ಈ ಸಭೆಯು ಲೋಕಜನಶಕ್ತಿ ಪಕ್ಷ (ರಾಮವಿಲಾಸ) ಕರ್ನಾಟಕ ರಾಜ್ಯದ ರಾಜ್ಯಾಧ್ಯಕ್ಷರಾದ ಸನ್ಮಾನ್ಯ ಶ್ರೀ ಎಂ.ಎಸ್ ಜಗನ್ನಾಥ ಅವರ ಅಧ್ಯಕ್ಷತೆಯಲ್ಲಿ ಜರುಗಿತು. ಈ ಸಭೆಯನ್ನು ಉದ್ದೇಶಿಸಿ ಪಕ್ಷ ಸಂಘಟನೆ ಕುರಿತು ಮಾತನಾಡಿದ್ದರು. ಮುಂಬರುವ ದಿನಗಳಲ್ಲಿ ತಾಲೂಕಾ ಪಂಚಾಯತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ, ನಗರ ಸಭೆ ಚುನಾವಣೆಗಳಲ್ಲಿ ಲೋಕಜನಶಕ್ತಿ ಪಕ್ಷದ ಅಭ್ಯರ್ಥಿಗಳನ್ನು ಸ್ಪದ–ೆ್ ಮಾಡಲಾಗುವುದು ಎಂದು ಸಭೆಯಲ್ಲಿ ಹೇಳಿದರು. ಹಾಗೂ ಕರ್ನಾಟಕ ರಾಜ್ಯ ಲೋಕಜನಶಕ್ತಿ ಪಾರ್ಟಿಯ ಉಪಾಧ್ಯಕ್ಷರಾದ ಶ್ರೀ ನಾಗಶೆಟ್ಟಿ ಪಾಟೀಲ್ ಸುಂಕನಾಳ




ಮಾತನಾಡಿ ಪಕ್ಷದ ಸಂಸ್ಥಾಪಕರಾದ ಶ್ರೀ ರಾಮವಿಲಾಸ ಪಾಸ್ವಾನಜೀ ಅವರು ಮಾಡಿದ ಕಾರ್ಯಗಳು ಹಾಗೂ ಪ್ರಸ್ತುತ ಕೇಂದ್ರ ಸರ್ಕಾರದಲ್ಲಿ ಮಂತ್ರಿಗಳಾದ ಹಾಗೂ ಲೋಕಜನಶಕ್ತಿ ಪಾರ್ಟಿಯ ರಾಷ್ಟ್ರೀಯ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ಚಿರಾಗ ಪಾಸ್ವಾನಜೀ ಅವರ ಜನ ಬೆಂಬಲದಿಂದ ಬರುವ ಚುನಾವಣೆಯಗಳಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗಳು ವಿಜಯ ಶಾಲಿ ಆಗುತ್ತಾರೆ ಎಂದು ನುಡಿದರು.

ವೇದಿಕೆಯ ಮೇಲೆ ಉಸ್ಥಿತರಿದ್ದ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಥಾವರ ಸಿಂಗ್ ರಾಠೋಡ ಹಾಗೂ ಯುವ ಘಟಕದ ಅಧ್ಯಕ್ಷರಾದ ಕೃತಿಕಾ ಹೇಗಡೆ ಎಸ್ಸಿ.ಎಸ್ಟಿ. ಘಟಕದ ಅಧ್ಯಕ್ಷರಾದ ವಿಜಯಕುಮಾರ, ಕಾರ್ಮಿಕ ಘಟಕದ ಅಧ್ಯಕ್ಷರಾದ ವಿಜಯಕುಮಾರ ವೇದಿಕೆ ಮೇಲೆ ಉಪಸ್ಥಿತರಿದ್ದರು. ರಾಜ್ಯದ ಎಲ್ಲಾ ಜಿಲ್ಲೆ, ತಾಲೂಕಾ ಮಟ್ಟದ ಅಧ್ಯಕ್ಷರುಗಳು ಹಾಗೂ ಮುಂಚುಣಿ ಘಟಕದ

ಅಧ್ಯಕ್ಷರುಗಳು ಉಪಸ್ಥೀತರಿದ್ದರು. ಸದರಿ ಸಭೆಯಲ್ಲಿ ಬೀದರ ಜಿಲ್ಲೆಯ ಅಧ್ಯಕ್ಷರಾದ ರಾಕೇಶ ಕುಲಕರ್ಣಿ, ಉಪಾಧ್ಯಕ್ಷರಾದ ಎಂ.ಡಿ ಶಾಕೀರ, ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷರಾದ ಜಾನ್ ನಾಗೂರಕರ್, ಬೀದರ ತಾಲೂಕಾ ಅಧ್ಯಕ್ಷರಾದ ಜಗನ್ನಾಥ ಕೈಕಡೆ ಗಾದಗಿ ಹಾಗೂ ಇನ್ನಿತರು ಉಪಸ್ಥಿತರಿದ್ದರು.




Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.